ಸಂಪುಟ : Volume 13 ಸಂಚಿಕೆ : Issue 226 ಪುಟಗಳು : Pages 08 ಶುಕ್ರವಾರ 24 ಅಕ್ಟೋಬರ್ 2025 ₹2 PRGINO.120927(RNINO:KARKAN/2011/48371) BDR/054/2026-20274 www.mallammanudi.in mallammanudi@gmail.com 9448604450

ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಬಳ್ಳಾರಿ | ವಿಜಯನಗರ | ಕೊಪ್ಪಳ & ಬಾಗಲಕೋಟೆ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

'ಪ್ರೀತಿ ಇದ್ದಲ್ಲಿ ನಂಬಿಕೆ ಇರಲೇ ಬೇಕೆಂದಿಲ್ಲ ಆದರೆ ನಂಬಿಕೆ ಇದ್ದಲ್ಲಿ ಪ್ರೀತಿ ಇದ್ದೇ ಇರುವುದು
ಸಂತ ಕಬೀರ.

2. ಮುರ್ಕಿ ರೇಣುಕಾ ಭವಾನಿ ಮಂದಿರದ ಕಳಸಾರೋಹಣ | 8 ಬಿಹಾರದ ರೈಲು ಡಿಕ್ಕಿ:ನಾಲ್ವರ ಸಾವು | 4 ಪ್ರಿಯಾಂಕ ಖರ್ಗೆ ಬೆಂಬಲಕ್ಕೆ ನಾಡಿನ ಜನತೆ.

# ಮತ ಅಳಿಸಲು ಯತ್ನ

## ಆರು ಶಂಕಿತರ ಪತ್ತೆ ಹಚ್ಚಿದ ವಿಶೇಷ ತನಿಖಾ ತಂಡ

ಬೆಂಗಳೂರು:ಅ.23: 2023ರ ವಿಧಾನಸಭಾ ಚುನಾವಣೆಯಲ್ಲಿ ಆಳಂದಕ್ಷೇತ್ರದಲ್ಲಿನಡೆದಿದೆಎನ್ನಲಾದ ಮತಗಳ್ಳತನ ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡವು , ಮತಗಳನ್ನು ಅಳಿಸಲು 'ಪ್ರಯತ್ನಗಳು'ನಡೆದಿರುವುದನ್ನು ಪತ್ತೆಹಚ್ಚಿದೆ ಮತ್ತು ಹಗರಣದಲ್ಲಿ ಭಾಗಿಯಾಗಿರುವ ಕನಿಷ್ಠ ಆರು ಶಂಕಿತರನ್ನು ಪತ್ತೆಹಚ್ಚಿದೆ.

ಯಶಸ್ವಿಯಾಗಿಅಳಿಸಲಾದಪ್ರತಿ ಮತಕ್ಕೂಶಂಕಿತರಿಗೆ80ರೂ.ಗಳನ್ನು ನೀಡಲಾಗಿದೆ ಎಂದು ಅಪರಾಧ ತನಿಖಾ ಇಲಾಖೆಯ ಉನ್ನತ ಮೂಲಗಳು ಪಿಟಿಐಗೆ ತಿಳಿಸಿವೆ.

6,994 ಮತಗಳನ್ನು ಅಳಿಸಲು ವಿನಂತಿಗಳುಬಂದಿದ್ದವು.ಅವುಗಳಲ್ಲಿ ಕೆಲವನ್ನುಹೊರತುಪಡಿಸಿ,ಬಹುತೇಕ ವಿನಂತಿಗಳು ನಕಲಿಯಾಗಿದ್ದವು.

ಆಳಂದ ಕ್ಷೇತ್ರವು ಕಲಬುರಗಿ ಜಿಲ್ಲೆಯಲ್ಲಿದ್ದು,ಹಿರಿಯಕಾಂಗ್ರೆಸ್ ಶಾಸಕಬಿಆರ್ಪಾಟೀಲ್ವಿಧಾನಸಭಾ ಕ್ಷೇತ್ರವಾಗಿದೆ. ಬಿಆರ್ ಪಾಟೀಲ್ ಮತ್ತು ಸಚಿವ ಮತ್ತು ಚಿತ್ತಾಪುರ ಶಾಸಕಪ್ರಿಯಾಂಕ್ಖರ್ಗೆಅವರು ಮತಅಳಿಸುವಿಕೆಪ್ರಯತ್ನಗಳಬಗ್ಗೆ ಕರ್ನಾಟಕಮುಖ್ಯ ಚುನಾವಣಾ ಅಧಿಕಾರಿಗಳಗಮನಕ್ಕೆತಂದಿದ್ದರು.

ಪಾಟೀಲ್ ಅವರ ಪ್ರಕಾರ, ದಲಿತರುಮತ್ತುಅಲ್ಪಸಂಖ್ಯಾತರನ್ನು ಒಳಗೊಂಡ 6,994 'ಕಾಂಗ್ರೆಸ್ ಮತಗಳನ್ನು'ಅಳಿಸಲುಅರ್ಜಿಗಳನ್ನು ಸಲ್ಲಿಸಲಾಗಿತ್ತು.ಸಿಇಒಯಥಾಸ್ಥಿತಿ ಕಾಯ್ದುಕೊಳ್ಳುವಂತೆಆದೇಶಿಸಿದ ನಂತರ ಮತ ಅಳಿಸುವಿಕೆಯನ್ನು ನಿಲ್ಲಿಸಲಾಯಿತು.ಈಮತಗಳನ್ನು ಅಳಿಸಿದ್ದರೆನಾನುಖಂಡಿತವಾಗಿಯೂ ಚುನಾವಣೆಯಲ್ಲಿ ಸೋಲುತ್ತಿದ್ದೆ ಎಂದಿದ್ದಾರೆ.

ಅವರು 2023ರ ವಿಧಾನಸಭಾ ಚುನಾವಣೆಯಲ್ಲಿತಮ್ಮ ಹತ್ತಿರದ ಪ್ರತಿಸ್ಪರ್ಧಿಸುಭಾಷ್ಗುತ್ತೇದಾರ್ (ಬಿಜೆಪಿ)ವಿರುದ್ಧಸುಮಾರು10,000 ಮತಗಳಅಂತರದಿಂದಗೆದ್ದಿದ್ದರು.

ಇತ್ತೀಚೆಗೆ, ಕಾಂಗ್ರೆಸ್ ನಾಯಕ ರಾಹುಲ್ಗಾಂಧಿನವದೆಹಲಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿ 'ವೋಟ್ ಚೋರಿ' ಹೇಗೆ ನಡೆಯುತ್ತಿದೆ ಎಂಬುದನ್ನುವಿವರಿಸಿದರುಮತ್ತು ಆಳಂದ ಕ್ಷೇತ್ರದ ಉದಾಹರಣೆ ನೀಡಿದ್ದರು.

ಇದನ್ನುಗಂಭೀರವಾಗಿಪರಿಗಣಿಸಿದ ರಾಜ್ಯಸರ್ಕಾರ,'ಮತಕಳ್ಳತನ'ದ ತನಿಖೆಗಾಗಿ ಎಸ್ಐಟಿಯನ್ನು ರಚಿಸಿತು.ಸಿಐಡಿಯಲ್ಲಿಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಬಿಕೆ ಸಿಂಗ್ ಇದರ ನೇತೃತ್ವ ವಹಿಸಿದ್ದು ತನಿಖೆ ನಡೆಸಿದ್ದಾರೆ.

'ಆಳಂದದಲ್ಲಿಮತಗಳನ್ನುಅಳಿಸಲು ಪ್ರಯತ್ನಗಳು ನಡೆದಿವೆ. ನಾವು



ಸುಮಾರು30ಜನರನ್ನುಪ್ರಶ್ನಿಸಿದ್ದೇವೆ ಮತ್ತು ಅವರಲ್ಲಿಐದರಿಂದ ಆರು ಮಂದಿ ಶಂಕಿತರಾಗಿದ್ದಾರೆ.

2ನೇ ಪುಟನೋಡಿ

## ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಜನರ ಕಷ್ಟಗಳಿಗೆ ಸ್ಪಂದಿಸುವಂತಾಗಬೇಕು

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:

ಜನರ ಸೇವೆಗಾಗಿ ನೇಮಕಗೊಂಡಿರುವ ಅಧಿಕಾರಿಗಳು ಹಾಗೂಜನಪ್ರತಿನಿಧಿಗಳುಜನರಕಷ್ಟ, ನೋವು,ಬೇಡಿಕೆಗಳಿಗೆಸ್ಪಂದಿಸುವ ಮನೋಭಾವ ಹೊಂದಿರಬೇಕು ಎಂಬ ಅಭಿಪ್ರಾಯ ಸ್ಥಳೀಯರು ವ್ಯಕ್ತಪಡಿಸಿದ್ದಾರೆ.

ಪ್ರತಿದಿನ ಜನರು ನೀರು, ರಸ್ತೆ, ವಿದ್ಯುತ್, ಸ್ವಚ್ಛತೆ, ಸೇರಿದಂತೆ ಹಲವಾರು

ಮೂಲಭೂತ ಸೌಲಭ್ಯಗಳ

ಕೊರತೆಯಿಂದ ಸಂಕಷ್ಟ ಅನುಭವಿಸುತ್ತಿದ್ದಾರೆ. ಆದರೆ ಕೆಲವೊಮ್ಮೆ ಆಡಳಿತ ಯಂತ್ರದ ನಿರ್ಲಕ್ಷ್ಯದಿಂದಜನರಸಮಸ್ಯೆಗಳು ವರ್ಷಗಳವರೆಗೆಬಾಕಿಯಾಗುತ್ತವೆ.

ಜನಪ್ರತಿನಿಧಿಗಳುಜನರನಿಜವಾದ ಸಮಸ್ಯೆಗಳನ್ನುಅರ್ಥಮಾಡಿಕೊಂಡು ಅವುಗಳಿಗೆಶೀಘ್ರಪರಿಹಾರಕಲ್ಪಿಸಿದರೆ ಮಾತ್ರನಿಜವಾದಅಭಿವೃದ್ಧಿಸಾಧ್ಯ.

2ನೇ ಪುಟನೋಡಿ

## 2027ಕ್ಕೆ ಮಾನವ ಸಹಿತ ಗಗನಯಾನಕ್ಕೆ ಇಸ್ರೋ ಸಿದ್ಧತೆ




ನವದೆಹಲಿ:ಅ.23:ಚಂದ್ರಯಾನ-3 ಮೂಲಕಇಡೀವಿಶ್ವವೇಭಾರತದತ್ತ ತಿರುಗಿ ನೋಡುವಂತೆ ಮಾಡಿದ್ದ ಇಸ್ರೋಈಗಮತ್ತೊಂದುಇತಿಹಾಸ ಬರೆಯಲುಸಿದ್ಧವಾಗಿದೆ.2027ಕ್ಕೆ ಮಾನವಸಹಿತಗಗನಯಾನಕ್ಕೆಇಸ್ರೋ ಸಿದ್ಧತೆಮಾಡಿಕೊಳ್ಳಲಾಗುತ್ತಿದೆಎಂದು ಇಸ್ರೋಅಧ್ಯಕ್ಷವಿ.ನಾರಾಯಣ್ ಅವರು ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿಮಾತನಾಡಿದ ಅವರು, 2027ಕ್ಕೆ ಮಾನವ ಸಹಿತ ಗಗನಯಾನಕ್ಕೆ ಇಸ್ರೋ ಸಿದ್ಧತೆ ನಡೆಸಿದೆ. ಗಗನಯಾನಿಗಳಸುರಕ್ಷತಾ ದೃಷ್ಟಿಯಿಂದಸಾಕಷ್ಟುಮುನ್ನೆಚ್ಚರಿಕೆ ತೆಗೆದುಕೊಳ್ಳಲಾಗುತ್ತಿದೆ.ತುರ್ತು ಸಂದರ್ಭಗಳಿಂದಬಾಹ್ಯಾಕಾಶಯಾನವು ವಿಫಲಗೊಂಡರೆ,ಆಂತರಿಕ್ಷನೌಕೆಯಲ್ಲಿನ ಕ್ರೂಮಾಡ್ಯೂಲ್ನಿಂದಗಗನಯಾನಿಗಳನ್ನು ಕಾಪಾಡಬಹುದು.ಸುರಕ್ಷಿತವಾಗಿ ಪಾರುಮಾಡುವ ಕ್ರೂ ಎಸ್ಕೇಪ್ ಸಿಸ್ಟಮ್ಸೇರಿಎಲ್ಲವನ್ನೂಅತ್ಯಂತ ಎಚ್ಚರಿಕೆಯಿಂದಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.

ಭಾರತವು2035ರವೇಳೆಗೆತನ್ನದೇ ಆದ ಬಾಹ್ಯಾಕಾಶ ನಿಲ್ದಾಣವನ್ನು ಸ್ಥಾಪಿಸಲಿದೆ.ವಿಕಸಿತಭಾರತ್2047 ಅಡಿಯಲ್ಲಿಇಸ್ರೋದಿಂದಇಎಸ್ ಟಿಐಸಿ2025ಕಾನ್ಕ್ಲೇವ್ಗೆತಯಾರಿ

2ನೇ ಪುಟನೋಡಿ

## ಸರ್ಕಾರದ ಆರೋಗ್ಯ ಸೇವೆ ಸದುಪಯೋಗವಾಗಲಿ: ತುರವಿಹಾಳ



ರಾಯಚೂರುಅ23:ಸರ್ಕಾರದ ವತಿಯಿಂದಬಡವರಿಗೆಗುಣಮಟ್ಟದ ಆರೋಗ್ಯಸೇವೆಗಳನ್ನುಒದಗಿಸುವ ಸದುದ್ದೇಶದಿಂದ ಗ್ರಾಮೀಣ ಪ್ರದೇಶಗಳಲ್ಲಿ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿಯೂ ಸಹ ಶಸ್ತ್ರಚಿಕಿತ್ಸೆ ಮೂಲಕ ಹೆರಿಗೆ ಸೇವೆ,ಮುತ್ರಪಿಂಡಸಮಸ್ಯೆಯಿಂದ ಬಳಲುವವರಿಗೆಡಯಾಲಿಸೀಸ್ಸೇವೆ ನೀಡಲಾಗುತ್ತಿದ್ದು,ಸಾರ್ವಜನಿಕರುಇದರ ಸದುಪಯೋಗಪಡೆದುಕೊಳ್ಳಬೇಕೆಂದು ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗಮಂಡಳಿಅಧ್ಯಕ್ಷರು ಆಗಿರುವಮಸ್ಕಿಕ್ಷೇತ್ರದಶಾಸಕರಾದ

2ನೇ ಪುಟನೋಡಿ

### ಸಂಸದರ ನವೀಕೃತ ಕಚೇರಿ ಉದ್ಘಾಟನೆ:

## ವಿಮಾನಯಾನ ಸಚಿವರ ಅಧ್ಯಕ್ಷತೆಯಲ್ಲಿ ಅ. 30ಕ್ಕೆ ಸಭೆ:ರಾಧಾಕೃಷ್ಣ ದೊಡ್ಡಮನಿ

ಕಲಬುರಗಿ,ಅ.23: ಕೇಂದ್ರದ ನಾಗರಿಕವಿಮಾನಯಾನಸಚಿವರ ಅಧ್ಯಕ್ಷತೆಯಲ್ಲಿಇದೇಅಕ್ಟೋಬರ್ 30ಕ್ಕೆ ಬೆಂಗಳೂರಿನಲ್ಲಿ ರಾಜ್ಯದ ಸಂಸದರಸಭೆನಡೆಯಲಿದ್ದು,ಅಲ್ಲಿ ಕಲಬುರಗಿವಿಮಾನನಿಲ್ದಾಣದಿಂದ ಸ್ಥಗಿತಗೊಂಡಿರುವ ವಿಮಾನಗಳ ಕಾರ್ಯಾಚರಣೆಮರುಆರಂಭಿಸಲು ಪ್ರಸ್ತಾಪಮಾಡಲಾಗುವುದುಎಂದು ಸಂಸದ ರಾಧಾಕೃಷ್ಣ ದೊಡ್ಡಮನಿ ಹೇಳಿದರು.

ಗುರುವಾರಇಲ್ಲಿನಜಿಲ್ಲಾಧಿಕಾರಿಗಳ ಕಚೇರಿಅವರಣದಲ್ಲಿನವೀಕರಣಗೊಂಡ ಕಲಬುರಗಿ ಲೋಕಸಭಾ ಸದಸ್ಯರ ನವೀಕೃತಕಚೇರಿಯಉದ್ಘಾಟನೆಬಳಿಕ ಸುದ್ದಿಗಾರರೊಂದಿಗೆಮಾತನಾಡಿದ ಅವರು,ಏಕಾಏಕಿಇಲ್ಲಿವಿಮಾನಗಳ ಸಂಚಾರ ಸ್ಥಗಿತಗೊಳಿಸಿದ್ದರಿಂದ ಪ್ರಯಾಣಿಕರಿಗೆ ತುಂಬಾ ತೊಂದರೆಯಾಗಿದ್ದು, ಈ ಬಗ್ಗೆ ಸಭೆಯಲ್ಲಿ ಪ್ರಶ್ನಿಸಲಾಗುವುದು. ಇನ್ನು ಈಗಾಗಲೆ ಈ ಕುರಿತು ಕೇಂದ್ರಕ್ಕೆ ಪತ್ರ ಬರೆದು ಗಮನ ಸೆಳೆಯಲಾಗಿದೆ ಎಂದರು.

2ನೇ ಪುಟನೋಡಿ

## ಇಂಡಿಯಾ ಬಣದ ಸಿಎಂ ಅಭ್ಯರ್ಥಿಯಾಗಿ ತೇಜಸ್ವಿಯಾದವ್ ಘೋಷಣೆ




ಪಾಟ್ನಾ:ಅ.23:ಬಿಹಾರವಿಧಾನಸಭಾ ಚುನಾವಣೆಗೆ ಆರ್ಜೆಡಿ ನಾಯಕ ಮತ್ತುಮಾಜಿಉಪಮುಖ್ಯಮಂತ್ರಿ ತೇಜಸ್ವಿ ಯಾದವ್ ಅವರನ್ನು ಮುಖ್ಯಮಂತ್ರಿ ಅಭ್ಯರ್ಥಿಯಾಗಿ ವಿರೋಧಪಕ್ಷಗಳಇಂಡಿಯಾಬಣ ಗುರುವಾರ ಘೋಷಿಸಿದೆ.

ಎಲ್ಲ ಪಕ್ಷಗಳ ಪ್ರತಿನಿಧಿಗಳು ಭಾಗವಹಿಸಿದ್ದಪತ್ರಿಕಾಗೋಷ್ಠಿಯಲ್ಲಿ ಹಿರಿಯಕಾಂಗ್ರೆಸ್ನಾಯಕಅಶೋಕ್ ಗೆಹ್ಲೋಟ್ಈಘೋಷಣೆಮಾಡಿದರು. ಈ ನಿರ್ಧಾರವನ್ನು ತಮ್ಮ ಪಕ್ಷದ ನಾಯಕರಾಹುಲ್ಗಾಂಧಿಮತ್ತು ರಾಷ್ಟ್ರೀಯಅಧ್ಯಕ್ಷಮಲ್ಲಿಕಾರ್ಜುನ

2ನೇ ಪುಟನೋಡಿ

## ಆರ್.ಎಸ್.ಎಸ್.ನಿಷೇಧಿಸಬೇಕೆಂದು ಹೇಳಿಲ್ಲ-ಸಚಿವ ತಿಮ್ಮಾಪೂರ ಸಂಘಟನೆಗಳು ಧರ್ಮದ ಹೆಸರಿನಲ್ಲಿ ರಾಜಕಾರಣ ಮಾಡಬಾರದು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.23-ಅಂಧಶ್ರದ್ಧೆ, ದ್ವೇಷವನ್ನು ಹುಟ್ಟಿಸುವ ಹಾಗೂ ಧರ್ಮದ ಹೆಸರಿನಲ್ಲಿ ರಾಜ ಕಾರಣ ಮಾಡುವ ಯಾವುದೇ ಸಂಘಟನೆಗಳಿದ್ದರೂಅವುಗಳನ್ನು ನಿಷೇಧಿಸಬೇಕುಎಂದುಅಬಕಾರಿ ಹಾಗೂಜಿಲ್ಲಾಉಸ್ತುವಾರಿಸಚಿವ ಆರ್.ಬಿ.ತಿಮ್ಮಾಪುರಹೇಳಿದರು.




ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿಮಾತನಾಡಿದ ಅವರು,ಯಾವುದೇಪಕ್ಷಗಳುಇಲ್ಲವೇ ಸಂಘಟನೆಗಳು ಧರ್ಮವನ್ನು ದುರುಪಯೋಗಪಡಿಸಿಕೊಳ್ಳಬಾರದು. ಧರ್ಮದಹೆಸರಿನಲ್ಲಿರಾಜಕಾರಣ ಮಾಡುವುದರಿಂದಅದುಸಮಾಜವನ್ನು ವಿಭಜನೆ ಮಾಡುತ್ತದೆ. ಹೀಗಾಗಿ ಇಂತಹಯಾವುದೇಸಂಘಟನೆಯಿರಲಿ ಅದನ್ನು ನಿಷೇಧಿಸುವುದು ಸೂಕ್ತ ಎಂದರು.ಸಚಿವಪ್ರಿಯಾಂಕಖರ್ಗೆ ಹೇಳಿಕೆಯನ್ನುಸಮರ್ಥಿಸಿದಸಚಿವ ತಿಮ್ಮಾಪೂರ,ಅವರುಆರ್.ಎಸ್. ಎಸ್ನಿಷೇಧಿಸಬೇಕುಎಂದುಹೇಳಿಲ್ಲ. ಸಂಘಟನೆಯಚಟುವಟಿಕೆಗಳನ್ನು ಸರಕಾರದಜಾಗೆಗಳಲ್ಲಿನಡೆಸುವಾಗ ಅನುಮತಿ ಪಡೆಯಬೇಕು ಎಂದಿದ್ದಾರೆ. ಜಗದೀಶ ಶೆಟ್ಟರ ಮುಖ್ಯಮಂತ್ರಿಯಾಗಿದ್ದಾಗಲೇಈ ನಿಯಮರೂಪಿಸಿದ್ದು,ಈಗನಮ್ಮ ಸರಕಾರಅದನ್ನೇಮುಂದುವರೆಸುತ್ತಿದೆ ಎಂದು ಹೇಳಿದರು. ಜಿಲ್ಲೆಯಲ್ಲಿ ಮಳೆಯಿಂದ ಹಾನಿಗೊಳಗಾದ ರೈತರಿಗೆಪರಿಹಾರನೀಡುವಕಾರ್ಯ ಪ್ರಗತಿಯಲ್ಲಿದೆ. ಸರ್ಕಾರ ಎಲ್ಲ ಜನಾಂಗದವರಶೈಕ್ಷಣಿಕ,ಆರ್ಥಿಕ ಹಾಗೂಸಾಮಾಜಿಕಸಮೀಕ್ಷೆನಡೆಸಿ ತೊಂದರೆಯಲ್ಲಿರುವಪ್ರತಿಯೊಬ್ಬರಿಗೂ ಸಹಾಯಮಾಡುವಗುರಿಹೊಂದಿದೆ ಎಂದಸಚಿವಆರ್.ಬಿ.ತಿಮ್ಮಾಪೂರ, ಹಲವು

2ನೇ ಪುಟನೋಡಿ

## ರಾಠೋಡ ವಿರುದ್ಧ ಮತ್ತೊಂದು ಪ್ರಕರಣ ದಾಖಲು

ಕಲಬುರಗಿ:ಅ.23:ನಿಮ್ಮ ಮನೆಗೂ ರಾಷ್ಟ್ರೀಯಸ್ವಯಂಸೇವಕಸಂಘದವರು ಬರಬಹುದು ಎಂಬ ಹೇಳಿಕೆಯನ್ನು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್,ಐಟಿಬಿಟಿಮತ್ತುಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆಜೀವಬೆದರಿಕೆಹಾಕಿದ್ದಾರೆಎಂದು ಸಾಮಾಜಿಕಕಾರ್ಯಕರ್ತ ಸಿದ್ಧಾರೂಢ ತಂದೆಮಚೇಂದ್ರಕಾಂಬಳೆಅವರುಸಲ್ಲಿಸಿದ ದೂರುಬ್ರಹ್ಮಪುರಪೋಲಿಸ್ಠಾಣೆಯಲ್ಲಿ ಬಿಜೆಪಿಮುಖಂಡಮಣಿಕಂಠರಾಠೋಡ ವಿರುದ್ಧಪ್ರಕರಣದಾಖಲಾಗಿದೆ.ಬಿಜೆಪಿ ಮುಖಂಡ ಮಣಿಕಂಠ ರಾಠೋಡ ಅವರುಸುದ್ದಿಗೋಷ್ಠಿಯಲ್ಲಿಮಾತನಾಡಿ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೋಗಳನ್ನು ಹರಿಬಿಟ್ಟು ಸಚಿವ ಪ್ರಿಯಾಂಕ್ ಖರ್ಗೆ ಅವರ ವಿರುದ್ಧ ಸುಳ್ಳುಆರೋಪಗಳನ್ನುಮಾಡಿದ್ದಾರೆ.

## ವಿದ್ಯುತ್ ಅವಘಡ:ಗ್ರಾಮ್ ಒನ್ ಕೇಂದ್ರಕ್ಕೆ ಹಾನಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.23-ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದಾಗಿ ತಾಲೂಕಿನ ರಾಂಪುರ ಗ್ರಾಮದ ಕರ್ನಾಟಕಗ್ರಾಮ್ಒನ್ಕೇಂದ್ರಕ್ಕೆ ಬೆಂಕಿ ತಗುಲಿ 3.85 ಲಕ್ಷರೂ.ಗಳ ಹಾನಿಸಂಭವಿಸಿದಘಟನೆಬುಧವಾರ ರಾತ್ರಿ ನಡೆದಿದೆ.

ಬುಧವಾರ ಗಾಳಿ, ಮಳೆಗೆ ಮರವೊಂದುವಿದ್ಯುತ್ತಂತಿಯ ಮೇಲೆಮುರಿದುಬಿದ್ದಪರಿಣಾಮವಾಗಿ ಸಂಗಮೇಶಶಿವಪ್ಪಕುರಿಎಂಬವರ ಗ್ರಾಮ್ ಒನ್ ಕೇಂದ್ರಕ್ಕೆವಿದ್ಯುತ್ ಪಸರಿಸಿ9ಕಂಪ್ಯೂಟರಗಳುಸಂಪೂರ್ಣ ಹಾನಿಗೊಳಗಾಗಿವೆ.

5 ದೊಡ್ಡಕಂಪ್ಯೂಟರಗಳು, 2 ಝುರಾಕ್ಸ್ ಮಷಿನ್, 2 ಕಲರ್ ಪ್ರಿಂಟರ್,ಫ್ಯಾನ್,ಯುಪಿಎಸ್ಸೇರಿ ಕೇಂದ್ರದಲ್ಲಿನಟೇಬಲ್ಮತ್ತಿತರ ವಸ್ತುಗಳೆಲ್ಲವೂಸಂಪೂರ್ಣಸುಟ್ಟು ಕರಕಲಾಗಿದ್ದು,ಅಂದಾಜು3.85 ಲಕ್ಷರೂ.ಗಳ ಹಾನಿ ಸಂಭವಿಸಿದೆ ಎಂದು ಕೇಂದ್ರದ ಮಾಲಿಕ ಸಂಗಮೇಶ ಕುರಿ ಪೋಲಿಸರಿಗೆ ನೀಡಿದ ದೂರಿನಲ್ಲಿತಿಳಿಸಿದ್ದಾರೆ.

ಸ್ಥಳಕ್ಕೆಬಾಗಲಕೋಟೆಗ್ರಾಮೀಣ ಪಿಎಸ್ಐ ಗಿರೀಶ ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಮನೆ ಬೀಗ ಮುರಿದು ಚಿನ್ನಾಭರಣ, ಹಣ ಕಳ್ಳತನ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.23:ಪಟ್ಟಣದಸಿ.ಬೀ ಕಾಲೇಜುಹತ್ತಿರದಚನ್ನಬಸವೇಶ್ವರ ಕಾಲೊನಿಹತ್ತಿರದಮನೆಯಬೀಗ ಮುರಿದುಮನೆಯಲ್ಲಿದ್ದಚಿನ್ನಾಭರಣ ಮತ್ತು ನಗದು ಹಣಕಳ್ಳತನವಾದ ಘಟನೆಮಂಗಳವಾರರಾತ್ರಿನಡೆದಿದೆ. ಮೂಲತಃಕಮಲನಗರ್ತಾಲೂಕಿನ ಹೊಳಸಮುದ್ರಗ್ರಾಮದವರಾದ ದೇವೇಂದ್ರ, ಸಿರಗೆರೆ ಯಾವರು ಪಟ್ಟಣದಸಿ.ಬೀಕಾಲೇಜಿನಹತ್ತಿರದ ಚನ್ನಬಸವೇಶ್ವರ ಕಾಲೊನಿಯಲ್ಲಿ ನೂತನಮನೆಕಟ್ಟಿದ್ದಾರೆ.ದೀಪಾವಳಿ ಹಬ್ಬದ ನಿಮಿತ್ಯ ತಮ್ಮ ಸ್ವಂತ ಗ್ರಾಮವಾದ ಹೊಳ್ಸ ಮುದ್ರಕ್ಕೆ ಕುಟುಂಬದ ಸಮೇತ ಹೋದಾಗ ಭಾಲ್ಕಿಪಟ್ಟಣದಲ್ಲಿರುವಮನೆಕಳ್ಳತನ ವಾಗಿರುವುದಾಗಿತಿಳಿದುಬಂದಿದೆ. ಕಳ್ಳರು ಮನೆಯ ಬೀಗ ಮುರಿದು ಮಲಗುವ ಕೋಣೆಯಲ್ಲಿರುವ ಕಬ್ಬಿಣ ಅಲ್ಮರೆಯಲ್ಲಿ ಇಟ್ಟಿರುವ 10 ಗ್ರಾಂ ಬಂಗಾರ, 250ಗ್ರಾಂ ಬೆಳ್ಳಿ ಆಭರಣಗಳು, 25 ಸಾವಿರ ರೂಪಾಯಿನಗದುಹಣಸೇರಿದಂತೆ ಸುಮಾರು 2 ಲಕ್ಷ ರು.ಮೌಲ್ಯದ ಸಾಮಾನುಗಳನ್ನು ದೋಚಿದ್ದಾರೆ ಎಂದುದೇವೇಂದ್ರಸಿರಗಿರೆನೀಡಿರುವ ದೂರಿನಮೇರೆಗೆನಗರಪೊಲೀಸ್ ಠಾಣೆಯಲ್ಲಿಪ್ರಕರಣದಾಖಲಾಗಿದೆ.

2ನೇ ಪುಟನೋಡಿ

## ಸಂಸತ್‌ನಲ್ಲಿ ಕಿತ್ತೂರು ರಾಣಿ ಚೆನ್ನಮ್ಮನವರ 201ನೇ ವಿಜಯೋತ್ಸವ ಹಾಗೂ ಜನ್ಮದಿನೋತ್ಸವ ಆಚರಣೆ

ನವದೆಹಲಿ:ಅ 23:ಇಂದು ನವದೆಹಲಿಯ ಸಂಸತ್ ಆವರಣದಪ್ರೇರಣಾಸ್ಥಳದಲ್ಲಿತುಮಕೂರುಲೋಕಸಭಾ ಸದಸ್ಯರು ಹಾಗೂ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಖಾತೆಯ ಸಚಿವರಾದ ವಿ. ಸೋಮಣ್ಣ ಅವರ ನೇತೃತ್ವದಲ್ಲಿಕನ್ನಡನಾಡಿನವೀರವನಿತೆಕಿತ್ತೂರುರಾಣಿ ಚೆನ್ನಮ್ಮನವರ 201ನೇ ವಿಜಯೋತ್ಸವ ಹಾಗೂ ಜನ್ಮದಿನೋತ್ಸವವನ್ನು ಆಚರಿಸಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಾಣಿ ಚೆನ್ನಮ್ಮನವರಪುತ್ಥಳಿಯನ್ನುಸಂಸತ್ತಿನಆವರಣದಲ್ಲಿ 2007ರಲ್ಲಿಸ್ಥಾಪಿಸಲಾಗಿದೆ.ಕಳೆದವರ್ಷಪ್ರಧಾನಮಂತ್ರಿಗಳಾದ ನರೇಂದ್ರಮೋದಿಯವರಬೆಂಬಲಮತ್ತುಲೋಕಸಭಾ ಅಧ್ಯಕ್ಷರಾದ ಓಂ ಬಿರ್ಲಾ ಅವರ ಸಹಕಾರದಿಂದ 200ನೇ ರಾಣಿ ಚೆನ್ನಮ್ಮನವರ ವಿಜಯೋತ್ಸವ ಮತ್ತು ಜನ್ಮದಿನೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಗಿತ್ತು. ಅದೇ ರೀತಿ ಈ ವರ್ಷವೂ ಸಹ ರಾಣಿ ಚೆನ್ನಮ್ಮನವರ

2ನೇ ಪುಟನೋಡಿ

**ಆಸ್ಟ್ರೇಲಿಯಾಗೆ ಸರಣಿ:ಅಡಿಲೇಡ್‌ನಲ್ಲಿ ಭಾರತದ ವಿರುದ್ಧ ನಡೆದ 3 ಪಂದ್ಯಗಳ 2ನೇ ಏಕದಿನ ಪಂದ್ಯದಲ್ಲೂ ಆಸ್ಟ್ರೇಲಿಯಾ ತಂಡ ಭರ್ಜರಿ ಜಯ ದಾಖಲಿಸಿ ಸರಣಿ 2-0 ಅಂತರದಲ್ಲಿ ಗೆದ್ದಿದೆ.**

# ಬುದ್ಧನ ಮಾರ್ಗದಲ್ಲಿ ನಾವೆಲ್ಲರೂ ಸಾಗೋಣ.



ಮಲ್ಲಮ್ಮ ನುಡಿ ವಾರ್ತೆ

ಬೀದರ:ಅ. 23– ಬುದ್ಧನ ಮಾರ್ಗದಲ್ಲಿ ನಾವೆಲ್ಲರೂ ಸಾಗೋಣ ಎಂದು ಹುಲಸೂರ ತಹಸಿಲ್ದಾರರಾದ ಶಿವಾನಂದ ಮೇತ್ರೆ ತಿಳಿಸಿದರು. ಬೀದರ ನೌಬಾದ ಶ್ರೀ ರಾಘವೇಂದ್ರ ಕಾಲೋನಿಯ ನಿವೇದಿತಾ ಹೂಗಾರ ಟ್ರೈನರ್ ಅಕಾಡೆಮಿ ಸಭಾಂಗಣದಲ್ಲಿ ಮಹಾತ್ಮಾ ಜ್ಯೋತಿಬಾ ಫುಲೆ ಸಾಹಿತ್ಯ ಮತ್ತು ಸಂಸ್ಕೃತಿಕ ಸಂಘ ಸಂಸ್ಥೆ ವತಿಯಿಂದ ಹಮ್ಮಿಕೊಂಡ ಧ್ಯಾನ ಹಾಗೂ ಬುದ್ಧ ಮತ್ತು ಧಮ್ಮ ವಿಚಾರ ಸಂಕಿರಣ ಜಾನಪದ ಸಂಭ್ರಮ ಮತ್ತು ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿ ಇಂತಹ ವೈಚಾರಿಕ ಸಮಾರಂಭಕ್ಕೆ ಎಲ್ಲರೂ ಪ್ರೋತ್ಸಾಹಿಸಬೇಕು ಆದರೆ ಇಲ್ಲಿ ಪ್ರೇಕ್ಷಕರ ಸಂಖ್ಯೆ ಕಡಿಮೆಯಾಗಿದೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದರು. ಹಿರಿಯ ಸಾಹಿತಿ ಡಾ. ಕಾಶಿನಾಥ್ ಚಲ್ವಾ ಉದ್ಘಾಟಿಸಿ ಬುದ್ಧ ಮತ್ತು ಧಮ್ಮ ಎಂಬ ವಿಚಾರ ಕುರಿತು ಮಾತನಾಡಿದ ಅವರು ಇದರಲ್ಲಿ ಮೂಢನಂಬಿಕೆ ಇಲ್ಲ ಅಲ್ಲದೆ ಬುದ್ಧ ನನ್ನನ್ನು ಪೂಜಿಸಬೇಡಿ ದೇವರಲ್ಲಿ ನಾನೊಬ್ಬ ಮಾರ್ಗದರ್ಶಿ ಎಂದರು ಮಾಸ್ಟರ್ ಟ್ರೈನರ್ಸ್ ಶಿಕ್ಷಕಿಯಾದ ಶ್ರೀದೇವಿ ಹೂಗಾರ ಮಾತನಾಡಿ ಧ್ಯಾನದಿಂದ ಬಹಳಷ್ಟು ಲಾಭವಿದೆ. ಇಂತಹ ಸಮಾರಂಭಕ್ಕೆ ಕಡಿಮೆ ಜನರು ಭಾಗವಹಿಸಿದಕ್ಕೆ ಖೇದ ವ್ಯಕ್ತಪಡಿಸಿದರು. ಬಸವಕಲ್ಯಾಣದ ಕೇಂದ್ರೀಯ ಶಿಕ್ಷಕರಾದ ಉಷಾ ಯಾದವ್ ರಾವ ಗಾಯಕವಾಡ ಸಹ ಮಾತನಾಡಿ ಬುದ್ಧ ಮತ್ತು ಧಮ್ಮ ಎಂಬ ಗ್ರಂಥದ ಕುರಿತು ಪಂಚಶೀಲ ಪಾಲನೆ ಮಾಡಿ ಎಂದರು. ದಿವ್ಯ ಸಾನಿಧ್ಯವನ್ನು ಬಂತೇಜಿ ವಹಿಸಿದ್ದರು.ಅನೇಕ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಭರತ್ ಕಾಂಬಳೆ ಧನರಾಜ್ ಮುಸ್ತಪೂರೆ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಪಡೆದ ಶಿಕ್ಷಕರಾದ ನಾಗಪ್ಪಾ ನಿಣ್ಣೆ. ಶಕ್ತಿಕಾಂತ ಬಾವಿದೊಡ್ಡಿ ಪ್ರದೀಪ ನಾಟೇಕರ.ಪ್ರಕಾಶ ರಾವಣ. ರಾಜಕುಮಾರ ಜ್ಯಾಂತಿಕರ್. ಪ್ರತಿಭಾ ಪುರಸ್ಕಾರ ಪಡೆದ ಪ್ರಸನ್ನಕುಮಾರಿ ಪ್ರಕೃತಿ ಅಶ್ವಿನಿ ಸೇರಿದಂತೆ ಅನೇಕ ರನ್ನು ಸನ್ಮಾನಿಸಲಾಯಿತು. ಸಾಹಿತಿ ಶರಣಬಸಪ್ಪಾ ಫುಲೆ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಕಲ್ಲಪ ಕೈವಾರೆ. ವರ್ಷಾ ಜಾಬಾ ಸೇರಿದಂತೆ ಅನೇಕರು ಭಾಗವಹಿಸಿದ್ದರು. ಸಾಂಸ್ಕೃತಿಕ ಕಾರ್ಯಕ್ರಮ ಕಲಾವಿದರಾದ ಪ್ರೇಮಲತಾ ದೊಡ್ಡಿ. ಜಗದೇವಿ ಫುಲೆ ನಡೆಸಿ ಕೊಟ್ಟರು. ರಾಜಕುಮಾರ ಕರುಣಾ ಸಾಗರ ನಿರ್ವಹಿಸಿದರು.

# ಪಟಾಕಿ ಅವಘಡ: 250ಕ್ಕೂ ಹೆಚ್ಚು ಮಂದಿಗೆ ಗಾಯ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಅ.23–ಬೆಳಕಿನ ಹಬ್ಬ ದೀಪಾವಳಿ ಸಂಭ್ರಮದಲ್ಲಿ ಪಟಾಕಿ ಸಿಡಿಸುವ ವೇಳೆ ಕಣ್ಣಿಗೆ ಹಾನಿ ಮಾಡಿಕೊಂಡವರು ಸೇರಿ 250 ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ.

ನಗರದ ವಿವಿಧ ಕಣ್ಣಿನ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದಿದ್ದಾರೆ. ಪಟಾಕಿ ಸಿಡಿಸುವವರಿಗಿಂತ ನೋಡುತ್ತಾ ನಿಂತವರು ಮತ್ತು ದಾರಿಯಲ್ಲಿ ಹೋಗುವವರಿಗೆ ಪಟಾಕಿ ಕಿಡಿ ತಗುಲಿ ಗಾಯಗೊಂಡಿದ್ದಾರೆ.

ನಾರಾಯಣ ನೇತ್ರಾಲಯದಲ್ಲಿ 100 ಜನರಿಗೆ ಚಿಕಿತ್ಸೆ ನೀಡಲಾಗಿದ್ದು, ಅದರಲ್ಲಿ 50 ಕ್ಕೂ ಮಕ್ಕಳಿದ್ದಾರೆ. 10 ಮಂದಿಗೆ ಶಸ್ತ್ರಚಿಕಿತ್ಸೆಯ ಅಗತ್ಯವಿದೆ. ಉಳಿದವರು ಹೊರ ರೋಗಿಗಳಾಗಿ ಮತ್ತು ಒಳ ರೋಗಿಗಳಾಗಿ ಚಿಕಿತ್ಸೆ ಪಡೆದಿದ್ದಾರೆ. 100 ಜನರಲ್ಲಿ 50 ಜನರು ತಾವೇ ಪಟಾಕಿ ಸಿಡಿಸುವಾಗ ಗಾಯಗೊಂಡಿದ್ದಾರೆ.

ಉಳಿದವರು ಬೇರೆಯವರು ಸಿಡಿಸಿದ ಪಟಾಕಿ ಕಿಡಿ ಸಿಡಿದು ಗಾಯಗೊಂಡಿದ್ದಾರೆ. ನಾರಾಯಣ ನೇತ್ರಾಲಯದಲ್ಲಿ 93 ಮಂದಿ ಚಿಕಿತ್ಸೆಗೆ ನೀಡಲಾಗಿದ್ದು, ಮಿಂಟೋ ಕಣ್ಣಿನ ಆಸ್ಪತ್ರೆಯಲ್ಲಿ 30 ಮಂದಿ ಚಿಕಿತ್ಸೆ ಪಡೆದಿದ್ದಾರೆ. ಶಂಕರ ಕಣ್ಣಿನ ಆಸ್ಪತ್ರೆಯಲ್ಲಿ 20 ಪ್ರಕರಣ ದಾಖಲಾಗಿದ್ರೆ, ಪ್ರಭಾ ಕಣ್ಣಿನ ಆಸ್ಪತ್ರೆಯಲ್ಲಿ 10 ಗಾಯಾಳುಗಳಿಗೆ ಚಿಕಿತ್ಸೆ ನೀಡಲಾಗಿದ್ದು. ಅಗರ್ವಾಲ್ ಕಣ್ಣಿನ ಆಸ್ಪತ್ರೆಯಲ್ಲಿ 10 ಚಿಕಿತ್ಸೆ ಪಡೆದು ಮನೆಗೆ ಮರಳಿದ್ದಾರೆ.

ಪಟಾಕಿ ಸಿಡಿತದಿಂದ 20 ವರ್ಷದ ಯುವಕ ಶಾಶ್ವತ ದೃಷ್ಟಿ ಸಮಸ್ಯೆಗೆ ತುತ್ತಾಗಿದ್ದಾನೆ. ಪಟಾಕಿ ಸಿಡಿದು ಕಣ್ಣಿನ ದೃಷ್ಟಿ ಸಂಪೂರ್ಣ ಹಾನಿ ಆಗಿದೆ. ಬಿಹಾರ ಮೂಲದ ಯುವಕ ನಗರ ಅಕ್ಕಿಪೇಟೆಯಲ್ಲಿ ವಾಸವಾಗಿದ್ದು, ಇಡೀ ಕುಟುಂಬ ಈತನ ದುಡಿಮೆ ಮೇಲೆ ಅವಲಂಬನೆ ಆಗಿದೆ. ಸದ್ಯ ಮಿಂಟೋ ಆಸ್ಪತ್ರೆಯಲ್ಲಿ ಯುವಕನಿಗೆ ಚಿಕಿತ್ಸೆ ನೀಡಲಾಗುತ್ತಿದೆ.

ರಸ್ತೆಯಲ್ಲಿ ನಡೆದಕೊಂಡು ಹೋಗುತ್ತಿದ್ದ 67 ವರ್ಷದ ವಿದೇಶಿ ವ್ಯಕ್ತಿಯ ಕಣ್ಣಿಗೆ ಪಟಾಕಿಯ ಕಿಡಿ ಕಣ್ಣಿಗೆ ತಾಗಿ ಗಾಯಗೊಂಡಿದ್ದಾರೆ. ಅವರ ಕಣ್ಣಿನ ರೆಟಿನಾ ಪರೀಕ್ಷೆ ನಡೆಸಲು ಸೂಚಿಸಲಾಗಿದೆ. ಮತ್ತೊಂದು ಪ್ರಕರಣದಲ್ಲಿ ಹತ್ತು ವರ್ಷದ ಬಾಲಕ ಪಟಾಕಿ ಹಚ್ಚುವಾಗ ಕಿಡಿ ಸಿಡಿತದಿಂದ ಅವರ ಕಣ್ಣಿನ ರೆಪ್ಪೆ, ಕೂದಲು ಸುಟ್ಟಿದ್ದು, ಕಾರ್ನಿಯಾಗೆ ಪಟಾಕಿ ಕಣಗಳು ಸೇರಿ ಹಾನಿಯಾಗಿದೆ.

**ಬಾಲಕನ ಕಣ್ಣಿಗೆ ತೀವ್ರ ಗಾಯ:**

ಪಟಾಕಿ ಸಿಡಿದು 13 ವರ್ಷದ ಬಾಲಕನ ಕಣ್ಣಿಗೆ ತೀವ್ರ ಗಾಯ ಆಗಿದೆ. ಬಾಲಕನಿಗೆ ಶೇಕಡಾ 70 ರಷ್ಟು ವಿಷನ್ ಸಮಸ್ಯೆ ಆಗಿದ್ದು, ಬಾಲಕನ ಕಣ್ಣಿಗೆ ಸರ್ಜರಿ ಅಗತ್ಯ ಎಂದು ವೈದ್ಯರು ಹೇಳಿದ್ದಾರೆ. 6ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿ, ಸದ್ಯ ಪ್ರಭಾ ಕಣ್ಣಿನ ಆಸ್ಪತ್ರೆಯಲ್ಲಿ ದಾಖಲಾಗಿದ್ದಾನೆ.

**ಸುಟ್ಟ ಗಾಯ ಹೆಚ್ಚು:**

ಪಟಾಕಿ ಸಿಡಿಸುವಾಗ ಹಾಗೂ ಬೇರೆಯವರು ಸಿಡಿಸಿದ ಪಟಾಕಿಗಳಿಂದ ನೂರಕ್ಕೂ ಮಂದಿ ಮುಖ ಕೈ ಕಾಲುಗಳಿಗೆ ಸುಟ್ಟ ಗಾಯಗಳಾಗಿವೆ.

ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಯಲ್ಲಿ ಹಾಗೂ ಹೆಚ್ಚಿನ ಗಾಯಗೊಂಡವರನ್ನು ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ,ಬಹುತೇಕ ಮಂದಿ ಚಿಕಿತ್ಸೆ ಪಡೆದು ಮನೆಗೆ ಮರಳಿದ್ದಾರೆ.

# ಶ್ರೀ ಪಾರ್ವತಿ ಪರಮೇಶ್ವರ ಕಲ್ಯಾಣ ಮಂಟಪ ನಿರ್ಮಾಣವಾಗಲಿ:ರಾಜಶೇಖರ ಪಾಟೀಲ್





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಶ್ರೀಪಾರ್ವತಿಪರಮೇಶ್ವರ್ ದೇವಾಲಯ ಪುರಾತನವಾಗಿದು ಕಳೆದ 20 ವರ್ಷಗಳಿಂದ ದೇವಸ್ಥಾನ ಜೀರ್ಣೋದ್ಧಾರ ಮಾಡಿ ಗ್ರಾಮದ ಯುವಕರು ಹಿರಿಯರು ಜಾತ್ರೆ ಆರಂಭಿಸಿದ್ದು ಸಂತೋಷದ ಸಂಗತಿ. ಜಾತ್ರೆ ಆರಂಭವಾಗಿದಾಗಿನಿಂದ ತಪ್ಪದೇ ಜಾತ್ರಾ ಮಹೋತ್ಸವಕ್ಕೆ ಆಗಮಿಸಿ ದೇವರ ದರ್ಶನ ಪಡೆಯುತ್ತಿದ್ದೇನೆ. ಇಲ್ಲಿ ಭಕ್ತರ ಸಂಖ್ಯೆ ವರ್ಷ ವರ್ಷ ಹೆಚ್ಚಾಗುತ್ತಿದೆ. ನನ್ನ ಅಧಿಕಾರ ಅವಧಿಯಲ್ಲಿ ಮುಸ್ತರಿ ಗ್ರಾಮದ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದ್ದೇನೆ. ದೇವಾಲಯಕ್ಕೆ ಬರಲು ಸುಮಾರು 45 ಲಕ್ಷ ರೂಪಾಯಿ ವೆಚ್ಚದಲ್ಲಿ ಸಿಸಿ ರಸ್ತೆ ನಿರ್ಮಾಣ ಮಾಡಿಸಿದ್ದೇನೆ ಎಂದು ತಿಳಿಸಿದರು. ಶಾಸಕ ಡಾ. ಸಿದ್ದು ಪಾಟೀಲ್ ಮಾತನಾಡಿ, ದೇವಾಲಯದ ಆವರಣದಲ್ಲಿ ಸಮುದಾಯ ಭವನ ನಿರ್ಮಾಣ ಮಾಡಲು 20 ಲಕ್ಷ ರೂಪಾಯಿ ಅನುದಾನ ನೀಡುತ್ತೇನೆ ಎಂದು ಭರವಸೆ ನೀಡಿದರು. ಮುಸ್ತರಿ ಗ್ರಾಮದ ಸರ್ವ ಜನಾಂಗದ ಓಣಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಶ್ರಮಿಸುವುದಾಗಿ ತಿಳಿಸಿದರು. ಕಾರ್ಯಕ್ರಮದ ದಿವ್ಯ ಸಾನಿಧ್ಯ ಬಾಲಯೋಗಿ ಅಭಿನವ ಶರಣ ಶಂಕರಲಿಂಗ ಮಹಾರಾಜರು ವಹಿಸಿ ಆಶೀರ್ವಚನ ನೀಡಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷ ಸಿದ್ದಲಿಂಗ ಅಡಕಾಯಿ, ಚಿಟಗುಪ್ಪ ಪುರಸಭೆ ಅಧ್ಯಕ್ಷ ದಿಲೀಪಕುಮಾರ್ ಬಗ್ದಲಕರ್, ಉಪಾಧ್ಯಕ್ಷ ನಸೀರ್ ಖಾನ್, ದೇವಸ್ಥಾನ ಸಮಿತಿ ಅಧ್ಯಕ್ಷ ಸಿ.ಎಂ.ಪಾಟೀಲ್, ಉಪಾಧ್ಯಕ್ಷ ಈರಣ್ಣ ತುಗಾಂವ, ಪಿಎಸ್ಐ ಬಸಲಿಂಗಪ್ಪ ಗೋಧಿಹಾಳ, ವೈಜಿನಾಥ ಪಾಟೀಲ್, ಧನಶೆಟ್ಟಿ ಬಿರಾದಾರ್, ಶ್ರೀಶೈಲ ಸಾದಾ, ರಾಜದೀಪ್ ಪಾಟೀಲ್, ಸಿದ್ದು ತಂಗಾ, ಮಾಲ್ಲಯ್ಯಾ ಗುರುಸ್ಥಾಲ, ಉದಯಕುಮಾರ್ ತಂಗಾ, ಆನಂದ್ ಪಾಟೀಲ್ ಬೀದರ್, ನೂರದಪ್ಪ ಪಾಟೀಲ್ ಗ್ರಾಮಸ್ಥರಾದ ವೀರೇಶ್ ತುಗಾಂವ, ಪ್ರಭು ತುಗಾಂವ, ಬಸಯ್ಯಾ ಡಿಗ್ರಿ, ಮಹಾರುದ್ರಯ್ಯ ಮಳ್ಳಿ, ಶಂಕರರಾವ ಅಕ್ಕಾ, ಜಗನಾಥ ಸಾದಾ, ಗುಂಡಪ್ಪ ಹಳ್ಳಿ, ಹಣಮಂತ ಹಳ್ಳಿ ಸೇರಿದಂತೆ ಹಿರಿಯರು, ಯುವಕರು, ಮಹಿಳೆಯರು ಮಕ್ಕಳು ಇದ್ದರು.

# ಪ್ರತ್ಯೇಕ ಜೂಜಾಟ: 25 ಜನರ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.23–ನಗರದ ವಿವಿಧೆಡೆ ದಾಳಿ ನಡೆಸಿದ ಪೊಲೀಸರು 25 ಜನರನ್ನು ಬಂಧಿಸಿ 84,760 ರೂ ಜಪ್ತಿ ಮಾಡಿದ್ದಾರೆ.ನಗರದ ನಂದೂರ ಇಂಡಸ್ಟ್ರಿಯಲ್ ಏರಿಯಾದಲ್ಲಿ ಮತ್ತು ಕಡಣಿ ಗ್ರಾಮದ ಕಾಳಪ್ಪರವರ ದನದ ಕೊಟ್ಟಿಗೆಯಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕ ಮತ್ತು ವಿಶ್ವವಿದ್ಯಾಲಯ ಠಾಣೆ ಪೊಲೀಸರು ಪ್ರತ್ಯೇಕವಾಗಿ ದಾಳಿ ನಡೆಸಿ 17 ಜನರನ್ನು ಬಂಧಿಸಿದ್ದಾರೆ.

# ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಅಂಗವಾಗಿ ಪುರಸಭೆ ಕಾರ್ಯಾಲಯದಲ್ಲಿ ಕಿತ್ತೂರು ರಾಣಿ ಚೆನ್ನಮ್ಮನವರ ಭಾವಚಿತ್ರಕ್ಕೆ ಪುರಸಭೆ ಅಧ್ಯಕ್ಷ ದಿಲೀಪಕುಮಾರ ಬಗ್ದಲಕರ್ ಹೂ ಮಾಲಾರ್ಪಣೆ ಮಾಡಿ ಪೂಜೆಯನ್ನು ಸಲ್ಲಿಸಿದ್ದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ನಸೀರ್ ಖಾನ್, ಪ್ರಭಾರಿ ಮುಖ್ಯಾಧಿಕಾರಿ ವಿಜಯದೀಪ ಪೂಜೆ ಕಾರ್ಯಕ್ರಮದಲ್ಲಿ ಪುರಸಭೆಯ ಸದಸ್ಯರಾದ ರಹೇಮಾನ ಪಾಶ ಪ್ರಮುಖರಾದ ಶರಣಪ್ಪಾ ಗಡಮಿ, ಸುಧಾಕರ ಬಡಿಗೇರ ಸಿಬ್ಬಂದಿಗಳಾದ ರವಿಕುಮಾರ ಸ್ವಾಮಿ, ವಿಜಯಕುಮಾರ, ಚಿದಾನಂದ ಪತ್ರಿ, ಬಸವರಾಜ ಬಿರಾದರ ಲೆಕ್ಕಿಗರು, ಆನಂದ ಕಂದಾಯ ನಿರೀಕ್ಷಕರು, ಕವಿತಾ, ಸರೋಜನಿ, ಮಲ್ಲಮ್ಮ, ಸಚಿನ, ನಥಾನಿಯೇಲ್, ಬಕ್ಕಪ್ಪಾ, ಭೀಮಶಾ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಹುಮನಾಬಾದ:ಪಟ್ಟಣದ ಅರ್ಬಿಟ್ ಸಂಸ್ಥೆಯ ಕಛೇರಿಯಲ್ಲಿ ನಿರ್ದೇಶಕರಾದ ಫಾದರ್ ವಿಕ್ಟರ್ ವಾಸ್ ರವರು ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನಪತ್ರಿಕೆಯನ್ನು ಓದುತ್ತಿರುವುದನ್ನು ಕಾಣಬಹುದು.

## ಯಶಸ್ವಿಯಾಗಿ ಜರುಗಿದ ಪುರಸಭೆ ಸಾಮಾನ್ಯ ಸಭೆ

# ಮುಕ್ತನಿಧಿ ಯೋಜನೆಯಲ್ಲಿ ಮಾದರಿ ಕ್ರಿಯಾ ಯೋಜನೆ ತಯಾರಿಸಲು ಸಲಹೆ:ಬಗ್ದಲಕರ್

(ರಾಜಕುಮಾರ ಆರ್.ಹಡಪದ)



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಪುರಸಭೆಯ ಅಭಿವೃದ್ಧಿಗೆ 15ನೇ ಹಣಕಾಸು ಮತ್ತು ಎಸ್.ಎಫ್.ಸಿ. ಮುಕ್ತನಿಧಿ ಯೋಜನೆಯ ಅನುದಾನದ ಅಡಿಯಲ್ಲಿ ಉಳಿತಾಯವಾಗಿರುವ ಮೊತ್ತಕ್ಕೆ ಪಟ್ಟಣದ 23 ವಾರ್ಡಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಮಾದರಿ ಕ್ರಿಯಾ ಯೋಜನೆ ಸಿದ್ದ ಪಡಿಸಬೇಕೆಂದು ಪುರಸಭೆಯ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ತಿಳಿಸಿದರು. ಕಾಮಗಾರಿಗಳು ಕೈಗೊಳ್ಳಲು ಸಭೆಯಲ್ಲಿ ಸದಸ್ಯರು ಸಲಹೆ ನೀಡಿದರು. ಅಧ್ಯಕ್ಷ ದಿಲೀಪಕುಮಾರ್ ಬಗ್ದಲಕರ್ ಕಾಮಗಾರಿಗಳು ಕೈಗೊಳ್ಳಲು ಕ್ರಿಯಾ ಯೋಜನೆ ತಯಾರಿಸಿ ಮಂಜೂರಿಗಾಗಿ ಜಿಲ್ಲಾಧಿಕಾರಿಗಳಿಗೆ ಪ್ರಸ್ತಾವನೆ ಕಳುಹಿಸಲು ಸಭೆಯಲ್ಲಿ ಠರಾವು ಪಾಸ್ ಮಾಡಲಾಯಿತ್ತು. ಪಟ್ಟಣದ ಪ್ರಮುಖ ರಸ್ತೆಗಳ ಮತ್ತು ವಾರ್ಡಗಳಲ್ಲಿ ದನ ಕರುಗಳು ಹಾಗೂ ಇತರೆ ಪ್ರಾಣಿಗಳು ರಸ್ತೆ ಮೇಲೆ ಬಿಡುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದ್ದು. ಸದರಿ ಜಾನುವಾರುಗಳು ವಶಪಡಿಸಿಕೊಂಡು ಗೋ ಶಾಲೆಗೆ ಕಳುಹಿಸಲು ಸಭೆಯಲ್ಲಿ ಸರ್ವ ಸದಸ್ಯರು ನಿರ್ಣಯಿಸಿ ಠರಾವು ಪಾಸ್ ಮಾಡಿದರು. ಪಟ್ಟಣದ ನಾಂದೇಡಿ ಫಂಕ್ಷನ್ ಹಾಲ್ ಎದುರುಗಡೆ ಸಿದ್ದಿಕಿ ದರ್ಗಾ ಹತ್ತಿರ ಇರುವ ಜಮೀನಿನಲ್ಲಿ ತರಕಾರಿ ಮಾರುಕಟ್ಟೆ ಮಾಡಲು ಸ್ಥಳ ಗುರುತಿಸಲು ಸರ್ಕಾರಿ ಜಾಗ ಇರುವ ಬಗ್ಗೆ ಸರ್ವೆ ಮಾಡಿಸಲು ಸಂಬಂಧಪಟ್ಟ ಇಲಾಖೆಗೆ ಪತ್ರ ಬರೆಯಲು ಸಭೆಯಲ್ಲಿ ನಿರ್ಣಯಿಸಲಾಯಿತು. ಅಲ್ಪಸಂಖ್ಯಾತರ ಸಮುದಾಯಕ್ಕೆ ಒಂದು ಸಮುದಾಯ ಭವನ ನಿರ್ಮಾಣ ಮಾಡಲು ನಾಗರಿಕ ಸೌಲಭ್ಯದಲ್ಲಿ ನಿವೇಶನ ಮಂಜೂರಿ ಮಾಡಲು ಸಭೆಯಲ್ಲಿ ತಿಳಿಸಲಾಯಿತು. ಎಲ್ಲಾ ವಾರ್ಡಿನ ಸದಸ್ಯರು ತಮ್ಮ ತಮ್ಮ ವಾರ್ಡಿನ ಸಮಸ್ಯೆಗಳನ್ನು ಅಧ್ಯಕ್ಷರಿಗೆ ತಿಳಿಸಿದರು. ಹಂತ ಹಂತವಾಗಿ ಎಲ್ಲಾ ವಾರ್ಡುಗಳಿಗೆ ಸೌಲಭ್ಯಗಳು ಒದಗಿಸುವುದಾಗಿ ಭರವಸೆ ನೀಡಿದರು. ಲೆಕ್ಕಾಧಿಕಾರಿ ಬಸವರಾಜ ಬಿರಾದಾರ್ ಜುಲೈ ತಿಂಗಳಿಂದ ಸೆಪ್ಟೆಂಬರ್ ವರೆಗೆ ಜಮಾ ಮತ್ತು ಖರ್ಚುಗಳ ಬಗ್ಗೆ ಓದಿ ಮಾಹಿತಿ ತಿಳಿಸಿದರು. ಸಭೆಯಲ್ಲಿ ಪುರಸಭೆ ಉಪಾಧ್ಯಕ್ಷ ನಸೀರ ಖಾನ, ಪ್ರಭಾರಿ ಮುಖ್ಯಾಧಿಕಾರಿ ವಿಜಯದೀಪ, ಸದಸ್ಯರಾದ ಮಹ್ಮದ ನಸೀರ ಹಕೀಂ, ಮಹ್ಮದ ನಿಸಾರೋದ್ದಿನ್, ಮುಜಾಫರ್ ಪಟೇಲ್, ಮಹ್ಮದ ಹಬೀಬ್, ವಿಶಾಲ ಬೊರಳೆ, ರಾಜದೀಪ ಜಾಬಾ, ರಹೇಮಾನ ಪಾಶ, ಪಾರ್ವತಿ, ಪದ್ಮಾವತಿ, ಜಲೀಸಾ ಬೇಗಂ, ಶ್ರೀಲಕ್ಷ್ಮಿ, ಶಶಿಕಲಾ, ಲಕ್ಷ್ಮಿಬಾಯಿ ಗಡಮಿ, ಸೌಭಾಗ್ಯವತಿ ಸ್ವಾಮಿ, ಶಮಾ ಬೇಗಂ, ಅಧಿಕಾರಿಗಳಾದ ವಿಜಯಕುಮಾರ, ಖಾಜಾಮಿಯಾ, ಚಿದಾನಂದ ಪತ್ರಿ, ಸಂತೋಷ ಬಿರಾದರ, ಆನಂದ, ಶಿವಕುಮಾರ, ಸಚಿನ ಉಪಸ್ಥಿತರಿದ್ದರು.



> ಚಿಟಗುಪ್ಪ ಪಟ್ಟಣ ಸುಂದರ ಪಟ್ಟಣ ಮಾಡಲು ಸರ್ವ ಸದಸ್ಯರ ಹಾಗೂ ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ. ಎಸ್.ಎಫ್.ಸಿ. ಮುಕ್ತನಿಧಿ ಅನುದಾನದಲ್ಲಿ ಮಾದರಿಯ ಕ್ರಿಯಾ ಯೋಜನೆಗಳನ್ನು ಸಿದ್ದ ಪಡಿಸಲು ಅಧಿಕಾರಗಳಿಗೆ ಸೂಚಿಸಿದ್ದೇನೆ.
>
> –ದಿಲೀಪಕುಮಾರ್ ಬಗ್ದಲಕರ್


# ಹಡಪದ ನಿಗಮ ಮಂಡಳಿ ಘೋಷಣೆಗೆ ರಾಜಕುಮಾರ್ ಆರ್. ಹಡಪದ ಹರ್ಷ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಸಮಾಜದ ಸರ್ವತೋಮುಖ ಅಭಿವೃದ್ಧಿಗಾಗಿ ಸರ್ಕಾರ ಹಡಪದ ಅಭಿವೃದ್ಧಿ ಮಂಡಳಿ ಘೋಷಣೆ ಮಾಡಿದಕ್ಕೆ ಹಡಪದ ಸಮಾಜದ ಪ್ರಧಾನ ಕಾರ್ಯದರ್ಶಿ ರಾಜಕುಮಾರ ಆರ್. ಹಡಪದ ಹರ್ಷ ವ್ಯಕ್ತಪಡಿಸಿ ಸರ್ಕಾರಕ್ಕೆ ಧನ್ಯವಾದಗಳು ಸಲ್ಲಿಸಿದರು. ಶೀಘ್ರದಲ್ಲೇ ಹಡಪದ ಅಭಿವೃದ್ಧಿ ನಿಗಮದ ಅಧ್ಯಕ್ಷರನ್ನು ನೇಮಕ ಮಾಡಬೇಕೆಂದು ಮುಖ್ಯಮಂತ್ರಿಗಳಿಗೆ ಆಗ್ರಹಿಸಿದ್ದಾರೆ. ಸಮಾಜದ ಏಳಿಗೆಗಾಗಿ ದುಡಿಯುತ್ತಿರುವ ವ್ಯಕ್ತಿಯನ್ನು ಗುರುತಿಸಿ ಅಧ್ಯಕ್ಷರನಾಗಿ ನೇಮಕ ಮಾಡಬೇಕೆಂದು ಪತ್ರಿಕಾ ಪ್ರಕಟಣೆಯ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದ್ದಾರೆ.

# ಬಿರಾದಾರಗೆ ಪಿಎಚ್‌ಡಿ ಪದವಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಗುಲ್ಬರ್ಗಾ ವಿಶ್ವವಿದ್ಯಾಲಯದ ಇತಿಹಾಸಿಕ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಸಂಶೋಧನಾ ವಿದ್ಯಾರ್ಥಿಯಾದ ರಾಘವೇಂದ್ರ ಬಿರಾದಾರಗೆ ಮಂಡಿಸಿದ ಸ್ವಾತಂತ್ರ್ಯ ಹೋರಾಟಗಾರ ರಾಮಚಂದ್ರ ವೀರಪ್ಪನವರ ಜೀವನ ಮತ್ತು ಸಾಧನೆ ಎಂಬ ಮಹಾಪ್ರಬಂಧಕ್ಕೆ ಗುಲ್ಬರ್ಗಾ ವಿಶ್ವವಿದ್ಯಾಲಯ ಡಾಕ್ಟರೇಟ್ ಪದವಿ (ಪಿಎಚ್‌ಡಿ) ಪದವಿ ನೀಡಿದೆ. ಸ್ನಾತಕೋತ್ತರ ಕೇಂದ್ರ ಸರಕಾರಿ (ಸ್ವಾಯತ್ತ) ಕಾಲೇಜಿನ ಇತಿಹಾಸ ವಿಭಾಗದ ವಿಶ್ರಾಂತ ಪ್ರಾಧ್ಯಾಪಕರಾದ ಡಾ. ವಾಣಿ ಶಂಭುಲಿಂಗ ಅವರು ಮಾಗದರ್ಶಕರಾಗಿದ್ದರು.

# ವಚನ ಸಂರಕ್ಷಣೆಯಲ್ಲಿ ಚನ್ನಬಸವಣ್ಣನವರ ಪಾತ್ರ ಪ್ರಮುಖ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.23: ವಿಶ್ವಗುರು ಬಸವಣ್ಣನವರ ನೇತೃತ್ವದಲ್ಲಿ ಹನ್ನೆರಡನೇ ಶತಮಾನದಲ್ಲಿ ಜರುಗಿದ ಸಾಮಾಜಿಕ ಚಳುವಳಿಯಲ್ಲಿ ಚನ್ನಬಸವಣ್ಣನವರು ಸಾಕಷ್ಟು ಶ್ರಮಿಸಿದ್ದಾರೆ. ಅಮೂಲ್ಯವಾದ ವಚನಗಳನ್ನು ರಚಿಸಿ, ರಕ್ಷಿಸಿ ಕನ್ನಡ ಸಾಹಿತ್ಯ ಲೋಕವನ್ನು ಶ್ರೀಮಂತಗೊಳಿಸಿದ್ದಾರೆ. ಅವಿರಳ ಜ್ಞಾನಿಯಾಗಿದ್ದ ಅವರ ಕೊಡುಗೆ ಅನನ್ಯವಾಗಿದೆ. ಅವರು ಪ್ರಮುಖ ವಚನಕಾರರಾಗಿದ್ದು, ಶರಣರ ಕ್ರಾಂತಿಯ ನಂತರ ವಚನಗಳನ್ನು ಉಳಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ ಎಂದು ಉಪನ್ಯಾಸಕ, ಶರಣ ಚಿಂತಕ ಎಚ್.ಬಿ.ಪಾಟೀಲ ಅಭಿಪ್ರಾಯಪಟ್ಟರು.

ನಗರದ ಆಳಂದ ರಸ್ತೆಯ ದೇವಿ ನಗರ ಕಮಾನ್ ಹತ್ತಿರದ 'ಬಿರಾದಾರ ಕಾಂಪ್ಲೆಕ್ಸ್'ನ ಆವರಣದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ಐತಿಹಾಸಿಕ, ಸಾರ್ವಕಾಲಿಕ ದಾಖಲೆಯ 5900ನೇ ಕಾರ್ಯಕ್ರಮವಾದ ಬುಧವಾರ ಜರುಗಿದ 'ಅವಿರಳ ಜ್ಞಾನಿ ಶರಣ ಚನ್ನಬಸವಣ್ಣನವರ 853ನೇ ಜಯಂತಿ'ಯ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪ ನಮನಗಳನ್ನು ಸಲ್ಲಿಸಿ ಅವರು ಮಾತನಾಡುತ್ತಿದ್ದರು.

ಅವಿರಳ ಜ್ಞಾನಿ, ಚಿನ್ಮಯಜ್ಞಾನಿ, ಷಟಸ್ಥಲ ಚಕ್ರವರ್ತಿ, ಚಿಕ್ಕದಣ್ಣಾಯಕ, ವಿಶ್ವಗುರು ಬಸವಣ್ಣನವರ ಸೋದರ ಅಳಿಯರಾದ ಅವರು, ಶರಣರ ಸಾಮಾಜಿಕ ಚಳುವಳಿಗೆ ಪ್ರಮುಖವಾದ ಕೊಡುಗೆಯನ್ನು ನೀಡಿದ್ದಾರೆ. ಕಲ್ಯಾಣ ಕ್ರಾಂತಿಯ ನಂತರ ವಚನಗಳನ್ನು ಉಳಿಸಿ ಉಳವಿಗೆ ಸಾಗಿಸುವ ಜವಾಬ್ದಾರಿಯನ್ನು ನಿರ್ವಹಿಸಿದರು. ಅನುಭವ ಮಂಟಪದ ಸದಸ್ಯರಿಗೆ ಅಕ್ಕಮಹಾದೇವಿಯವರನ್ನು ಪರಿಚಯಿಸಿದರು. ಚನ್ನಬಸವಣ್ಣನವರು 'ಕೂಡಲಚೆನ್ನಸಂಗಮದೇವ' ಎಂಬ ಅಂಕಿತನಾಮದೊಂದಿಗೆ ರಚಿಸಿದ ಒಟ್ಟು 1776 ವಚನಗಳು ಲಭ್ಯವಾಗಿವೆ. ಷಟಸ್ಥಲ ಸಿದ್ಧಾಂತಕ್ಕೆ ಅಡಿಪಾಯ ಹಾಕಿದ್ದು ಅವರು ಪ್ರಮುಖ ಕೊಡುಗೆಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಪ್ರಮುಖರಾದ ಶಿವಯೋಗೆಪ್ಪಾ ಎಸ್.ಬಿರಾದಾರ, ಡಾ.ರಾಜಶೇಖರ ಪಾಟೀಲ್, ಮಲ್ಲಿನಾಥ ದಂಗಾಪುರ, ರೇವಣಸಿದ್ದಪ್ಪ ಪವಾಡಶೆಟ್ಟಿ, ಹಣಮಂತರವಾವ ಭೈರಾಮಡಗಿ, ಮಲ್ಲಿನಾಥ ದೇಗಾಂವ, ಅಜಯ ಎಸ್.ಬಿರಾದಾರ, ವಿಜಯ ಎಸ್.ಬಿರಾದಾರ, ಚಂದ್ರಕಾಂತ ನರೋಣಿ, ಸಂತೋಷಕುಮಾರ ಮಾಲಿಪಾಟೀಲ್ ಸೇರಿದಂತೆ ಇನ್ನಿತರರಿದ್ದರು.

## ಪ್ರಿಯಾಂಕ ಖರ್ಗೆ ಬೆಂಬಲಕ್ಕೆ ನಾಡಿನ ಜನತೆ ನಾವಿದ್ದೇವೆ: ಶ್ರೀಶೈಲ ಹೊಸಮನಿ



ಶಹಪುರ್:ಅ.23:ಹಾಡುಹಗಲೇದೊಣ್ಣೆ ಹಿಡಿದು ಪಥಸಂಚಲನಾ ಮಾಡುವ ಮೂಲಕ ಕಾನೂನುವ್ಯವಸ್ಥೆಗೆ ಸವಾಲು ಹಾಕುತ್ತಿರುವಾಗ ಸಂವಿಧಾನದತ್ತವಾದ ಅಧಿಕಾರಕ್ಕೆ ಬಂದಿರುವ ಸರ್ಕಾರಗಳು ಮೌನವಾಗಿರುವುದು ತೀರ ಶೋಚನಿಯವಾಗಿದೆ.

ಇದರಿಂದ ತಿಳಿದುಬರುವುದೇನೆಂದರೆ, ಆರ್.ಎಸ್.ಎಸ್. ಸಂಘಟನೆಯ ಕಾಂಗ್ರೆಸ್ ಸರ್ಕಾರವನ್ನು ಬಳಸಿಕೊಂಡು ಅದರೊಳಗಿರುವ ಗಣ್ಯರನ್ನು ಬಳಸಿಕೊಂಡು ತನ್ನ ಸಂಸ್ಥೆ ಬೇರನ್ನು ದೇಶದ ಉದ್ದಗಲಕ್ಕೆ ವಿಸ್ತರಿಸುತ್ತಾ ಬಂತು. ಇಂದು ಆರ್.ಎಸ್.ಎಸ್. ವಿರುದ್ಧ ರಾಹೂಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ. ಸಿದ್ದರಾಮಯ್ಯ, ಪ್ರಿಯಾಂಕ್ ಖರ್ಗೆ, ಡಾ.ಹೆಚ್.ಸಿ.ಮಹದೇವಪ್ಪ, ಹೊರತುಪಡಿಸಿದಂತೆ ದೊಡ್ಡಧ್ವನಿಯಲ್ಲಿ ಮಾತನಾಡುವ ಶಕ್ತಿ ಕಾಂಗ್ರೆಸ್‌ನ ಇತರೆ ನಾಯಕರಿಗಿಲ್ಲ ಇದು ದೊಡ್ಡ ದುರಂತ. ಆರ್.ಎಸ್.ಎಸ್ ಎರಡೆ–ರಡು ಬಾರಿ ನಿಷೇದಕೊಳ್ಳಗಾಗಿರುವ ರಾಜಕೀಯ ಸಂಘಟನೆ, ಜಾತಿ ವ್ಯವಸ್ಥೆ, ಬ್ರಾಹ್ಮಣ ಸಿದ್ಧಾಂತಗಳನ್ನು ದೇಶದಲ್ಲಿ ಮರುಜಾರಿಗೊಳಿಸುವ ಉದ್ದೇಶವನ್ನು ಹೊಂದಿರುವ ಈ ಸಂಸ್ಥೆಯಾಗಿದೆ.

ಈ ಸಂಸ್ಥೆಯು ಕಾನೂನುಬಾಹಿರ ಚಟುವಟಿಕೆಗಳು ನಡೆಸುವುದು. ಸಂವಿಧಾನ ಪ್ರಜಾಪ್ರಭುತ್ವ ವಿರೋಧಿ ಚಟುವಟಿಕೆಗಳು ನಡೆಸುತ್ತಿರುವ ಆರ್.ಎಸ್.ಎಸ್.ನ್ನು ಸಾರ್ವಜನಿಕ ಸ್ಥಳಗಳಲ್ಲಿ ನಡೆಸುವ ಚಟುವಟಿಕೆಗಳನ್ನು, ಸರ್ಕಾರದ ನಿಗ್ರಹಿಸಬೇಕೆಂದು ಮಾನ್ಯ ಸಚಿವರಾದ ಪ್ರಿಯಾಂಕ್ ಖರ್ಗೆಯವರ ಬೆಂಬಲಕ್ಕೆ ನಮ್ಮ ಸಮಿತಿಗಳು ಸಂಪೂರ್ಣ ಬೆಂಬಲ ನೀಡುತ್ತಿವೆ. ಇವರಿಗೆ ರಾಜ್ಯ ಸರ್ಕಾರದ "ಝಡ್ ಕ್ಯಾಟಗರಿ" ಭದ್ರತೆ ನೀಡಿ ರಕ್ಷಣೆ ನೀಡಬೇಕಾಗಿ ಸರ್ಕಾರ–ಕ್ಕೆ ಆಗ್ರಹಿಸುತ್ತೇವೆ. ಪ್ರಿಯಾಂಕ್ ಖರ್ಗೆ ರವರು, ಆರ್.ಎಸ್.ಎಸ್ ವಿರುದ್ಧ ನಡೆಸುತ್ತಿರುವ ಹೋರಾಟಕ್ಕೆ ನಾಡಿನ ಎಲ್ಲಾ ಪ್ರಜಾಪ್ರಭುತ್ವವಾದಿ, ಸಂವಿಧಾನ ರಕ್ಷಕರ ಸಂಪೂರ್ಣ ಬೆಂಬಲವಿದೆ, ಎಂದ ದಲಿತಪರ ಸಂಘಟನೆಗಳ ಸಮಿತಿಗಳು ಈ ಮೂಲಕ ಸರ್ಕಾರಕ್ಕೆ ಒತ್ತಾಯಿಸುತ್ತವೆ ಎಂದು ಸಂಘಟನೆಕಾರರು ಮಾತನಾಡಿದರು. ಆರ್‌ಎಸ್‌ಎಸ್ ಸಂಘಟನೆಯನ್ನು ಬ್ಯಾನ್ ಮಾಡಿಸಿ ಪಂಚಾಯತ್ ರಾಜ್ಯ ಸಚಿವರಾದ ಪ್ರಿಯಾಂಕ ಖರ್ಗೆ ಅವರಿಗೆ ಜೀವ ಬೆದರಿಕೆ ಹಾಕಿರುವ ವ್ಯಕ್ತಿಯನ್ನು ಕೂಡಲೇ ದೇಶದಿಂದ ಗಡಿಪಾರು ಮಾಡುವಂತೆ ಒತ್ತಾಯಿಸಿ ತಸಿಲ್ ಕಛೇರಿ ಮುಂದುಗಡೆ ರಸ್ತೆ ತಡೆ ಬೃಹತ್ ಪ್ರತಿಭಟನ ಮಾಡಲಾಯಿತು

ಪ್ರತಿಭಟನೆಯಲ್ಲಿ ಹಿರಿಯ ವಕೀಲರಾದ ಆರ್ ಚನಬಸ್ಸು ವನದುರ್ಗ ದಲಿತ ಮುಖಂಡರಾದ ಮಲ್ಲಿಕಾರ್ಜುನ ಪೂಜಾರಿ ಶ್ರೀಶೈಲ ಹೊಸಮನಿ ಭೀಮರಾಯ ತಳವಾರ್ ನಾಗಣ್ಣ ಬಡಿಗೇರ್ ಹೊನ್ನಪ್ಪ ಗಂಗನಾಳ ಶಿವಪುತ್ರ ಜವಳಿ ಶಿವಕುಮಾರ್ ತಳವಾರ್ ಶರಣು, ದೋರಳ್ಳಿ ಸುಭಾಷ್ ತಳವಾರ್ ಮತ್ತು ಸಯದ ಕಾಲಿದ ವೀರೇಂದ್ರ ಪಾಟೀಲ್ ರಾಮಣ್ಣ ಸಾದ್ಯಪುರ್ ಮಾಪಣ್ಣ ಬಡಿಗೇರ್ ಅಶೋಕ್ ಹೊಸಮನಿ ಶಾಂತಪ್ಪ ಸಾಲಿಮನಿ ಬಸವರಾಜ್ ಭಜಂತ್ರಿ ಶರಣಪ್ಪ ಭೂತಾಳಿ ರಾಮು ಸಾಗರ್ ಮಾನಪ್ಪ ಹುರಸಗುಂಡಗಿ ಮಲ್ಲಿಕಾರ್ಜುನ ಹುರಸಗುಂಡಗಿ ಮರಿಯಪ್ಪ ಕನ್ಯಕೋಳೂರು ಮಲ್ಲು ಡಿಗ್ರಿ ಮಾಳಪ್ಪ ಸಲಾದಪುರ್ ಮರೆಪ್ಪ ಸಲಾದಪುರ್ ಚಂದ್ರಕಾಂತ ರಸ್ತಾಪುರ ಭೀಮರಾಯ ಜುನ್ನಾ ನಾಗರಾಜ್ ಬೊಮ್ಮನಹಳ್ಳಿ, ಮಂಜು ಸೈದಾಪುರ್ ನಾಗರಾಜ್ ಕೊಡಮನಹಳ್ಳಿ ಶರಬಣ್ಣ ರಸ್ತಾಪುರ್ ಶಿವುಪೂತೆ ವಿಶ್ವನಾಟಿ ಕಾರ ಮಲ್ಲಪ್ಪ ಲಂಡನ್ ಕರ್ ಹನುಮಂತ ಬಜಂತ್ರಿ ಗೂಗಿ ಪುರುಷೋತ್ತಮ ಬಬಲಾದಿ ಇನ್ನು ಅನೇಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು

## ಜಿಲ್ಲಾ ವಲಯ ಗಿರಿಜನ ಉಪ ಯೋಜನೆ ಉಚಿತ ಮೀನುಗಾರಿಕೆ ಸಲಕರಣೆ ಕಿಟ್ಟು ಅರ್ಜಿ ಅವಧಿ ವಿಸ್ತರಣೆ

ಯಾದಗಿರಿ : ಅ 23 : ಯಾದಗಿರಿ ಜಿಲ್ಲೆಯ ಮೀನುಗಾರಿಕೆ ಇಲಾಖೆ ವತಿಯಿಂದ 2025–26ನೇ ಸಾಲಿನ ಜಿಲ್ಲಾ ವಲಯ ಗಿರಿಜನ ಉಪ ಯೋಜನೆಯಡಿ ಉಚಿತ ಮೀನುಗಾರಿಕೆ ಸಲಕರಣೆ ಕಿಟ್ಟು ವಿತರಣೆಗೆ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ ಮೀನುಗಾರಿಕೆ ಉಪ ನಿರ್ದೇಶಕರು ಶರಣಪ್ಪ ಅವರು ತಿಳಿಸಿದ್ದಾರೆ. ಜಿಲ್ಲಾ ವಲಯ ಗಿರಿಜನ ಉಪ ಯೋಜನೆಯಡಿ ಉಚಿತ ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆಗೆ ಆನ್‌ಲೈನ್ ïsevasindhuservices.kar-nataka.gov.in/directApply.do?serviceId=1968 ನಲ್ಲಿ

2025ರ ನವೆಂಬರ್ 5ರ ವರೆಗೆ ಅರ್ಜಿಅವಧಿ ವಿಸ್ತರಿಸಿದೆ.

ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಉಪ ನಿರ್ದೇಶಕರ ಕಛೇರಿ. ಜಿಲ್ಲಾ ಪಂಚಾಯತ, ಮೊದಲನೇ ಮಹಡಿ ಕೋಣೆ, ಸಂ.ಸಿ–15, ಜಿಲ್ಲಾಡಳಿತ ಭವನ ಯಾದಗಿರಿ. ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಛೇರಿ, ಮೊದಲನೇ ಮಹಡಿ ಕೋಣೆ ಸಂ.ಸಿ–14, ಜಿಲ್ಲಾಡಳಿತ ಭವನ ಯಾದಗಿರಿ. ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಛೇರಿ ಲಕ್ಷ್ಮಿ ??ಗನಗರ ಶಹಾಪೂರ. ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಛೇರಿ, ತಹಸೀಲ್ ರೋಡ ಲಕ್ಷ್ಮಿ ??ಗುಡಿ ಹತ್ತಿರ

ಸುರಪುರ ಇಲ್ಲಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೈಂಗಿಕವಾಗಿ ಬಳಸಿಕೊಂಡು ಮತಾಂತರಕ್ಕೆ ಒತ್ತಾಯ:ಪ್ರಕರಣ ದಾಖಲು

ಬೆಂಗಳೂರು:ಅ.23:ಸಾಮಾಜಿಕ ಮಾಧ್ಯಮ ಇನ್‌ಸ್ಟಾಗ್ರಾಮ್ ಪರಿಚಯವಾಗಿದ್ದ ವ್ಯಕ್ತಿಯೋರ್ವ ನನ್ನನ್ನು ಮದುವೆಯಾಗುವುದಾಗಿ ನಂಬಿಸಿ ಹಲವು ಬಾರಿ ಸೆಕ್ಸ್ ಮಾಡಿ ಇದೀಗ ವಂಚಿಸಿದ್ದಾನೆ ಎಂದು ಆರೋಪಿಸಿ ಮಹಿಳೆಯೊಬ್ಬರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಥಣಿಸಂದ್ರದ ಸರ್ಮೈ ಪಾಳ್ಯದ ನಿವಾಸಿ 30 ವರ್ಷದ ಮೊಹಮ್ಮದ್ ಇಶಾಕ್ ನನಗೆ ಮೋಸ ಮಾಡಿದ್ದಾನೆ ಎಂದು ಆರೋಪಿ ಸಂತ್ರಸ್ತ ಮಹಿಳೆ ಎಚ್‌ಎಸ್‌ಆರ್ ಲೇಔಟ್ ಪೊಲೀಸರಿಗೆ ದೂರು ನೀಡಿದ್ದಾರೆ. 2024ರ ಅಕ್ಟೋಬರ್ ನಲ್ಲಿ ಇನ್‌ಸ್ಟಾಗ್ರಾಮ್ ಮೂಲಕ ಮೊಹಮ್ಮದ್ ಇಶಾಕ್ ಪರಿಚಯವಾಗಿತ್ತು. ನಂತರ ಇಬ್ಬರು ಪರಸ್ಪ ಚಾಟಿಂಗ್ ಮಾಡುತ್ತಿದ್ದೇವೆ. ಸಲುಗೆ ಬೆಳೆದಂತೆ ನನಗೆ ಮದುವೆಯಾಗುವ ಭರವಸೆ ನೀಡಿದನು. ಆನಂತರ ಹೆಬ್ಬಾಳ, ದಾಸರಹಳ್ಳಿ ಬಳಿಯ ಹೋಟೆಲ್‌ಗೆ ತನ್ನನ್ನು ಕರೆದೊಯ್ದು ಸೆಕ್ಸ್ ಮಾಡಿದ್ದನು ಮಹಿಳೆ ದೂರಿನಲ್ಲಿ ತಿಳಿಸಿದ್ದಾಳೆ.

ನನ್ನನ್ನು ಮದುವೆಯಾಗುವುದಾಗಿ ಹೇಳುತ್ತಿದ್ದವನ್ನು ಇದೀಗ ಬೇರೊಬ್ಬ ಮಹಿಳೆ ಜೊತೆ ನಿಶ್ಚಿತಾರ್ಥ ಮಾಡಿಕೊಂಡಿದ್ದಾನೆ. 2025ರ ಸೆಪ್ಟೆಂಬರ್ ನಲ್ಲಿ ಆತ ನಿಶ್ಚಿತಾರ್ಥ ಮಾಡಿಕೊಂಡಿದ್ದ ವಿಷಯ ತಿಳಿದು ನಾನು ಈ ಬಗ್ಗೆ ಪ್ರಶ್ನಿಸಿದೆ ಅದಕ್ಕೆ ಇಶಾಕ್, ನಿನ್ನದಾರಿ ನೀನು ನೋಡಿಕೋ ಎಂದು ಹೇಳಿದ್ದನು. ಅಲ್ಲದೆ ಈ ವಿಷಯವಾಗಿ ಪದೇ ಪದೇ ಕರೆ ಮಾಡಿದರೆ ನಿನ್ನನ್ನು ಕೊಲ್ಲಬೇಕಾಗುತ್ತದೆ ಎಂದು ಬೆದರಿಕೆ ಹಾಕಿದ್ದನು ಎಂದು ಮಹಿಳೆ ಆರೋಪಿಸಿದ್ದಾಳೆ. ಮಹಿಳೆಯ ಆರೋಪದ ಮೇರೆಗೆ ಪ್ರಕರಣ ದಾಖಲಿಸಲಾಗಿದ್ದು ತನಿಖೆ ನಡೆಯುತ್ತಿದೆ ಪೊಲೀಸರು ತಿಳಿಸಿದ್ದಾರೆ.


ಕರ್ನಾಟಕ ಸರ್ಕಾರ

**ಕಾರ್ಯನಿರ್ವಾಹಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಕಲಬುರಗಿ ವಿಭಾಗ, ಕಲಬುರಗಿ**

ಸಂ.ಕಾನಿಅ/ಲೋಇ/ಕವಿ/ತಾಶಾ–2/.ಟೆಂಡರ್.ಅಧಿಸೂಚನೆ/2025–26/4603 ದಿನಾಂಕ:21.10.2025

**ಅಲ್ಪಾವಧಿ ಟೆಂಡರ್ ಅಧಿಸೂಚನೆ**

1) ಕಾಮಗಾರಿ ವಿವರ : ಕಾರ್ಯನಿರ್ವಾಹಕ ಇಂಜೀನಿಯರರು, ಲೋಕೋಪಯೋಗಿ, ಇಲಾಖೆ, ಕಲಬುರಗಿ ವಿಭಾಗ ಕಾರ್ಯಲಯದಿಂದ (ಕೆ.ಡಬ್ಲ್ಯೂ–1,&2)ರಲ್ಲಿ ಲೆಕ್ಕ ಶೀರ್ಷಿಕೆ 3054 ರಾಜ್ಯ ಹೆದ್ದಾರಿ ಸೇತುವೆ ಮತ್ತು ಜಿಲ್ಲಾ ಮುಖ್ಯ ರಸ್ತೆಗಳ ಸೇತುವ ನಿರ್ವಹಣೆ ಯೋಜನೆಯಡಿಯಲ್ಲಿ ಒಟ್ಟು (25) ಕಾಮಗಾರಿಗಳಿಗ ಟೆಂಡರ್ ಕರೆಯಲಾಗಿದೆ. ಅದರಲ್ಲಿ ಸಾಮಾನ್ಯ ವರ್ಗ–16, ಎಸ್.ಸಿ. ವರ್ಗ–04, ಕ್ಯಾಟಗೇರಿ 2ಎ ವರ್ಗ–04 ಮತ್ತು ಕ್ಯಾಟಗೇರಿ–1 ವರ್ಗ–01 ಮೀಸಲಿರಿಸಲಾಗಿರುತ್ತದೆ. ಹಾಗೂ ಮು.ಇಂ. ಸಂಪರ್ಕ ಮತ್ತ ಕಟ್ಟಡಗಳು (ಈ) ಕಲಬುರಗಿ ಕಛೇರಿಯಲ್ಲಿ 02 ಡಾಟಾ ಏಂಟ್ರಿ ಆಪರೇಟರಗಳ ಸೇವೆ ಒದಗಿಸುವುದು– 01 ಕಾಮಗಾರಿ. ಕೆ.ಪಿ.ಪಿ.ಪಿ ಪೋರ್ಟಲ್ ಮುಖಾಂತರ ಟೆಂಡರ ಕರೆಯಲಾಗಿದೆ. 2) ಕಾಮಗಾರಿ ಅಂದಾಜು ಮೊತ್ತ : ಕನಿಷ್ಠ ರೂ. 2.00ಲಕ್ಷಗಳು ಮತ್ತು ಗರಿಷ್ಠ ರೂ. 50.00ಲಕ್ಷಗಳು 3) ಗುತ್ತಿಗೆದಾರರ ಅರ್ಹತೆ ವಿವರ : ಈ ಕಾಮಗಾರಿಗೆ ಟೆಂಡರ ಸಲ್ಲಿಸುವವರು, ಲೋಕೋಪಯೋಗಿ ಇಲಾಖೆಯಲ್ಲಿ ನಾಲ್ಕನೇ ಮತ್ತು ಮೂರನೇ ದರ್ಜೆ ಮೇಲ್ಪಟ್ಟ ನೊಂದಾಯಿತ ಗುತ್ತಿಗೆದಾರರಾಗಿರಬೇಕು. 4) ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಮ್.ಡಿ. ಮೊತ್ತದ ವಿವರ : ಅರ್ಜಿ ಬೆಲೆ KPPP Portal ನಂತೆ, ಇ.ಎಮ್.ಡಿ. ಮೊತ್ತ ಕನಿಷ್ಠ ರೂ. 3,750.00 ಮತ್ತು ಗರಿಷ್ಠ ರೂ. 89,000.00 5) ಪ್ರೀ ಬಿಡ್ ಸಭೆ ದಿನಾಂಕ : 6) ಟೆಂಡರ ಬಗ್ಗೆ ಮಾಹಿತಿ ಹಾಗು ಸ್ಪಷ್ಟೀಕರಣ ಕೋರುವ ಕೊನೆಯ ದಿನಾಂಕ : 30/10/2025 (17.30 ಗಂಟೆ), 7) ಟೆಂಡರ ಸಲ್ಲಿಸುವ ಕೊನೆಯ ದಿನಾಂಕ : 31/10/2025 (16.00 ಗಂಟೆ), 8) ಆರ್ಥಿಕ ಬಿಡ್ ತೆರೆವುಗೋಳಿಸುವ ದಿನಾಂಕ : 03/11/2025 (16.30 ಗಂಟೆ), 09) ಹೆಚ್ಚಿನ ವಿವರಗಳಿಗೆ : ಕಾರ್ಯನಿರ್ವಾಹಕ ಇಂಜೀನಿಯರರು, ಲೋಕೋಪಯೋಗಿ ಇಲಾಖೆ, ವಿಭಾಗ ಕಲಬುರಗಿ ಕಚೇರಿ 10) ಅಂತರ್ಜಾಲ ತಾಣದ ವಿಳಾಸ : https://kppp.karnataka.gov.in 12. ಗಮನಿಸಬೇಕಾದ ಅಂಶಗಳು : ಟಿಪ್ಪಣಿ: 1) ಈ ಕೆಳಗೆ ಸಹಿ ಮಾಡಿರುವವರು ಯಾವೂದೇ ಕಾರಣಗಳನ್ನು ನೀಡದೆ ಟಂಡರ್ ಪ್ರಕ್ರಿಯೆಯನ್ನು ಮಂದೂಡುವಿಕೆ/ಸಂಪೂರ್ಣವಾಗಿ ಟೆಂಡರ್ ರದ್ದುಗೊಳಿಸುವ/ಮರು ಟೆಂಡರ್/ಟಂಡರ್ ನಿರಾಕರಿಸುವ ಹಕ್ಕನ್ನು ಹೊಂದಿರುತ್ತಾರೆ. 2) ಇನ್ನು ಮೂಂದೆ ಟಂಡರ್ ಪ್ರಕ್ರಿಯೆಯಲ್ಲಿ ಯಾವೂದೆ ಬದಲಾವಣೆಗಳು ಇದ್ದಲ್ಲಿ, ಟೆಂಡರ್ ರದ್ದುಗೊಳಿಸುವ/ಮುಂದುಡುವ/ಮರು ಟೆಂಡರ್/ಟಂಡರ್ ನಿರಾಕರಿಸುವಲ್ಲಿ ದಿನ ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ. ಬದಲಾಗಿ ವಿದ್ಯೂನ್ಮಾನ ಸಂಗ್ರಹಣೆ ವೇದಿಕೆಯಲ್ಲಿ ಮಾತ್ರ ಬದಲಾವಣೆಗಳನ್ನು ಪ್ರಕಟಿಸಲಾಗುವುದು.

ಸಹಿ/– ಕಾರ್ಯನಿರ್ವಾಹಕ ಇಂಜಿನೀಯರರು, ಲೋಕೋಪಯೋಗಿ ಇಲಾಖೆ, ವಿಭಾಗ ಕಲಬುರಗಿ

ವಾ.ಸಾ.ಸಂ.ಇ.ಕಲಬುರಗಿ/643/2025–26/ದೇಶಪಾಂಡೆ ಪಬ್ಲಿಸಿಟಿ


## ಅ.28 ರಂದು ಶಿಶಿಕ್ಷು ಮೇಳ

ಯಾದಗಿರಿ : ಅ 23 : ಯಾದಗಿರಿ ಜಿಲ್ಲೆಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆದಲ್ಲಿ ಇದೇ 2025ರ ಅಕ್ಟೋಬರ್ 28 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯ ವರೆಗೆ ಶಿಶಿಕ್ಷು ಮೇಳ (ಅಪ್ರೆಂಟಿಸ್ ಮೇಳ) ಆಯೋಜಿಸಲಾಗಿದೆ ಎಂದು ಯಾದಗಿರಿ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಪ್ರಾಂಶುಪಾಲರಾದ ತಾಜುದೀನ್ ಅವರು ತಿಳಿಸಿದ್ದಾರೆ.

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಯಾದಗಿರಿಯಲ್ಲಿ ಶಿಶಿಕ್ಷು ಮೇಳವನ್ನು ಆಯೋಜಿಸಲಾದ್ದು, ಅಂದು ಶಿಶಿಕ್ಷು ಮೇಳದಲ್ಲಿ ವಿವಿಧ ಪ್ರತಿಷ್ಠಿತ ಕಂಪನಿಯವರು (ಜೆಎಸ್‌ಡ್ಲೂ ತೋರ್ಣಗಲ್, ಕೊರಗ್ರೀನ್ ಶುಗರ್ಸ್, ಯಾದಗಿರಿ ಸಂಭವ ಪೌಂಡೇಶನ ಬೆಂಗಳೂರು ಜೀವರಾಜ ಮೋಟರ್ಸ್ ಬೆಂಗಳೂರು ಭಾಗವಹಿಸುತ್ತಿದ್ದು, ಐ.ಟಿ.ಐ ತರಬೇತಿ ಪಡೆದು ಉತ್ತೀರ್ಣರಾದ ಎಲೆಕ್ಟ್ರಿಷಿಯನ್, ಫಿಟ್ಟರ್, ವೆಲ್ಡರ್, ಎಲೆಕ್ಟ್ರಾನಿಕ್, ಮೆಕ್ಯಾನಿಕ್, ಸಿಎನ್‌ಸಿ, ಎಮ್‌ಇವಿ, ಡೀಸೆಲ್, ಮೆಕ್ ಕೊಪಾ, ವೃತ್ತಿಯ ತರಬೇತಿದಾರರು ಐ.ಟಿ.ಐ ಅಂಕಪಟ್ಟಿ ಬಯೋಡಾಟಾ ಮತ್ತು ಫೋಟೋ ಹಾಗೂ ಇತರೆ ದಾಖಲಾತಿಗಳೊಂದಿಗೆ (ಮೂಲ ಹಾಗೂ ಜಿರಾಕ್ಸ್ ಪ್ರತಿಗಳೊಂದಿಗೆ) ಶಿಶಿಕ್ಷು ಮೇಳದಲ್ಲಿ ಪಾಲ್ಗೊಂಡು ಶಿಶಿಕ್ಷು ಯೋಜನೆಯ ಸದುಪಯೋಗ ಪಡೆದುಕೊಳ್ಳಲು ಸೂಚಿಸಿದೆ. ಅದೇ ರೀತಿ ಉದ್ದಿಮೆದಾರರು ಸಹ ಈ ಮೇಳದಲ್ಲಿ ಪಾಲ್ಗೊಂಡು ಅಗತ್ಯವಿರುವ ಅಭ್ಯರ್ಥಿಗಳನ್ನು ಶಿಶಿಕ್ಷು ತರಬೇತಿಗಾಗಿ ಆಯ್ಕೆ ಮಾಡಿಕೊಳ್ಳಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಯಾದಗಿರಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಂಶುಪಾಲರ ಮೊ.ನಂ. 7899543288, 7411057751, 903623566ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಿಯಾಂಕ್ ಹದ್ದುಬಸ್ತಿನಲ್ಲಿ ಮಾತಾಡಲಿ: ಎಚ್‌ಡಿಕೆ



ಬೆಂಗಳೂರು, ಅ. 23– ನನ್ನ ಮತ್ತು ನಮ್ಮ ಪಕ್ಷದ ಬಗ್ಗೆ ಮಾತನಾಡುವ ನೈತಿಕತೆಯನ್ನು ಸಚಿವ ಪ್ರಿಯಾಂಕ ಖರ್ಗೆ ಉಳಿಸಿಕೊಂಡಿಲ್ಲ. ಮಾತನಾಡಬೇಕಾದರೆ ಅವರು ಹದ್ದುಬಸ್ತಿನಲ್ಲಿ ಮಾತನಾಡಲಿ ಎಂದು ಕೇಂದ್ರ ಸಚಿವ ಹೆಚ್. ಡಿ. ಕುಮಾರಸ್ವಾಮಿ ಪ್ರಿಯಾಂಕ ವಿರುದ್ಧ ಕಿಡಿಕಾರಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಧಿಕಾರಿ ಹಿಡಿಯುವುದಕ್ಕೋಸ್ಕರ ಕಾಂಗ್ರೆಸ್‌ನವರು ಯಾರ ಹತ್ತಿರ ಬೇಕಾದರೂ ಬರುತ್ತಾರೆ.

ಅಂದು ನಮ್ಮ ಮನೆ ಬಾಗಿಲಿಗೆ ಬಂದು ಸರ್ಕಾರ ರಚಿಸಿದ್ದರು. ನಂತರ ಅವರು ಯಾವ ರೀತಿ ಬೆನ್ನಿಗೆ ಚಾಕು ಹಾಕಿದ್ದಾರೆ ಎಲ್ಲವೂ ಗೊತ್ತಿದೆ ಎಂದು ತರಾಟೆಗೆ ತೆಗೆದುಕೊಂಡರು.

ಕಾಂಗ್ರೆಸ್ ನಾಯಕರುಗಳು ದೇಶದಲ್ಲಿ ಯಾರ ಯಾರನ್ನು ಅಧಿಕಾರದಿಂದ ತೆಗೆದಿದ್ದಾರೆ ಎಲ್ಲವೂ ಗೊತ್ತಿದೆ. ಚರಣ್‌ಸಿಂಗ್ ಪ್ರಧಾನಿಯಾಗಿದ್ದಾಗ ಅವರಿಗೆ ಆಡಳಿತ ನಡೆಸಲು ಬಿಡಲಿಲ್ಲ. ಚಂದ್ರಶೇಖರ್ ಪ್ರಧಾನಿಯಾಗಿದ್ದಾಗಲೂ ಕಿರುಕುಳ ನೀಡಿ ಅವರ ರಾಜಕೀಯ ಭವಿಷ್ಯವನ್ನೇ ಹಾಳು ಮಾಡಿದ್ದರು. ದೇವೇಗೌಡರ ರಾಜಕೀಯವನ್ನು ನಿರ್ನಾಮ ಮಾಡಿದ್ದು ಕಾಂಗ್ರೆಸ್‌ವರೇ. ಇವರಿಂದ ನಾವು ಏನಾದರೂ ಕಲಿಯುವ ಅಗತ್ಯವಿದೆಯೇ ಎಂದು

*** ಆಕ್ರೋಶ ಹೊರ ಹಾಕಿದರು.**

ಪ್ರಿಯಾಂಕ ಖರ್ಗೆ ಅವರು ಮಾತನಾಡುವಾಗ ಸ್ವಲ್ಪ ಹದ್ದುಬಸ್ತಿನಲ್ಲಿ ಮಾತನಾಡಲಿ. ಇವತ್ತು ರಾಜ್ಯದಲ್ಲಿ ಜನ ಕಾಂಗ್ರೆಸ್‌ಗೆ 130 ಶಾಸಕರನ್ನು ಗೆಲ್ಲಿಸಿ ಕೊಟ್ಟಿರುವುದು ಜನರ ಸಮಸ್ಯೆ ಕೇಳಲಿಕ್ಕೆ ಬೇರೆಲ್ಲೂ ಬೇಡ ಕಲಬುರುಗಿಯಲ್ಲಿ ಜನ ಕಷ್ಟದಲ್ಲಿದ್ದಾರೆ. ಆ ಕಡೆ ಗಮನ ಕೊಡಲಿ. ಬೆಳೆ ಕಳೆದುಕೊಂಡ ರೈತ ಕಷ್ಟ ಹೇಳಲು ಹೋದಾಗ ಪ್ರಿಯಾಂಕ ತಂದೆ ಏನು ಹೇಳಿದರು. 40 ಎಕರೆ ಜಮೀನಿನಲ್ಲಿ ನನ್ನ ಬೆಳೆಯೆ ನಷ್ಟವಾಗಿದೆ ಎಂದೆಲ್ಲಾ ಮಾತನಾಡಿದರು ಇಂತಹವರಿಂದ ರಾಜಕೀಯ ಯಾವ ರೀತಿ ನಡೆದುಕೊಳ್ಳಬೇಕು ಎಂಬುದನ್ನು ತಿಳಿದುಕೊಳ್ಳುವ ಅವಶ್ಯಕತೆ ನನಗಿಲ್ಲ ಎಂದರು. ಆರ್‌ಎಸ್‌ಎಸ್‌ನ್ನು ಜೆಡಿಎಸ್ ಈ ಈ ಹಿಂದೆ ಟೀಕೆ ಮಾಡಿತ್ತು ಎಂಬ ಪ್ರಿಯಾಂಕ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಆರ್‌ಎಸ್‌ಎಸ್‌ನ ಕೆಲ ನಡಾವಳಿಗಳ ಬಗ್ಗೆ ನಾನು ಟೀಕೆ ಮಾಡಿದ್ದೇನೆ ಇಲ್ಲ ಅಂತ ಹೇಳಿಲ್ಲ. ಒಟ್ಟಾರೆ ಆರ್‌ಎಸ್‌ಎಸ್‌ನ್ನೇ ನಾನು ಟೀಕಿಸಿಲ್ಲ. ಅವರ ನಡಾವಳಿ ಹಾಗೂ ಕೆಲ ವಿಚಾರಗಳ ಬಗ್ಗೆ ಟೀಕಿಸಿರುವುದು ನಿಜ ಎಂದರುಹಣ ಅಧಿಕಾರಕ್ಕಾಗಿ ಜೆಡಿಎಸ್ ಕೇಸರಿಕರಣವಾಗಿದೆ ಎಂಬ ಪ್ರಿಯಾಂಕ ಹೇಳಿಕೆಗೂ ಕಿಡಿಕಾರಿದ ಅವರು, 2018ರಲ್ಲಿ ಅಧಿಕಾರಕ್ಕಾಗಿ ನಮ್ಮ ಮನೆ ಬಾಗಿಲಿಗೆ ಬಂದರು ನಂತರ ಸರ್ಕಾರ ನಡೆಸೋಕೆ ಇವರು ಬಿಟ್ಟರಾ ನಾವು ವೆಸ್ಟೆಂಡ್ ಹೋಟೆಲ್‌ನಲ್ಲಿ ಇರುತ್ತನೇ ಎಂದೆಲ್ಲಾ ಆರೋಪ ಮಾಡಿದ್ದರು ನಾನು ಹೋಟೆಲ್‌ನಲ್ಲಿ ಮಲಗಿದ್ದರೆ ರೈತರ 25 ಸಾವಿರ ಕೋಟಿ ರೂ. ಸಾಲ ಮನ್ನಾ ಮಾಡಲು ಆಗುತ್ತಿತ್ತಾ ಎಂದರು. ನಾನು ಮುಖ್ಯಮಂತ್ರಿಯಾಗಿದ್ದಾಗ ಕಾಂಗ್ರೆಸ್ ಶಾಸಕರಿಗೆ ಅಭಿವೃದ್ಧಿಗಾಗಿ 19 ಸಾವಿರ ಕೋಟಿ ರೂ.ಗಳನ್ನು ಒಂದು ವರ್ಷದಲ್ಲಿ ಕೊಟ್ಟೆ ಇವತ್ತು ಸಿದ್ಧರಾಜಿಸಾಮಯ್ಯ ಮಾತನಾಡುತ್ತಾರೆ. ದಾಖಲೆ ಇದೆಯಲ್ಲಾ ಅದನ್ನು ನೋಡಲಿ ಎಂದು ತಿರುಗೇಟು ನೀಡಿದರು. ಜೆಡಿಎಸ್ ರಾಜ್ಯಾಧ್ಯಕ್ಷರ ಬದಲಾವಣೆ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ ಸದ್ಯಕ್ಕೆ ನಾನಾ ತಾತ್ಕಾಲಿಕ ರಾಜ್ಯಾಧ್ಯಕ ಆಗಿದ್ದೇನೆ. ಇನ್ನೊಂದು ಕಡೆ ನಿಖಿಲ್ ಕುಮಾರಸ್ವಾಮಿ ಜವಾಬ್ದಾರಿ ತೆಗೆದುಕೊಂಡು ಓಡಾಡುತ್ತಿದ್ದಾರೆ. ನಿಖಿಲ್ ಕುಮರಾಸ್ವಾಮಿ ಅವರಿಗೆ ಪಕ್ಷದ ಜವಾಬ್ದಾರಿ ನೀಡುವ ಬಗ್ಗೆ ಇನ್ನೂ ಚರ್ಚೆಗಳು ಆಗಿಲ್ಲ ಎಂದು ಸ್ಪಷ್ಟಪಡಿಸಿದರು.

***ಸಮನ್ವಯ ಸಮಿತಿ**

ಬಿಜೆಪಿ–ಜೆಡಿಎಸ್ ಸಮನ್ವಯ ಸಮಿತಿ ರಚನೆ ಮಾಡಬೇಕು ಎಂಬ ತೀರ್ಮಾನ ಆಗಿದೆ. ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಮತ್ತು ನಾಯಕರುಗಳ ಜತೆ ಚರ್ಚೆ ಮಾಡಿದ್ದೇನೆ. ಸದ್ಯದಲ್ಲೇ ಸಮನ್ವಯ ಸಮಿತಿ ರಚನೆಯಾಗಲಿದೆ ಎಂದು ಹೇಳಿದರು.

## ಅ.28 ರಂದು 8ನೇ ಸುತ್ತಿನ ಕಾಲು ಬಾಯಿ ರೋಗ ಲಸಿಕಾ ಅಭಿಯಾನ ಪೂರ್ವಭಾವಿ ಸಭೆ

ಯಾದಗಿರಿ : ಅ 23 : ಯಾದಗಿರಿ ಜಿಲ್ಲೆಯ ರಾಷ್ಟ್ರೀಯ ಜಾನುವಾರು ರೋಗನಿಯಂತ್ರಣ ಕಾರ್ಯಕ್ರಮವನ್ನು 2025ರ ಅಕ್ಟೋಬರ್ 28 ರಂದು ಸಂಜೆ 5 ಗಂಟೆಗೆ 8ನೇ ಸುತ್ತಿನ ಕಾಲು ಬಾಯಿ ರೋಗ ಲಸಿಕಾ ಅಭಿಯಾನ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಯಾದಗಿರಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಉಪ ನಿರ್ದೇಶಕರು (ಆಡಳಿತ) ಅವರು ತಿಳಿಸಿದ್ದಾರೆ.

ಜಾನುವಾರು ಆರೋಗ್ಯ ಮತ್ತು ರೋಗನಿಯಂತ್ರಣ ಕಾರ್ಯಕ್ರಮದಡಿ (ಎಲ್‌ಹೆಚ್‌ಡಿಸಿಪಿ, ಎನ್‌ಎಡಿಸಿಪಿ) 8ನೇ ಸುತ್ತಿನ ಕಾಲು ಬಾಯಿ ರೋಗ (ಎಸ್‌ಎಮ್‌ಡಿ) ಲಸಿಕಾ ಕಾರ್ಯಕ್ರಮ ಅಭಿಯಾನದ ಪೂರ್ವಭಾವಿ ಸಭೆ ಅನುಷ್ಠಾನ ಕುರಿತು ಚರ್ಚೆ ಅಂ–ದು ಉಸ್ತುವಾರಿ ಸಮಿತಿ ಸಭೆಯನ್ನು ಯಾದಗಿರಿ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ಸಭೆಯ ವಿಷಯ ಸೂಚಿ ಜಿಲ್ಲೆಯಲ್ಲಿ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 8ನೇ ಸುತ್ತಿನ ಕಾಲು ಬಾಯಿ ರೋಗ ಲಸಿಕಾ ಅಭಿಯಾನದ ಪೂರ್ವಸಿದ್ಧತೆ ಮತ್ತು ಅನುಷ್ಠಾನದ ಕುರಿತು ಚರ್ಚೆ, ಹುಚ್ಚು ನಾಯಿ ರೋಗದ ಲಸಿಕೆ ಕಾರ್ಯಕ್ರಮದ ಪ್ರಗತಿ ಮತ್ತು ಎಬಿಸಿ ಪ್ರಾಣಿ ಜನನ ನಿಯಂತ್ರಣದ ಕಾರ್ಯಕ್ರಮದ ಬಗ್ಗೆ ಚರ್ಚೆ, 1962 ಪಶು ಸಂಜೀವಿನಿ ಅಂಬ್ಯುಲೆನ್ಸ್ ಘಟಕದ ತ್ರೈಮಾಸಿಕದ ಪ್ರಗತಿ ಬಗ್ಗೆ ಚರ್ಚೆ, ಇನ್ನಿತರ ವಿಷಯಗಳ ಚರ್ಚೆ, ನಡೆಯಲಿದೆ. ಈ ಸಭೆಗೆ ಹಾಜರಾಗುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನರ ಸೇವೆಗೆ ಬದುಕುಮುಡಿಪು ಮಾಜಿ ಶಾಸಕ ಪ್ರಕಾಶ ಖಂಡ್ರೆ



**ಕ್ಷೇತ್ರದಲ್ಲಿ ಎರಡು ಅವಧಿಯಲ್ಲಿ ಅಧಿಕಾರದಲ್ಲಿದ್ದ ಸಂದರ್ಭದಲ್ಲಿ ಅನೇಕ ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದೇನೆ. ಆ ಕಾರಣಕ್ಕಾಗಿಯೇ ಇಂದಿಗೂ ಜನರು ನನ್ನನ್ನು ಅತ್ಯಂತ ಪ್ರೀತಿ, ಗೌರವದಿಂದ ಕಾಣುತ್ತಾರೆ.**

**-ಪ್ರಕಾಶ ಖಂಡ್ರೆ ಮಾಜಿ ಶಾಸಕರು ಭಾಲ್ಕಿ**

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.23:ಕ್ಷೇತ್ರದ ಜನರ ಸೇವೆಗಾಗಿ ಮಾಜಿ ಶಾಸಕ ಪ್ರಕಾಶ ಖಂಡ್ರೆ ತಮ್ಮ ಬದುಕು ಮುಡಿಪಾಗಿಟ್ಟಿದ್ದಾರೆ ಎಂದು ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು. ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ 68ನೇ ವಸಂತಕ್ಕೆ ಕಾಲಿರಿಸಿದ ಮಾಜಿ ಶಾಸಕ ಪ್ರಕಾಶ ಖಂಡ್ರೆ ಅವರನ್ನು ಬುಧವಾರ ಸನ್ಮಾನಿಸಿ, ಅವರು ಮಾತನಾಡಿದರು.

ಅಧಿಕಾರ ಇದ್ದಾಗ ಹಿಗ್ಗದೆ, ಅಧಿಕಾರ ಇಲ್ಲದಿದ್ದಾಗ ಕುಗ್ಗದೆ ಜನರ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿರುವ ಮಾಜಿ ಶಾಸಕರ ಜನಪರ ಯೋಜನೆಗಳನ್ನು ಇಂದಿಗೂ ಜನರು ನನೆಯುತ್ತಾರೆ ಎಂದರು. ಅವರಿಗೆ ವಿಶ್ವಗುರು ಬಸವಣ್ಣನವರು ಉತ್ತಮ ಆಯುಷ್ಯ, ಆರೋಗ್ಯ ಕೊಟ್ಟು ಕಾಪಾಡಲಿ ಎಂದು ಹಾರೈಸಿದ್ದಾರೆ.

ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸಿದ್ದರು. ಸನ್ಮಾನ ಸ್ವೀಕರಿಸಿ ಮಾಜಿ ಶಾಸಕ ಪ್ರಕಾಶ ಖಂಡ್ರೆ ಮಾತನಾಡಿದರು. ಈ ಸಂದರ್ಭದಲ್ಲಿ ಯುವ ಮುಖಂಡ ಪ್ರಸನ್ನ ಖಂಡ್ರೆ, ಅಮರ ಜಲ್ದೆ ಸೇರಿದಂತೆ ಹಲವರು ಇದ್ದರು.

*** ಜನ್ಮದಿನದ ಸಂಭ್ರಮ :**

ಪಟ್ಟಣದಲ್ಲಿ ಮಾಜಿ ಶಾಸಕರ ಜನ್ಮದಿನ ಸಂಭ್ರಮ ಮನೆ ಮಾಡಿತು. ಬಿಜೆಪಿ ಪ್ರಮುಖರು, ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಮಾಜಿ ಶಾಸಕರ ನಿವಾಸಕ್ಕೆ ಭೇಟಿ ನೀಡಿ ಪ್ರಕಾಶ ಖಂಡ್ರೆ ಅವರನ್ನು ಕೇಕ್ ಕತ್ತರಿಸಿ, ಸನ್ಮಾನಿಸಿ, ಜನ್ಮದಿನದ ಶುಭ ಕೋರಿದರು. ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಸೇರಿದಂತೆ ಮುಂತಾದವರು ಮಾಜಿ ಶಾಸಕರನ್ನು ಸನ್ಮಾನಿಸಿ, ಶುಭ ಕೋರಿದರು. ತಾಲೂಕು ಬಿಜೆಪಿ ಅಧ್ಯಕ್ಷ ವೀರಣ್ಣ ಕಾರಬಾರಿ, ಡಿಗಂಬರರಾವ ಮಾನಕಾರಿ, ತಾನಾಜಿ ರಾಠೋಡ್, ರವಿ ಕಣಜೆ, ವೆಂಕಟರಾವ ಬಿರಾದಾರ್, ಕೆ.ಡಿ.ಗಣೇಶ, ಗಂಗಾಧರ ಹೊಸಳ್ಳಿ, ಕರಬಸಪ್ಪ ಧೂಳಾ, ಗುರಯ್ಯಸ್ವಾಮಿ, ಸಂಜೀವ ಶಿಂಧೆ, ಸಂತೋಷ ಭುಸಗುಂಡೆ, ಸಂತೋಷ ಪಾಟೀಲ್ ಹಲ್ಸಿ ಸೇರಿದಂತೆ ಹಲವರು ಇದ್ದರು.

## ರೀಲ್ಸ್ ಹುಚ್ಚಾಟ; ಹಳಿ ಮೇಲೆ ನಿಂತು ವಿಡಿಯೋ ಮಾಡ್ತಿದ್ದ ಯುವಕನಿಗೆ ಗುದ್ದಿದ ರೈಲು


ಪುರಿ: ಅ.23:ದೇಶದಲ್ಲಿ ರೀಲ್ಸ್ ಹುಚ್ಚಾಟಕ್ಕೆ ಮತ್ತೊಂದು ಸಾವು ಸಂಭವಿಸಿದ್ದು, ಹಳಿ ಮೇಲೆ ನಿಂತು ಯುವಕನೋರ್ವ ವಿಡಿಯೋ ಮಾಡುತ್ತಿದ್ದಾಗ ರೈಲು ಗುದ್ದಿಕೊಂಡು ಹೋಗಿರುವ ವಿಡಿಯೋ ವ್ಯಾಪಕ ವೈರಲ್ ಆಗುತ್ತಿದೆ.

ಒಡಿಶಾದ ಪುರಿಯಲ್ಲಿ ರೈಲ್ವೆ ಹಳಿಯಲ್ಲಿ ರೀಲ್ಸ್ ಚಿತ್ರೀಕರಿಸುತ್ತಿದ್ದ 15 ವರ್ಷದ ಬಾಲಕ ರೈಲು ಡಿಕ್ಕಿ ಹೊಡೆದು ಸಾವನ್ನಪ್ಪಿದ್ದಾನೆ. ಮಂಗಳವಾರ ಜನಕ್ ದೇವ್‌ಪುರ ರೈಲ್ವೆ ನಿಲ್ದಾಣದಲ್ಲಿ ಈ ಘಟನೆ ನಡೆದಿದೆ.

ಮೂಲಗಳ ಪ್ರಕಾರ ಮಂಗಳಘಾಟ್‌ನ ನಿವಾಸಿ ವಿಶ್ವಜೀತ್ ಸಾಹು ತನ್ನ ತಾಯಿಯೊಂದಿಗೆ ದಕ್ಷಿಣಕಾಳಿ ದೇವಸ್ಥಾನಕ್ಕೆ ಭೇಟಿ ನೀಡಿದ್ದರು. ಮನೆಗೆ ಹಿಂದಿರುಗುವಾಗ, ಸಾಮಾಜಿಕ ಮಾಧ್ಯಮಕ್ಕಾಗಿ ಸಣ್ಣ ವೀಡಿಯೊವನ್ನು ರೆಕಾರ್ಡ್ ಮಾಡಲು ವಿಶ್ವಜೀತ್ ಸಾಹು ರೈಲ್ವೆ ಹಳಿಗಳ ಬಳಿ ನಿಂತಿದ್ದ. ಈ ವೇಳೆ ರೈಲು ಬರುತ್ತಿರುವುದನ್ನು ಗಮನಿಸಿದ ವಿಶ್ವಜೀತ್ ಹಳಿಯ ತುದಿಯಲ್ಲಿ ನಿಂತು ರೈಲು ಹೋಗುವುದನ್ನು ಚಿತ್ರೀಕರಿಸಲು ಮುಂದಾದ. ಈ ವೇಳೆ ರೈಲು ಆತನಿಗೆ ಢಿಕ್ಕಿಯಾಗಿ ಆತ ಕೂಡಲೇ ಕುಸಿದಿದ್ದಾನೆ. ಈ ವೇಳೆ ರೈಲು ಹಾದುಹೋಗುವ ಶಬ್ಧ ಕೂಡ ಮೊಬೈಲ್ ನಲ್ಲಿ ದಾಖಲಾಗಿದೆ. ವಿಷಯ ತಿಳಿದ ಕೂಡಲೇ ಸ್ಥಳಕ್ಕೆ ದೌಡಾಯಿಸಿದ ಒಡಿಶಾ ರೈಲ್ವೆ ಪೊಲೀಸರು (ಜಿಆರ್‌ಪಿ) ಶವವನ್ನು ಹೊರತೆಗೆದು, ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದಾರೆ. ಅಂತೆ–ಯೇ ಒಡಿಶಾದಲ್ಲಿ ರೀಲ್ಸ್ ಹುಚ್ಚಾಟಕ್ಕೆ ಯುವಕರು ಬಲಿಯಾಗುತ್ತಿರುವುದು ಇದೇ ಮೊದಲೇನಲ್ಲ.. ಈ ಹಿಂದೆ ಅಂದರೆ ಆಗಸ್ಟ್‌ನಲ್ಲಿ, ಗಂಜಾಂ ಜಿಲ್ಲೆಯ ಬೆರ್ಹಾಂಪುರದಿಂದ ಬಂದ 22 ವರ್ಷದ ಯೂಟ್ಯೂಬರ್, ಒಡಿಶಾದ ಕೊರಾಪುಟ್‌ನಲ್ಲಿರುವ ದುಡುಮಾ ಜಲಪಾತದಲ್ಲಿ ರೀಲ್ ಚಿತ್ರೀಕರಿಸುವಾಗ ನೀರಿನಲ್ಲಿ ಕೊಚ್ಚಿ ಹೋಗಿ ನಾಪತ್ತೆಯಾಗಿದ್ದರು. ಸಾಗರ್ ತುಡು ಎಂಬಾತ ತನ್ನ ಸ್ನೇಹಿತ ಅಭಿಜಿತ್ ಬೆಹೆರಾ ಅವರೊಂದಿಗೆ ಡ್ರೋನ್ ಕ್ಯಾಮೆರಾ ಬಳಸಿ ತಮ್ಮ ಯೂಟ್ಯೂಬ್ ಚಾನೆಲ್‌ಗಾಗಿ ಸ್ಥಳೀಯ ಪ್ರವಾಸಿ ತಾಣಗಳ ವೀಡಿಯೊಗಳನ್ನು ರೆಕಾರ್ಡ್ ಮಾಡಲು ಆ ಪ್ರದೇಶಕ್ಕೆ ಭೇಟಿ ನೀಡಿದ್ದ.

ಲಮ್ತಾಪುಟ್ ಪ್ರದೇಶದಲ್ಲಿ ಭಾರೀ ಮಳೆಯಾದ ನಂತರ ಮಚಕುಂಡ ಅಣೆಕಟ್ಟಿನ ಅಧಿಕಾರಿಗಳು ನೀರನ್ನು ಬಿಡುಗಡೆ ಮಾಡಿದಾಗ ಈ ಅಪಘಾತ ಸಂಭವಿಸಿತ್ತು.

## ನಾಳೆ ಬೌದ್ಧ ಧಮ್ಮ ಸಮ್ಮೇಳನ ಮತ್ತು ವಿಚಾರ ಸಂಕಿರಣ



ಕಲಬುರಗಿ: ಅ.23: ನಗರದ ಡಾ. ಎಸ್.ಎಂ. ಪಂಡಿತ್ ರಂಗಮಂದಿರದಲ್ಲಿ ಅಕ್ಟೋಬರ್ 25ರಂದು ಬೆಳಿಗ್ಗೆ ಹನ್ನೊಂದು ಗಂಟೆಗೆ ಬೌದ್ಧ ಧಮ್ಮ ಸಮ್ಮೇಳನ ಮತ್ತು ವಿಚಾರ ಸಂಕಿರಣವನ್ನು ಜಿಲ್ಲಾಮಟ್ಟದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಅಮರಜ್ಯೋತಿ ಭಂತೇಜಿ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಿಗ್ಗೆ ಹತ್ತು ಗಂಟೆಗೆ ಜಗತ್ ವೃತ್ತದಲ್ಲಿ ಜಮಾವಣೆಗೊಂಡು ಮೆರವಣಿಗೆಯೊಂದಿಗೆ ಪಾದಯಾತ್ರೆಯಲ್ಲಿ ಡಾ. ಎಸ್.ಎಂ. ಪಂಡಿತ್ ರಂಗಮಂದಿರದವರೆಗೆ ಬರಲಾಗುವುದು. ನಂತರ ವೇದಿಕೆಯ ಕಾರ್ಯಕ್ರಮ ಆರಂಭವಾಗಲಿದೆ ಎಂದರು.

ಉದ್ಘಾಟನೆಯನ್ನು ಬುದ್ಧಗಯಾ ಮಹಾಬೋಧಿ ಮಹಾವಿಹಾರ ಮುಕ್ತಿ ಆಂದೋಲನದ ಯೋಧ ಭಂತೆ ವಿನಾಚಾರ್ ಅವರು ನೆರವೇರಿಸುವರು. ಸಾನಿಧ್ಯವನ್ನು ಲಾತೂರಿನ ಭಂತೆ ಪಯ್ಯಾನಂದ್, ಅಧ್ಯಕ್ಷತೆಯನ್ನು ನಗರದ ಬುದ್ಧವಿಹಾರದ ಭಂತೆ ಸಂಗಾನಂದ್, ಸಮ್ಮೇಳನದ ನೇತೃತ್ವವನ್ನು ಬೆಳಮಗಿಯ ಧ್ಯಾನಭೂಮಿ ಬುದ್ಧವಿಹಾರದ ಭಂತೆ ಅಮರಜ್ಯೋತಿ, ಅಣದೂರಿನ ಭಂತೆ ವರಜ್ಯೋತಿ, ಬೀದರ್‌ನ ಭಂತೆ ಸಂಘರಕ್ಷಿತ, ಸೊಲ್ಲಾಪುರದ ಭಂತೆ ಯಶ್, ಬೀದರ್‌ನ ಭಂತೆ ಧಮ್ಮದೀಪ್ ಅವರು ವಹಿಸುವರು ಎಂದು ಅವರು ಹೇಳಿದರು.

ಮೈಸೂರಿನ ಉರಿಲಿಂಗಪೆದ್ದಿ ಮಠದ ಪೀಠಾಧಿಪತಿ ಜ್ಞಾನಪ್ರಕಾಶ್ ಸ್ವಾಮೀಜಿ ವಿಶೇಷ ಉಪಸ್ಥಿತಿ ಹೊಂದುವರು. ಮುಖ್ಯ ಅತಿಥಿಗಳಾಗಿ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್, ಐಟಿಬಿಟಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಸಂಸದ ರಾಧಾಕೃಷ್ಣ ದೊಡ್ಡಮನಿ, ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್, ಉತ್ತರ ಕ್ಷೇತ್ರದ ಶಾಸಕಿ ಶ್ರೀಮತಿ ಕನೀಜ್ ಫಾತಿಮಾ, ಅತಿಥಿಗಳಾಗಿ ಮಹಾಪೌರರಾದ ಶ್ರೀಮತಿ ವರ್ಷಾ ಜಾನೆ, ಉಪ ಮಹಾಪೌರರಾದ ಶ್ರೀಮತಿ ತೃಪ್ತಿ ಶ್ರೀನಿವಾಸ್ ಲಾಖೆ ಅವರು ಆಗಮಿಸುವರು ಎಂದು ಅವರು ತಿಳಿಸಿದರು.

ಬಿಹಾರದ ಬುದ್ಧಗಯಾ ದೇವಾಲಯವನ್ನು ಬುದ್ಧರ ವಶಕ್ಕೆ ಒಪ್ಪಿಸಲು ಮತ್ತು 1949 ಬಿಟಿ ಕಾಯ್ದೆ ರದ್ದುಪಡಿಸಿ ಹಿಂದೂ ಬ್ರಾಹ್ಮಣರನ್ನು ಹೊರಹಾಕಿ ಸಂಪೂರ್ಣ ಬೌದ್ಧ ಧಮ್ಮ ಭಿಕ್ಕು ಮತ್ತು ಭಿಕ್ಕುಣಿಯರಿಂದ ಕೂಡಿದ ಹೊಸದಾಗಿ ಬಿಟಿ ಕಾಯ್ದೆಯನ್ನು ರಚಿಸಲು ಒತ್ತಾಯಿಸಿ ಸಾವಿರಾರು ಜನ ಭಿಕ್ಕು ಮತ್ತು ಬಿಕ್ಕುಣಿಯರು ಬುದ್ಧ ಗಯಾ ದೇವಾಲಯದ ಆವರಣದಲ್ಲಿ ಸರದಿ ಉಪವಾಸ ಸತ್ಯಾಗ್ರಹ ಆರಂಭಿಸಿ ಆರು ತಿಂಗಳು ಮೇಲಾಗಿದೆ. ಆದಾಗ್ಯೂ, ಕೇಂದ್ರ ಸರ್ಕಾರವು ಬೇಡಿಕೆಗೆ ಸ್ಪಂದಿಸುತ್ತಿಲ್ಲ. ಹಾಗಾಗಿ ಕೇಂದ್ರದ ಮೇಲೆ ಒತ್ತಡ ತರಲು ಜಿಲ್ಲಾ ಮಟ್ಟದಲ್ಲಿ ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ ಎಂದು ಅವರು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಅಣದೂರಿನ ಭಂತೇಜಿ ರಮೇಶ್ ಪಟ್ಟೇದಾರ್, ದಿಗಂಬರ್ ಬೆಳಮಗಿ, ನಾಗಮೂರ್ತಿ ಶೀಲವಂತ, ಎ.ಬಿ. ಹೊಸಮನಿ ಮುಂತಾದವರು ಉಪಸ್ಥಿತರಿದ್ದರು.

# ಪ್ರಸಿದ್ಧ ಅದ್ಯಾತ್ಮ ಕೇಂದ್ರ ಪಂಚಮುಖಿಯ ಆಂಜನೇಯ ದೇವರ ದರ್ಶನ ಪಡೆದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 22: ರಾಜ್ಯದ ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ದೀಪಾವಳಿ ಹಬ್ಬದ ಸಂಭ್ರಮದ ವೇಳೆ ಅಕ್ಟೋಬರ್ 22ರಂದು ರಾಯಚೂರಗೆ ಜಿಲ್ಲೆಗೆ ಭೇಟಿ ನೀಡಿ, ರಾಯಚೂರು ಗ್ರಾಮೀಣ ಪ್ರದೇಶದಲ್ಲಿನ ಗಾಣದಾಳ ಗ್ರಾಮದ ಹತ್ತಿರದ ಪಂಚಮುಖಿ ಆಂಜನೇಯ ದೇವರ ದರ್ಶನ ಪಡೆದುಕೊಂಡರು.

ಪೂರ್ವ ನಿಗದಿಯಂತೆ ಬೆಳಗ್ಗೆ, ಆಂಧ್ರಪ್ರದೇಶದ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿಗಳ ದರ್ಶನ ಪಡೆದು ಅಲ್ಲಿಂದ ರಸ್ತೆ ಮಾರ್ಗವಾಗಿ ಹೊರಟು ಬೆಳಗಿನ 10.45ರ ವೇಳೆಗೆ ರಾಯಚೂರು ಗ್ರಾಮೀಣ ಪ್ರದೇಶದ ಪ್ರಸಿದ್ಧ ಅಧ್ಯಾತ್ಮ ಕೇಂದ್ರ ಪಂಚಮುಖಿ ಶ್ರೀ ಆಂಜನೇಯ ದರ್ಶನ ಪಡೆದುಕೊಂಡರು. ದೇವಸ್ಥಾನದ ಪುರೋಹಿತರಾದ ಶ್ರೀ ಭಾರತಿ ಆಚಾರ್ಯ, ಶ್ರೀ ಶ್ಯಾಮಾಚಾರ್ಯ, ಶ್ರೀ ಅನಂತಾಚಾರ್ಯ ಮತ್ತು ಶ್ರೀ ಗುರುಭೀಮಾಚಾರ್ಯ ಅವರು ಪೂಜಾ ಕೈಂಕರ್ಯ ನಡೆಸಿಕೊಟ್ಟರು.

ಡಿ.ಕೆ.ಶಿವಕುಮಾರ ಅವರ ಇಷ್ಟಾರ್ಥ ಸಿದ್ಧಿಗಾಗಿ ಪಂಚಮುಖಿ ಆಂಜನೇಯ ಉತ್ಸವ ಮೂರ್ತಿಗೆ ಇದೆ ವೇಳೆ ಪುಷ್ಪಾರ್ಚನೆ ನೆರವೇರಿತು.

ಈ ಸಂದರ್ಭದಲ್ಲಿ ಸಚಿವರಾದ ಎನ್ ಎಸ್ ಬೋಸರಾಜು, ಸಂಸದರಾದ ಜಿ ಕುಮಾರ ನಾಯಕ, ಶಾಸಕರಾದ ಬಸನಗೌಡ ದದ್ದಲ್, ಬಸವನಗೌಡ ತುರವಿಹಾಳ, ಮುಖಂಡರಾದ ಅಸ್ಲಂ ಪಾಶಾ ಸೇರಿದಂತೆ ಇನ್ನಿತರರು ಇದ್ದರು. ದೇವರ ದರ್ಶನ ಬಳಿಕ ಡಿ.ಕೆ.ಶಿವಕುಮಾರ ಅವರು ಪಕ್ಷದ ಕಾರ್ಯಕ್ರಮದಲ್ಲಿ ಭಾಗಿಯಾದರು.



ರಾಯಚೂರು ಜಿಲ್ಲೆಯ ಪ್ರವಾಸದ ವೇಳೆಯಲ್ಲಿ, ರಾಜ್ಯದ ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಅಕ್ಟೋಬರ್ 22ರಂದು ರಾಯಚೂರ ತಾಲೂಕಿನ ಗಾಣದಾಳ ಗ್ರಾಮದ ಹತ್ತಿರದ ಪಂಚಮುಖಿ ಆಂಜನೇಯ ದೇವರ ದರ್ಶನ ಪಡೆದುಕೊಂಡರು. ಈ ವೇಳೆ ಸಚಿವರಾದ ಎನ್ ಎಸ್ ಬೋಸರಾಜು, ಸಂಸದರಾದ ಜಿ ಕುಮಾರ ನಾಯಕ, ಶಾಸಕರಾದ ಬಸನಗೌಡ ದದ್ದಲ್, ಆರ್ ಬಸನಗೌಡ ತುರವಿಹಾಳ, ವಿಧಾನ ಪರಿಷತ್ ಶಾಸಕರಾದ ಬಸನಗೌಡ ಬಾದರ್ಲಿ ಹಾಗೂ ಇನ್ನಿತರರು ಇದ್ದರು. (ಮಲ್ಲಮ್ಮ ನುಡಿ ಚಿತ್ರ)

# ಯುವ ಪೀಳಿಗೆಗೆ ಕಿತ್ತೂರು ರಾಣಿ ಚೆನ್ನಮ್ಮ ಸಾಧನೆ- ಇತಿಹಾಸ ಪರಿಚಯಿಸುವ ಕಾರ್ಯ ಅಗತ್ಯ

ಮಲ್ಲಮ್ಮ ನುಡಿ ವಾರ್ತೆ

ತುಮಕೂರು,ಅ.23– ಸ್ವಾತಂತ್ರ್ಯ ಹೋರಾಟಗಾರ್ತಿ ರಾಣಿ ಚೆನ್ನಮ್ಮನವರ ಸಾಧನೆ ಮತ್ತು ಕಿತ್ತೂರಿನ ಇತಿಹಾಸವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕೆಲಸವನ್ನು ಕರ್ನಾಟಕ ರಾಜ್ಯ ಸರ್ಕಾರ ಹೆಚ್ಚಿನ ಮುತುವರ್ಜಿಯಿಂದ ನಿರ್ವಹಿಸಬೇಕಾದ ಅವಶ್ಯಕತೆ ಇದೆ ಎಂದು ತುಮಕೂರು ಲೋಕಸಭಾ ಸದಸ್ಯ ಹಾಗೂ ಕೇಂದ್ರ ರೇಲ್ವೆ ಮತ್ತು ಜಲಶಕ್ತಿ ರಾಜ್ಯ ಖಾತೆಯ ಸಚಿವ ವಿ. ಸೋಮಣ್ಣ ಹೇಳಿದರು.



ನವದೆಹಲಿಯ ಸಂಸತ್ ಆವರಣದ ಪ್ರೇರಣಾ ಸ್ಥಳದಲ್ಲಿ ಹಮ್ಮಿಕೊಂಡಿದ್ದ ಕನ್ನಡನಾಡಿನ ವೀರವನಿತೆ ಕಿತ್ತೂರು ರಾಣಿ ಚೆನ್ನಮ್ಮನವರ 201ನೇ ವಿಜಯೋತ್ಸವ ಹಾಗೂ ಜನ್ಮದಿನೋತ್ಸವ ಆಚರಣೆಯಲ್ಲಿ ಪಾಲ್ಗೊಂಡು ವೀರವನಿತೆ ಕಿತ್ತೂರು ರಾಣಿ ಚೆನ್ನಮ್ಮ ರವರ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು .

ಕರ್ನಾಟಕದ ಮುಖ್ಯಮಂತ್ರಿಗಳಿಗೆ ಪತ್ರ ಬರೆದು ಕಿತ್ತೂರು ಸಂಸ್ಥಾನದ ಕೋಟೆ ಕೊತ್ತಲೆಗಳಲ್ಲಿ ಸಮರ್ಪಕ ನಿರ್ವಹಣೆ ಇಲ್ಲದಿರುವುದನ್ನು ಸಾರ್ವಜನಿಕರು ಮನಗಂಡಿದ್ದು, ಈ ಬಗ್ಗೆ ಕಿತ್ತೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಹೆಚ್ಚಿನ ಅಧಿಕಾರ ನೀಡಬೇಕಾಗಿದೆ. ಬೈಲಹೊಂಗಲದಲ್ಲಿರುವ ರಾಣಿ ಚೆನ್ನಮ್ಮನವರ ಸಮಾಧಿಯನ್ನು ಅಭಿವೃದ್ಧಿಗೊಳಿಸಿ,ಅದನ್ನು ರಾಷ್ಟ್ರೀಯ ಸ್ಮಾರಕವೆಂದು ಘೋಷಿಸಬೇಕು.

ವೀರ ರಾಣಿ ಚೆನ್ನಮ್ಮನವರ ಜೀವನ ಮತ್ತು ಸಾಧನೆ ಕುರಿತು ಭಾರತೀಯ ಎಲ್ಲಾ ಭಾಷೆಗಳಲ್ಲೂ ಪುಸ್ತಕವನ್ನು ಹೊರತರಬೇಕು ಎಂದು ಅವರು ಮನವಿ ಮಾಡಿದರು.

ಕಿತ್ತೂರು ರಾಣಿ ಚೆನ್ನಮ್ಮನವರ ಪುತ್ಥಳಿಯನ್ನು ಸಂಸತ್ತಿನ ಆವರಣದಲ್ಲಿ 2007ರಲ್ಲಿ ಸ್ಥಾಪಿಸಲಾಗಿದೆ. ಕಳೆದ ವರ್ಷ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಬೆಂಬಲ ಮತ್ತು ಲೋಕಸಭಾ ಅಧ್ಯಕ್ಷ ಓಂ ಬಿರ್ಲಾ ಅವರ ಸಹಕಾರದಿಂದ 200ನೇ ರಾಣಿ ಚೆನ್ನಮ್ಮನವರ ವಿಜಯೋತ್ಸವ ಮತ್ತು ಜನ್ಮದಿನೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಗಿತ್ತು. ಅದೇ ರೀತಿ ಈ ವರ್ಷವೂ ಸಹ ರಾಣಿ ಚೆನ್ನಮ್ಮನವರ 201ನೇ ವಿಜಯೋತ್ಸವ ಮತ್ತು ಜನ್ಮದಿನೋತ್ಸವ ಆಚರಣೆಯನ್ನು ಸಂಸತ್ತಿನ ಆವರಣದ ಪ್ರೇರಣಾ ಸ್ಥಳದಲ್ಲಿ ಮಾಡಲಾಗಿದೆ ಎಂದರು.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕರ್ನಾಟಕದ ಸಂಸ್ಕೃತಿ, ಈ ದೇಶಕ್ಕೆ ಕೊಡುಗೆ ನೀಡಿದ ಕನ್ನಡದ ಮಹನೀಯರನ್ನು, ಸ್ವಾತಂತ್ರ್ಯ ಹೋರಾಟಗಾರರನ್ನು, ವೀರವನಿತೆಯರನ್ನು ನೆನಪಿಸುವ ಮತ್ತು ಅವರನ್ನು ಗೌರವಿಸುವ ಕೆಲಸ ಮಾಡುವಲ್ಲಿ ಸದಾ ಸನ್ನದ್ಧವಾಗಿದೆ ಎಂದು ಹೇಳಿದರು.

ಇದಕ್ಕೆ ಪೂರಕವಾಗಿಯೇ ನಾಳೆ ದೆಹಲಿಯ ಸಿರಿಫೋರ್ಟ ಆಡಿಟೋರಿಯಂನಲ್ಲಿ ನಡೆಯಲಿರುವ ಕಿತ್ತೂರು ರಾಣಿ ಚೆನ್ನಮ್ಮನವರ 201ನೇ ವಿಜಯೋತ್ಸವ ಕಾರ್ಯಕ್ರಮದಲ್ಲಿ ಕೇಂದ್ರ ಸರ್ಕಾರದ ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರು ವೀರರಾಣಿ ಚೆನ್ನಮ್ಮನವರ ವಿಶೇಷ ಅಂಚೆ ಚೀಟಿ ಬಿಡುಗಡೆ ಮಾಡಲಿದ್ದಾರೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಬೆಳಗಾವಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್, ರಾಜ್ಯಸಭಾ ಸದಸ್ಯರಾದ ಸುಧಾಮೂರ್ತಿ, ಶ್ರೀ ಜಯಮೃತ್ಯುಂಜಯ ಸ್ವಾಮೀಜಿ ಶ್ರೀ ವಚನಾನಂದ ಸ್ವಾಮೀಜಿ, ಜನಪ್ರತಿನಿಧಿಗಳು, ದೆಹಲಿ ಕನ್ನಡ ಸಂಘದ ಅಧ್ಯಕ್ಷರು, ದೆಹಲಿ ಕನ್ನಡಿಗರು ಮತ್ತಿತರರು ಪಾಲ್ಗೊಂಡಿದ್ದರು.

## ಒಂದೇ ದರ ನಿಗದಿ ಮಾಡಲು ರೈತರ ಆಗ್ರಹ

# ಕಬ್ಬಿನ ದರ ಘೋಷಿಸಿ ಕಾರ್ಖಾನೆ ಪ್ರಾರಂಭಿಸಿ–ಡಿಸಿ ಸಲಹೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.23–ಪ್ರಸಕ್ತ ಹಂಗಾಮಿಗೆ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳ ಆಡಳಿತ ಮಂಡಳಿಯವರು ರೈತರ ಜೊತೆ ಹೊಂದಾಣಿಕೆ ಮಾಡಿಕೊಳ್ಳುವ ಮೂಲಕ ಸೌಹಾರ್ದಯುತವಾಗಿ ಕಬ್ಬು ನುರಿಸುವ ಕಾರ್ಯ ಪ್ರಾರಂಭಿಸುವಂತೆ ಜಿಲ್ಲಾಧಿಕಾರಿ ಸಂಗಪ್ಪ ಸಲಹೆ ನೀಡಿದರು.

ಜಿಲ್ಲಾಡಳಿತ ಭವನದಲ್ಲಿರುವ ನೂತನ ಆಡಿಟೋರಿಯಂ ಹಾಲ್‌ನಲ್ಲಿ ಗುರುವಾರ ಪ್ರಸಕ್ತ ಸಾಲಿನ ಕಬ್ಬು ಅರೆಯುವ ಹಂಗಾಮು ಪ್ರಾರಂಭಿಸುವ ಕುರಿತು ಸಕ್ಕರೆ ಕಾರ್ಖಾನೆಗಳ ಮಾಲೀಕರು ಹಾಗೂ ರೈತರೊಂದಿಗೆ ಜರುಗಿದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಕಾರ್ಖಾನೆಯವರು ರೈತರ ಜೊತೆ ಸಭೆ ನಡೆಸಿ, ದರ ಘೋಷಣೆ ಬಳಿಕವೇ ಕಬ್ಬು ನುರಿಸುವ ಕಾರ್ಯ ಪ್ರಾರಂಭಿಸುವಂತೆ ತಿಳಿಸಿದರು.

ಸರಕಾರ ಘೋಷಿಸಿದ ಎಫ್‌ಆರ್‌ಪಿ ದರ ರೈತರು ಒಪ್ಪದ ಕಾರಣ ಕಾರ್ಖಾನೆ ಆಡಳಿತ ಮಂಡಳಿಯವರು ರೈತರ ಜೊತೆ ಮಾತುಕತೆ ನಡೆಸಿ ದರ ಘೋಷಣೆ ಮಾಡಿದ ನಂತರವೇ ಕಾರ್ಖಾನೆ ಪ್ರಾರಂಭಿಸಲಾಗುವುದೆಂದು ತಿಳಿಸಿದ್ದಾರೆ. ಕಬ್ಬು ಕಟಾವು ಮತ್ತು ಸಾಗಾಣಿಕೆ ವೆಚ್ಚಕ್ಕೆ ಸಂಬಂಧಿಸಿದಂತೆ ಪರಿಷ್ಕೃತ ಮಾರ್ಗಸೂಚಿಗಳನ್ನು ಸರಕಾರ ಹೊರಡಿಸಿದ್ದು, ಕಾರ್ಖಾನೆಯವರು ಪಾಲನೆ ಮಾಡಬೇಕು. ಕಾನೂನು ಸುವ್ಯವಸ್ಥೆಗೆ ಧಕ್ಕೆ ಬರದ ರೀತಿಯಲ್ಲಿ ಕಬ್ಬು ನುರಿಸುವ ಕಾರ್ಯ ಪ್ರಾರಂಭಿಸುವಂತೆ ಕಾರ್ಖಾನೆಯ ಆಡಳಿತ ಮಂಡಳಿಗೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಕಳೆದ ಹಂಗಾಮಿನಲ್ಲಿ ಸಕ್ಕರೆ ಕಾರ್ಖಾನೆ ಮತ್ತು ರೈತರ ನಡುವೆ ಮಾಡಿಕೊಂಡ ಎಫ್.ಆರ್.ಪಿ ಕ್ಕಿಂತ ಹೆಚ್ಚುವರಿ ದರದ ಬಾಕಿ ಮೊತ್ತವನ್ನು ಪಾವತಿಸಿದ ನಂತರವೇ ಪ್ರಸಕ್ತ ಹಂಗಾಮಿನಲ್ಲಿ ಕಾರ್ಖಾನೆ ಪಾವತಿಸುವಂತೆ ರೈತರು ಬೇಡಿಕೆ ಇಟ್ಟಿದ್ದು, ಬಾಕಿ ಉಳಿಸಿಕೊಂಡ ಕಾರ್ಖಾನೆಗಳು ಕೂಡಲೇ ಬಿಲ್ ಪಾವತಿ ಮಾಡಬೇಕು, ಕಬ್ಬು ಕಟಾವು ಮತ್ತು ಸಾಗಾಣಿಕಾ ವೆಚ್ಚವನ್ನು ಸರಕಾರದ ಮಾರ್ಗಸೂಚಿಯ ಪ್ರಕಾರ ಪಾವತಿಗೆ ಕ್ರಮಕೈಗೊಳ್ಳುವಂತೆ ಹೇಳಿದರು.

ರೈತರು ಸಭೆಯಲ್ಲಿ ಸಕ್ಕರೆ ಕಾರ್ಖಾನೆಯವರು ಯಾವ ಯಂತ್ರದಲ್ಲಿ ಕಬ್ಬನ್ನು ತೂಕ ಮಾಡುತ್ತಾರೋ ಅದೇ ಯಂತ್ರದಲ್ಲಿ ಸಕ್ಕರೆಯನ್ನು ಕೂಡಾ ತೂಕ ಮಾಡಿ ಕಳುಹಿಸಬೇಕು. ಕಡ್ಡಾಯವಾಗಿ ಎಲ್ಲ ಕಡೆ ಸಿಸಿ ಕ್ಯಾಮರಾ ಅಳವಡಿಸಿ ಪಾರದರ್ಶಕತೆ ತರಬೇಕು. ಒಂದು ಕಾರ್ಖಾನೆಯಿಂದ ಇನ್ನೊಂದು ಕಾರ್ಖಾನೆಗೆ ಬೇರೆ ಬೇರೆ ದರ ನಿಗಧಿಯಾಗಿದ್ದು, ಒಂದೇ ದರ ನಿಗಧಿ ಮಾಡಬೇಕು. ಹಿಂದಿನ ಹಂಗಾಮಿನಲ್ಲಿ ಪಾವತಿಸಿದ ಹಣಕ್ಕೆ ಬಡ್ಡಿ ಸಮೇತ ನೀಡುವಂತೆ ಬೇಡಿಕೆ ಇಟ್ಟರು.

ಅಲ್ಲದೇ ಕಾರ್ಖಾನೆ ಆಡಳಿತ ಮಂಡಳಿಯ ಪ್ರತಿನಿಧಿಗಳು ತಮಗೆ ಆಗುತ್ತಿರುವ ತೊಂದರೆಗಳನ್ನು ಸಭೆಗೆ ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಜಿ.ಪಂ ಸಿಇಓ ಶಶಿಧರ ಕುರೇರ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ, ಬೆಳಗಾವಿ ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ಸಂಪನ್ಮೂಲ ವ್ಯಕ್ತಿ ಸಿ.ಬಿ.ಪಾಟೀಲ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ ಸೇರಿದಂತೆ ರೈತರು ಹಾಗೂ ವಿವಿಧ ಕಾರ್ಖಾನೆಗಳ ಮಾಲಿಕರು, ವ್ಯವಸ್ಥಾಪಕ ನಿರ್ದೇಶಕರು ಉಪಸ್ಥಿತರಿದ್ದರು.

: C I T A T I O N:

IN THE COURT OF THE I ADDL. CIVIL JUDGE AND JMFC., AT HUMNABAD

Cri. Misc. No. 2618/2025

Petitioners:

1. Manik Bai W/o late Shivaram Roddenoor, Age; 63 years, Occu:House Hold
R/o H.No. 3/99, Village Nandagaon Tq:Humnabad
2. Anjn Bai Do laet Shivaram W/o Nagesh Age; 47 years Occu:House Hold
R/o Village Chinkera Tq:Humnabad
3. K. Sumithra D/o laet Shivaram W/o K. Goraknath, Age; 55 years Occu:House Hold
R/o H.No. 12-2-708/2/119/VVN/13, Bhoja Gutta, Gudimalkapur, VYC Hyderabad -TS-500028
4. Jagannath S/o lae Shivaraj, Age; 45 years Occu: Labour, R/o H.No. 3/99, Village Nandagaon Tq:Humnabad
5. Sangeeta D/o late Shivaram W/o Ramesh Age; 57 years Occu, House Hold
R/oVillageKhanapurTq:ChincholiDist:Kalaburagi-585306

Respondent:

The Registrar of Birth and Death thorugh the Tahasildar Humnabad.

Sub: Petition U/Sec. 13 (3) of Birth and Death Registration Act-1969

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death certificate of Husband of petitioner no. 1, and Father of petitioner no. 2 to 5 by namely LATE. SHIVARAMS/ONAGAPPA,whowasdiedon01.04.1988 at village Nandagaon, Tq:Humnabad Dist;Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 04.11.2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 27-09-2025.

//By order of the court//
Chief Ministerial Officer
Prl. Civil Judge & JMFC Court,
Humnabad

# ನರ್ಸಿಂಗ ವಿದ್ಯಾರ್ಥಿಗಳು ಪ್ರತಿಜ್ಞಾ ವಿಧಿ ಪಾಲಿಸಬೇಕು : ಡಾ.ವಿರೇಶ ಪಾಟೀಲ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ ;ಅ.23: ಬಿ.ಎಸ್ಸಿ ನಸಿರ್ಂಗ್ ವಿದ್ಯಾರ್ಥಿಗಳು ಪ್ರತಿಜ್ಞಾ ವಿಧಿಯನ್ನು ಪಾಲಿಸಬೇಕು ಮತ್ತು ರೋಗಿಗಳ ಕಾಳಜಿಯನ್ನು ಮಾಡಬೇಕು ಎಂದು ಮೆಡಿಕಲ್ ಸೂಪರಿಂಟೆಂಡೆಂಟ್ ಇನ್ಸಿಟ್ಯೂಟ್ ಆಫ್ ಕಾರ್ಡಿಯೋ ಸೈನ್ಸಸ್ ಮತ್ತು ರೀಸರ್ಚ್ ಜಯದೇವ ಆಸ್ಪತ್ರೆ ಡಾ. ವಿರೇಶ್ ಪಾಟೀಲ ಹೇಳಿದರು.

ನಗರದ ಶ್ರೀ ಗೋಪಾಲದೇವ ಜಾಧವ್ ಅವರ ನಸಿರ್ಂಗ್ ಕಾಲೇಜಿನ 4ಣು ಬ್ಯಾಚ್ ಕಾಲೇಜಿನ ಮ್ಯಾಗಜಿನ್ ಹಾಗೂ ಗ್ರೂಪ್ ರಿಸರ್ಚ್ ಪ್ರಾಜೆಕ್ಟ್ ರಿಲೀಸ್ ಮತ್ತು 1ಣ ಬ್ಯಾಚಿನ ಬೀಳ್ಕೊಡುವ ಸಮಾರಂಭ ಉದ್ಘಾಟಿಸಿ ಮಾತನಾಡಿ, ಪ್ರತಿಯೊಂದು ಸರಕಾರಿ ಅಥವಾ ಖಾಸಗಿ ಆಸ್ಪತ್ರೆಯಲ್ಲಿ ನರ್ಸಗಳ ಸೇವೆ ಬಹಳ ಮುಖ್ಯ ಪಾತ್ರವಹಿಸುತ್ತಾರೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ ಯುನೈಟೆಡ್ ಆಸ್ಪತ್ರೆಯ ಡಾ. ಶೇಕ್ ಅಹ್ಮದ ಅಲಿ ಮಾತನಾಡಿ, ನರ್ಸಸ್ ಪಾತ್ರ ವೈದ್ಯರಿಗಂತ ಹೆಚ್ಚಾಗಿ ಇರುತ್ತೆ . ಯಾಕಂದರೆ, ದಿನದ 24 ಗಂಟೆ ರೋಗಿಗಳ ಆರೈಕೆ ಮಾಡುತ್ತಾರೆ ಎಂದು ತಿಳಿಸಿದರು.

ಕಾಲೇಜಿನ ಖಜಾಂಚಿ ಡಾ. ರಾಮಚಂದ್ರ ಜಾಧವ್ ಮಾತನಾಡಿ, ನರ್ಸಗಳು ಕರುಣೆ ಮತ್ತು ಶ್ರದ್ಧೆಯಿಂದ ಕಾರ್ಯ ನಿರ್ವಹಿಸಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು. ಪ್ರೋ.

ವಿಜಯರೆಡ್ಡಿ ಮಾತನಾಡಿ, ನರ್ಸಗಳು ಎಲ್ಲಾ ವರ್ಗದ ರೋಗಿಗಳನ್ನು ಸಮಾನತೆಯಿಂದ ಕಾಣವುದರ ಜೊತೆಗೆ ಆರೈಕೆ ಮಾಡಬೇಕು. ನಮ್ಮ ಕಾಲೇಜಿನ ಅಂತಿಮ ವರ್ಷದ ಬಿ. ಎಸ್ಸಿ ನಸಿರ್ಂಗ್ ವಿದ್ಯಾರ್ಥಿಗಳು ಗ್ರೂಪ್ ರಿಸರ್ಚ್ ಪ್ರಾಜೆಕ್ಟ್ ಪೂರ್ಣ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದು ತಿಳಿಸಿದರು.


ಅಂತಿಮ ವರ್ಷದ ವಿದ್ಯಾರ್ಥಿಗಳಾದ ನಿತೀಶ್ ಹಾಗೂ ಅನಿತಾ ಮಾತನಾಡಿ ರಿಸರ್ಚ್ ಪ್ರಾಜೆಕ್ಟ್ ಕಂಪ್ಲೀಟ್ ಮಾಡುವಲ್ಲಿ ಪ್ರೋ. ವಿಜಯರೆಡ್ಡಿ ಸರ್ ಮಾರ್ಗದರ್ಶನದಲ್ಲಿ ಪೂರ್ಣಗೊಳಿಸದೆವು ಮತ್ತು ನಾವು ಹೆಮ್ಮೆಯಿಂದ ಹೇಳಿಕೊಳ್ಳುತ್ತೇವೆ ಈ ವರ್ಷದಲ್ಲಿ ಕಲಬುರ್ಗಿ ಜಿಲ್ಲೆಯಲಿ ಗ್ರೂಪ್ ರಿಸರ್ಚ್ ಪ್ರಾಜೆಕ್ಟ್ ಪೂರ್ಣಗೊಳಿಸಿದ ಕಾಲೇಜ್ ನಮ್ಮದಾಗಿದೆ ಎಂದು ಹೇಳಿದರು.

ಈ ಸಂಧರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಅರುಣಕುಮಾರ್ ಪವಾರ, ಅಬ್ದುಲ್ ವಹೀದ್ ಮುನೀರ್, ಕಾಲೇಜಿನ ಬಿ.ಎಸ್ಸಿ ನಸಿರ್ಂಗ್ ವಿದ್ಯಾರ್ಥಿಗಳು ,ಬೋಧಕ ,ಬೋಧಕೇತರ ಹಾಗೂ ಪಾಲಕರು ಹಾಜರಿದ್ದು ಕಾರ್ಯಕ್ರಮ ಯಶಸ್ವಿಗೊಳಸಾಯಿತು. ಭಾಗ್ಯಶ್ರೀ ಹೂಗಾರ್ ನಿರೂಪರಿಸಿದರು, ಪೂಜಾ ವಂದನಾರ್ಪಣ ಮಾಡಿದರು.

# ಮತಗಳ್ಳತನ ವಿರುದ್ಧ ಸಹಿ ಸಂಗ್ರಹ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಅ. 23–ರಾಜಾಜಿನಗರ ವಿಧಾನಸಭಾ ಕ್ಷೇತ್ರ ಮೋದಿ ವೃತ್ತದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ಪ್ರಜಾಪ್ರಭುತ್ವದ ಮೂಲ ಅಸ್ತಿತ್ವವಾದ ಮತದಾನದ ಹಕ್ಕಿನ ರಕ್ಷಣೆಯ ಉದ್ದೇಶದಿಂದ ಕೆಪಿಸಿಸಿ ವತಿಯಿಂದ ಇಂದು ಮತಗಳ್ಳತನದ ವಿರುದ್ಧ ಸಹಿ ಸಂಗ್ರಹ ಅಭಿಯಾನ ನಡೆಸಲಾಯಿತು. ಈ ಅಭಿಯಾನದ ಮೂಲಕ ಮತದಾನದ ನೈಜತೆಯನ್ನು ಕಾಪಾಡುವ, ಜನರ ಹಕ್ಕುಗಳ ರಕ್ಷಣೆಗೆ ಧ್ವನಿಯೆತ್ತುವ, ಹಾಗೂ ಜನಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಮತ್ತು ನಾಗರಿಕರು ಒಟ್ಟಾಗಿ ಹೋರಾಟ ನಡೆಸುವಂತಾಗಿದೆ.




ಪಶ್ಚಿಮ ಜಿಲ್ಲಾ ಕಾಂಗ್ರೆಸ್ ಸಮಿತಿ ಜಿಲ್ಲಾಧ್ಯಕ್ಷರಾದ ಹನುಮಂತರಾಯಪ್ಪ, ಮಾಜಿ ಮಹಾಪೌರರಾದ ಜೆ.ಹುಚ್ಚಪ್ಪ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್. ಮನೋಹರ್ ರವರು, ನಿಕಟಪೂರ್ವ ಬಿಬಿಎಂಪಿ ಸದಸ್ಯರಾದ ಜಿ.ಕೃಷ್ಣಮೂರ್ತಿ, ಕಾಂಗ್ರೆಸ್ ಪಕ್ಷದ ಮುಖಂಡರುಗಳಾದ ಸುಧಾಕರ್, ಆಪಲ್ ನಾಗರಾಜ್ ರವರು ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಸಹಿ ಸಂಗ್ರಹ ಅಭಿಯಾನದಲ್ಲಿ ಭಾಗವಹಿಸಿ, ಸಾರ್ವಜನಿಕರಿಂದ ಸಹಿ ಸಂಗ್ರಹ ಮಾಡಿದರು.

ಪ್ರಜಾಪ್ರಭುತ್ವದಲ್ಲಿ ಸಂವಿಧಾನ ಮತದಾನದ ಮಾಡುವ ಹಕ್ಕು ನೀಡಿದೆ, ಮತದಾನ ಹಕ್ಕನ್ನು ವಂಚಿಸುವ ಕೆಲಸವಾಗುತ್ತಿದೆ. ಚಿಕ್ಕ ಮನೆಯಲ್ಲಿ 80ಕ್ಕೂ ಹೆಚ್ಚು ಮತದಾರರು ಇದ್ದಾರೆ, ಒಬ್ಬ ವ್ಯಕ್ತಿಯ ಹೆಸರು ಹಲವಾರು ಕಡೆಗಳಲ್ಲಿ ಮತಗಟ್ಟೆ ಹೆಸರು ಇರುವುದು. ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ರವರ ನೇತೃತ್ವದಲ್ಲಿ ದೇಶಾದ್ಯಂತ ಮತಕಳ್ಳತನ ವಿರುದ್ದ ದೊಡ್ಡ ಹೋರಾಟ ಮಾಡಲಾಗುತ್ತಿದೆ. ಪ್ರತಿಯೊಬ್ಬ ಪ್ರಜೆಗೂ ಮತದಾನ ಮಾಡುವ ಹಕ್ಕು ಇದೆ ಇದರ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ.

ಬಿಜೆಪಿ ಪಕ್ಷವು ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ಷಡ್ಯಂತ್ರದಿಂದ ಮತಕಳ್ಳತನ ಮಾಡಿ ಜನರ ಮತದಾನ ಅಧಿಕಾರವನ್ನು ಕಿತ್ತೂಕೊಂಡಿದ್ದಾರೆ. ಸಂವಿಧಾನ ಉಳಿಸಲು ಪ್ರಜಾಪ್ರಭುತ್ವ ಉಳಿಸಲು ರಾಹುಲ್ ಗಾಂಧಿ ರವರು ಮತಕಳ್ಳತನ ವಿರುದ್ದ ದೇಶದ್ಯಾಂತ ಹೋರಾಟ ಮಾಡುತ್ತಿದ್ದಾರೆ. ಡಿಲೀಟ್ ಮತ್ತು ಸೇರ್ಪಡೆ ಮತದಾರರ ಪಟ್ಟಿಯನ್ನ ಚುನಾವಣೆ ಆಯೋಗ ನೀಡುತ್ತಿಲ್ಲ ಎಂದು ಮುಖಂಡರು ಆರೋಪಿಸಿದರು.

ರಾಜಾಜಿನಗರ ವಿಧಾನಸಭಾ ಕ್ಷೇತ್ರದ ಮುಖಂಡರು, ಕಾರ್ಯಕರ್ತರು ಮತ್ತು ಯುವ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಭಾಗವಹಿಸಿದ್ದರು.

# ರಾಷ್ಟ್ರೀಯ ಪ್ರಶಸ್ತಿ ವಿಜೇತ ಸಂಜಯಗೆ ಸಚಿವ ಶಿವಾನಂದ ಪಾಟೀಲ ಸನ್ಮಾನ

ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ, ಅ. 23 : ದೇಶದ ರಾಷ್ಟ್ರಪತಿಗಳಿಂದ ರಾಷ್ಟ್ರೀಯ ಪ್ರಶಸ್ತಿ ಸ್ವೀಕರಿಸಿರುವ ಬಸವನಬಾಗೇವಾಡಿ ವಿಧಾನಸಭೆ ವ್ಯಾಪ್ತಿಯ ಯುವಪ್ರತಿಭೆ ಸಂಜಯಕುಮಾರ ಬಿರಾದಾರ ಅವರನ್ನು ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಸನ್ಮಾನಿಸಿದರು.

ಕೇಂದ್ರ ಸರಕಾರದ ಯುವ ಸಬಲೀಕರಣ ಸಚಿವಾಲಯ ನೀಡುವ ಪ್ರತಿಷ್ಠಿತ ಮೈ ಭಾರತ್ ರಾಷ್ಟ್ರೀಯ ಸೇವಾ ಯೋಜನೆಯ ಪ್ರಶಸ್ತಿಗೆ ಜಿಲ್ಲೆಯ ತಾವು ಪ್ರತಿನಿಧಿಸುವ ಬಸವನಬಾಗೇವಾಡಿ ಕ್ಷೇತ್ರದ ಕೊಲ್ಹಾರ ತಾಲೂಕಿನ ತೆಲಗಿ ಗ್ರಾಮದ ಸಂಜಯಕುಮಾರ ಯಂಕನಗೌಡ ಬಿರಾದಾರ ಭಾಜನರಾಗಿದ್ದರು. ಅಲ್ಲದೇ ಈಚೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ನವದೆಹಲಿಯಲ್ಲಿ ಪ್ರಶಸ್ತಿ ಸ್ವೀಕರಿಸಿದ್ದರು. ರಾಷ್ಟ್ರೀಯ ಪ್ರಶಸ್ತಿ ಮೂಲಕ ಬಸವಜನ್ಮಭೂಮಿಗೆ ಕೀರ್ತಿ ತಂದಿರುವ ಸಂಜಯಕುಮಾರ ಬಿರಾದಾರ ಅವರನ್ನು ದೀಪಾವಳಿ ಹಬ್ಬದ ಸಂದರ್ಭದಲ್ಲಿ ಮಂಗಳವಾರ ವಿಜಯಪುರ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನ ಪ್ರಧಾನ ಕಛೇರಿಯಲ್ಲಿ ಸಚಿವರು ಸನ್ಮಾನಿಸಿ, ಗೌರವಿಸಿದರು.



ಸಂಜಯ ತಮ್ಮ ಸಾಧನೆಯಿಂದ ಬಸವನಬಾಗೇವಾಡಿ ತಾಲೂಕಿಗೆ ಮಾತ್ರವಲ್ಲ ಜಿಲ್ಲೆಯ ಮೂಲಕ ನಾಡಿಗೆ ಕೀರ್ತಿ ತಂದಿದ್ದಾರೆ. ಅವರ ಸಾಧನೆ ಇಂದಿನ ಯುವ ಸಮೂಹಕ್ಕೆ ಪ್ರೇರಣೆ, ಅನುಕರಣೀಯ ಮಾತ್ರವಲ್ಲದೆ ಪ್ರೋತ್ಸಾಹದಾಯಕವಾಗಿದೆ ಎಂದು ಸಚಿವರು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಸಂಜಯಕುಮಾರ ಅವರ ತಂದೆ ಯಂಕನಗೌಡ ಬಿರಾದಾರ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

# ಅ.28 ರಂದು ಬಳ್ಳಾರಿ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.23–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವಿವಿಧ ಸಂಘ–ಸಂಸ್ಥೆಗಳ ಸಹಯೋಗದೊಂದಿಗೆ 2025–26ನೇ ಸಾಲಿನ ಬಳ್ಳಾರಿ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಅ.28 ರಂದು ಬೆಳಿಗ್ಗೆ 10.30 ಕ್ಕೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಆಯೋಜಿಸಲಾಗುವುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಜಿಲ್ಲೆಯ ಯುವಕ,ಯುವತಿಯರು, ಸಂಘ–ಸಂಸ್ಥೆಗಳ ಪ್ರತಿನಿಧಿಗಳು, ಶಾಲಾ/ಕಾಲೇಜು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಾಗವಹಿಸಬಹುದು. ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಸ್ಪರ್ಧಿಗಳು ರಾಜ್ಯ ಮಟ್ಟದ ಯುವಜನೋತ್ಸವದಲ್ಲಿ ಭಾಗವಹಿಸಲು ಅವಕಾಶ ಇರುತ್ತದೆ. ಸ್ಪರ್ಧಾಳುಗಳು 15 ರಿಂದ 29 ವರ್ಷದೊಳಗಿನವರಾಗಿರಬೇಕು.

**ಸ್ಪರ್ಧೆಗಳ ವಿವರ:**

ಜಾನಪದ ನೃತ್ಯ(10 ಜನರ ಗುಂಪು): ಸ್ಪರ್ಧೆಯಲ್ಲಿ ಯಾವುದೇ ಕ್ಯಾಸೆಟ್, ಪೆನ್‌ಡ್ರೈವ್, ಸಿಡಿ ಹಾಡುಗಳಿಗೆ ಅವಕಾಶ ಇರುವುದಿಲ್ಲ, 15 ನಿಮಿಷ ಮಾತ್ರ.

ಜಾನಪದ ಗೀತೆ(10 ಜನರ ಗುಂಪು): ಸ್ಪರ್ಧೆಯಲ್ಲಿ ಯಾವುದೇ ಸಿನಿಮಾ ಹಾಡುಗಳನ್ನು ಪ್ರಸ್ತುತಪಡಿಸುವಂತಿಲ್ಲ ಹಾಗೂ ಹಾಡುಗಳಲ್ಲಿ ಸಿನಿಮಾ ಮಿಶ್ರಣಕ್ಕೆ ಅವಕಾಶವಿರುವುದಿಲ್ಲ, 7 ನಿಮಿಷ ಮಾತ್ರ ಕಾಲಾವಕಾಶ.

ಕಥೆ ಬರೆಯುವುದು(ಒಬ್ಬರಿಗೆ ಅವಕಾಶ): 1000 ಪದಗಳಿಗೆ ಮೀರದಂತೆ ಕನ್ನಡ, ಆಂಗ್ಲ, ಹಿಂದಿ ಭಾಷೆಯಲ್ಲಿರಬೇಕು, 60 ನಿಮಿಷ ಮಾತ್ರ ಕಾಲಾವಕಾಶ.

ಚಿತ್ರಕಲೆ(ಒಬ್ಬರಿಗೆ ಅವಕಾಶ): ಎ3 ಸೈಜ್ (ಥೀಮ್: ನಶೆ ಮುಕ್ತ ಯುವ/ಯೂತ್ ಫಾರ್ ಹೆಲ್ದಿ ಸ್ಟೈಲ್), 90 ನಿಮಿಷ ಮಾತ್ರ ಕಾಲಾವಕಾಶ.

ಭಾಷಣ(ಒಬ್ಬರಿಗೆ): ವಿಷಯ–ಭಾರತದಲ್ಲಿ ತುರ್ತು ಪರಿಸ್ಥಿತಿಯ ಅವಧಿ ಮತ್ತು ಸಂವಿಧಾನ ಉಲ್ಲಂಘನೆ ಮತ್ತು ಪ್ರಜಾಪ್ರಭುತ್ವವನ್ನು ಕಾಪಾಡುವುದು ಮತ್ತು ಪ್ರಜಾಸತ್ತಾತ್ಮಕ ಮೌಲ್ಯಗಳು. ಭಾಷಣವು 7 ನಿಮಿಷಗಳ ಅವಧಿಯಲ್ಲಿ ಕನ್ನಡ, ಆಂಗ್ಲ, ಹಿಂದಿ ಭಾಷೆಯಲ್ಲಿ ಪ್ರಸ್ತುತಪಡಿಸಬೇಕು.

ಕವಿತೆ ಬರೆಯುವುದು(ಒಬ್ಬರಿಗೆ): 1000 ಪದ ಮೀರದಂತೆ ಕನ್ನಡ, ಆಂಗ್ಲ ಮತ್ತು ಹಿಂದಿ ಭಾಷೆಯಲ್ಲಿರಬೇಕು, ಅವಧಿ 60 ನಿಮಿಷ.

ವಿಜ್ಞಾನ ಮೇಳ(ಪ್ರತಿ ಗುಂಪಿಗೆ 5 ಜನ): ನಾವಿನ್ಯಾತ ವಿಜ್ಞಾನ ಮೇಳ ಪ್ರದರ್ಶನ.

ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವವರು ಕಡ್ಡಾಯವಾಗಿ ಆನ್‌ಲೈನ್ ನಲ್ಲಿ ನೋಂದಣಿ ಮಾಡಿಕೊಳ್ಳಬೇಕು. ನೋಂದಣಿ ಪ್ರತಿಯನ್ನು ಕಡ್ಡಾಯವಾಗಿ ಸಲ್ಲಿಸಿದಲ್ಲಿ ಮಾತ್ರ ಕಾರ್ಯಕ್ರಮದಲ್ಲಿ ಭಾಗವಹಿಸಲು ಅವಕಾಶ ಇರುತ್ತದೆ.

ಭಾಗವಹಿಸಲು ಇಚ್ಛಿಸುವ ಸ್ಪರ್ಧಾರ್ಥಿಗಳು ಅ.27 ರೊಳಗಾಗಿ ತಮ್ಮ ಹೆಸರುಗಳನ್ನು ಆನ್ ಲೈನ್ ಕ್ಯೂರ್ ಕೋಡ್ ಮೂಲಕ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾ ಕ್ರೀಡಾಂಗಣದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಾರ್ಯಾಲಯ ಅಥವಾ ಮೊ.8971238689, 7026401500 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉತ್ತಮ ಆಹಾರಕ್ಕಾಗಿ ಕೈಜೋಡಿಸೋಣ: ಡಾ.ಪಾಲಯ್ಯ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.23–ಇಂದಿನ ಆಹಾರ ಪದ್ಧತಿಯಲ್ಲಿ ಸಿರಿಧಾನ್ಯಗಳ ಪುನರುಜ್ಜೀವನೆ ಅತ್ಯಂತ ಅಗತ್ಯವಾಗಿದೆ. ಪೌಷ್ಠಿಕ ಆಹಾರದ ಮಹತ್ವ ಜನರಲ್ಲಿ ಅರಿವು ಮೂಡಿಸುವ ಮೂಲಕ ಉತ್ತಮ ಆಹಾರಕ್ಕಾಗಿ ಕೈಜೋಡಿಸೋಣ ಎಂದು ಹಗರಿಯ ಐಸಿಎಆರ್-ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರಾದ ಡಾ.ಪಾಲಯ್ಯ.ಪಿ ಅವರು ಹೇಳಿದರು.

'ವಿಶ್ವ ಆಹಾರ ದಿನ'ದ ಅಂಗವಾಗಿ "ಉತ್ತಮ ಆಹಾರ ಮತ್ತು ಉತ್ತಮ ಭವಿಷ್ಯಕ್ಕಾಗಿ ಎಲ್ಲರೂ ಕೈಜೋಡಿಸೋಣ" ಎಂಬ ಘೋಷವಾಕ್ಯದೊಂದಿಗೆ ಬಳ್ಳಾರಿ ತಾಲ್ಲೂಕಿನ ಹಗರಿಯ ಐಸಿಎಆರ್-ಕೃಷಿ ವಿಜ್ಞಾನ ಕೇಂದ್ರದಲ್ಲಿ ಇತ್ತೀಚೆಗೆ ಹಮ್ಮಿಕೊಂಡಿದ್ದ ಸಾಂಪ್ರದಾಯಿಕ ಹಾಗೂ ಸಿರಿಧಾನ್ಯ ಆಧಾರಿತ ಅಡುಗೆ ಸ್ಪರ್ಧೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕೇಂದ್ರದ (ಮಣ್ಣು ವಿಜ್ಞಾನ) ವಿಜ್ಞಾನಿ ಡಾ.ರವಿ.ಎಸ್ ಅವರು ಮಾತನಾಡಿ, ಆರೋಗ್ಯಕರ ಆಹಾರವನ್ನು ಉತ್ಪಾದಿಸಲು ಮಣ್ಣಿನ ಪೌಷ್ಟಿಕತೆ ಮಹತ್ವದ ಪಾತ್ರವಹಿಸುತ್ತದೆ. ಮಣ್ಣು ಮತ್ತು ಆಹಾರ ಎರಡೂ ಪರಸ್ಪರ ಸಂಬಂಧಿತವಾಗಿವೆ ಎಂದು ಅಭಿಪ್ರಾಯಪಟ್ಟರು.

ಜಿಪಂ ನ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ರಾಜೇಂದ್ರ ಅವರು ಮಾತನಾಡಿ, ಮಹಿಳೆಯರು ತಮ್ಮ ಸಾಂಪ್ರದಾಯಿಕ ಪಾಕಕಲೆ ಮೂಲಕ ಆರೋಗ್ಯಕರ ಹಾಗೂ ಸ್ಥಳೀಯ ಆಹಾರ ಪದ್ಧತಿಯನ್ನು ಪ್ರೋತ್ಸಾಹಿಸುತ್ತಿರುವುದು ಶ್ಲಾಘನೀಯ. ಇಂತಹ ಸ್ಪರ್ಧೆಗಳು ಅವರ ಆತ್ಮವಿಶ್ವಾಸ ಹೆಚ್ಚಿಸುತ್ತವೆ ಎಂದರು.

ವಿಜ್ಞಾನಿ (ಆಹಾರ ಮತ್ತು ಪೋಷಣೆ) ಡಾ.ರಾಜೇಶ್ವರಿ.ಆರ್ ಅವರು ಮಾತನಾಡಿ, ಸಿರಿಧಾನ್ಯಗಳು ನಮ್ಮ ಸಂಪ್ರದಾಯದ ಭಾಗವಾಗಿದ್ದು, ಪೌಷ್ಠಿಕತೆ ಹಾಗೂ ಆರೋಗ್ಯದ ದೃಷ್ಟಿಯಿಂದ ಅತ್ಯಂತ ಮಹತ್ವದವು. ಇಂತಹ ಸ್ಪರ್ಧೆಗಳ ಮೂಲಕ ಮಹಿಳೆಯರು ತಮ್ಮ ಪ್ರತಿಭೆಯನ್ನು ಪ್ರದರ್ಶಿಸುವುದರ ಜೊತೆಗೆ ಆರೋಗ್ಯಕರ ಆಹಾರದ ಅರಿವು ಪಡೆಯುತ್ತಾರೆ ಎಂದು ತಿಳಿಸಿದರು.

ಇನ್ನೋರ್ವ ವಿಜ್ಞಾನಿ (ವಿಸ್ತರಣೆ ಶಿಕ್ಷಣ) ಡಾ.ನವೀನ್ ಕುಮಾರ್.ಪಿ ಅವರು ಮಾತನಾಡಿ, ಗ್ರಾಮೀಣ ಮಹಿಳೆಯರು ತಮ್ಮ ಪಾಕಕೌಶಲ್ಯವನ್ನು ಸಮಾಜದ ಅಭಿವೃದ್ಧಿಗೆ ಬಳಸಿಕೊಳ್ಳುತ್ತಿರುವುದು ಸಂತೋಷದ ಸಂಗತಿ. ಇಂತಹ ಕಾರ್ಯಕ್ರಮಗಳು ಮಹಿಳಾ ಸಬಲೀಕರಣಕ್ಕೆ ಮಾರ್ಗದರ್ಶಿಯಾಗುತ್ತವೆ ಎಂದರು.

ಸ್ಥಳೀಯವಾಗಿ ಲಭ್ಯವಿರುವ ಪೌಷ್ಠಿಕ ಆಹಾರ ಪದಾರ್ಥಗಳ ಬಳಕೆಯನ್ನು ಉತ್ತೇಜಿಸುವುದು ಹಾಗೂ ಸಾಂಪ್ರದಾಯಿಕ ಆಹಾರ ಪದ್ಧತಿಗಳನ್ನು ಪುನರುಜ್ಜೀವಗೊಳಿಸುವ ಉದ್ದೇಶಕ್ಕಾಗಿ ಸುಮಾರು 30 ಮಂದಿ ಗ್ರಾಮೀಣ ಮಹಿಳೆಯರು ಉತ್ಸಾಹದಿಂದ ಪಾಲ್ಗೊಂಡು ಸಾಂಪ್ರದಾಯಿಕ ಪದಾರ್ಥಗಳನ್ನು ಸಿರಿಧಾನ್ಯಗಳ ಬಳಕೆಯಿಂದ ಪೌಷ್ಠಿಕ ಹಾಗೂ ಸವಿಯಾದ ರೀತಿಯಲ್ಲಿ ತಯಾರಿಸಿ ತಮ್ಮ ಪಾಕಕೌಶಲ್ಯ ಪ್ರದರ್ಶಿಸಿದರು.

ಕಾರ್ಯಕ್ರಮದಲ್ಲಿ ವಿಜೇತರಿಗೆ ಬಹುಮಾನ ಹಾಗೂ ಪ್ರಮಾಣಪತ್ರ ವಿತರಿಸಲಾಯಿತು. ಸುಮಾರು 120 ಮಂದಿ ಶಾಲಾ ಮಕ್ಕಳು ಪಾಲ್ಗೊಂಡು ಪೌಷ್ಠಿಕ ಆಹಾರ ಸೇವನೆ ಮತ್ತು ಆಹಾರ ವ್ಯರ್ಥತೆಯನ್ನು ತಡೆಗಟ್ಟುವ ಕುರಿತು ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ವಿಜ್ಞಾನ ಕೇಂದ್ರದ ಅಧಿಕಾರಿ–ಸಿಬ್ಬಂದಿ ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

# ಬಿಎಸ್‌ಎನ್‌ಎಲ್: 'ದೀಪಾವಳಿ ಬೊನಾಂಜಾ' ಸೇವೆ ಪಡೆದುಕೊಳ್ಳಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.23–ಭಾರತ್ ಸಂಚಾರ್ ನಿಗಮ್ ಲಿಮಿಟೆಡ್ ವತಿಯಿಂದ ದೀಪಾವಳಿ ಹಬ್ಬದ ಅಂಗವಾಗಿ ಅ.18 ರಿಂದ ನ.18 ರವರೆಗೆ ಒಂದು ತಿಂಗಳ ಸೀಮಿತ ಅವಧಿಗೆ 'ದೀಪಾವಳಿ ಬೊನಾಂಜಾ–2025' ಸೇವೆ ನೀಡುತ್ತಿದ್ದು, ಗ್ರಾಹಕರು ರಿಯಾಯಿತಿ ದರದಲ್ಲಿ ಸೇವೆ ಪಡೆದುಕೊಳ್ಳಬೇಕು ಎಂದು ಭಾರತ್ ಸಂಚಾರ್ ನಿಗಮ್ ಲಿಮಿಟೆಡ್ ಬಳ್ಳಾರಿಯ ಉಪಪ್ರಧಾನ ವ್ಯವಸ್ಥಾಪಕರು ತಿಳಿಸಿದ್ದಾರೆ.

**ವಿಶೇಷ ಕಾರ್ಪೊರೇಟ್ ಕೊಡುಗೆ:**

ಎಫ್‌ಆರ್‌ಸಿ1 ಯೋಜನೆಯ ಮೂಲಕ ಗ್ರಾಹಕರು ರೂ.1/–ಗೆ 4ಜಿ ಸೇವೆ ಪಡೆಯಬಹುದು. ಈ ಪ್ಲಾನ್ ನಲ್ಲಿ ಅನಿಯಮಿತ ಧ್ವನಿ ಕರೆ, 2ಜಿಬಿ ಡೇಟಾ/ದಿನದ ನಂತರ ವೇಗವನ್ನು 40 ಕೆಬಿಪಿಎಸ್ ಮತ್ತು 100 ಎಸ್‌ಎಂಎಸ್ (30 ದಿನಗಳಿಗೆ ಮಾತ್ರ). ಈ ಸೌಲಭ್ಯ ವ್ಯಾಪಾರ ಮತ್ತು ಬೃಹತ್ ಗ್ರಾಹಕರಿಗೆ ಅನ್ವಯಿಸುವುದಿಲ್ಲ.

*ವಿಶೇಷ ಕಾರ್ಪೊರೇಟ್ ಕೊಡುಗೆ:*

ಈ ಪ್ಲಾನ್ ನಲ್ಲಿ ಕನಿಷ್ಠ 10 ಹೊಸ ಪೋಸ್ಟ್ ಪೇಯ್ಡ್ ಬಿಎಸ್‌ಎನ್‌ಎಲ್ ಸಿಮ್ ಮತ್ತು ಒಂದು ಎಫ್‌ಟಿಟಿಹೆಚ್ ಸಂಪರ್ಕ ತೆಗೆದುಕೊಳ್ಳುವ ಕಾರ್ಪೊರೇಟ್ ಗ್ರಾಹಕರು ಎಲ್ಲಾ ಹೊಸ ಪೋಸ್ಟ್ ಪೇಯ್ಡ್ ಸಿಮ್ ಮತ್ತು ಎಫ್‌ಟಿಟಿಹೆಚ್ ಸಂಪರ್ಕಕ್ಕಾಗಿ ಮೊದಲ ತಿಂಗಳ ಎಫ್‌ಎಂಸಿ ಯಲ್ಲಿ ಶೇ.10 ರಷ್ಟು ರಿಯಾಯಿತಿ ಪಡೆಯುತ್ತಾರೆ.

*ಶೇ.2.5 ರಿಯಾಯಿತಿ ಪಡೆಯಿರಿ:*

ಸ್ನೇಹಿತರಿಗೆ ಅಥವಾ ಕುಟುಂಬದ ಸದಸ್ಯರ ಬಿಎಸ್‌ಎನ್‌ಎಲ್ ಸ್ವಯಂ ಆರೈಕೆ ಅಪ್ಲಿಕೇಶನ್ ಮೂಲಕ ರೂ.199 ಅಥವಾ ಅದಕ್ಕಿಂತ ಹೆಚ್ಚು ರಿಚಾರ್ಜ್ ಮಾಡುವ ಮೂಲಕ ಶೇ.2.5 ತ್ವರಿತ ರಿಯಾಯಿತಿ ಪಡೆಯಬಹುದು. ಮೊದಲ ರಿಚಾರ್ಜ್‌ಗಳಿಗೆ ಈ ಕೊಡುಗೆ ಅನ್ವಯಿಸುವುದಿಲ್ಲ.

*ರೂ.485 ಮತ್ತು ರೂ.1999 ರಿಚಾರ್ಜ್‌ಗಳಿಗೆ ರಿಯಾಯಿತಿ ಕೊಡುಗೆ:*

ಬಿಎಸ್‌ಎನ್‌ಎಲ್ ಸೆಲ್ಫ್ ಕೇರ್ ಅಪ್ಲಿಕೇಷನ್ ಅಥವಾ ವೆಬ್ ಸೈಟ್ ಮೂಲಕ ಮಾಡಲಾದ ಎಸ್‌ಟಿವಿ ರೂ.485 ಮತ್ತು ಪಿವಿ ರೂ.1999 ರ ರಿಚಾರ್ಜ್ ಗಳಿಗೆ, ಎಂಆರ್‌ಪಿ ಮೇಲೆ ಶೇ.05 ರಷ್ಟು ರಿಯಾಯಿತಿ ಲಭಿಸಲಿದೆ. **ಹಿರಿಯ ನಾಗರಿಕರಿಗಾಗಿ ಹೊಸ ಪಿವಿ ರೂ.1812 ವಾರ್ಷಿಕ ಯೋಜನೆ ಬಿಡುಗಡೆ:**

ಎಫ್‌ಆರ್‌ಸಿ ಪ್ರಕಾರ ಹಿರಿಯ ನಾಗರಿಕರಿಗಾಗಿ ರೂ.1812 ಗಳ ವಾರ್ಷಿಕ ಯೋಜನೆ ಬಿಡುಗಡೆ ಮಾಡಲಾಗಿದೆ. ಈ ಪ್ಲಾನ್ ನಲ್ಲಿ ಅನಿಯಮಿತ ಕರೆಗಳು, ಪ್ರತಿದಿನ 2ಜಿಬಿ ಡೇಟಾ (ನಂತರ ವೇಗವನ್ನು 40 ಕೆಬಿಪಿಎಸ್ ಗೆ ಇಳಿಸಿದ ಯು/ಎಲ್ ಡೇಟಾ), ಪ್ರತಿದಿನ ಉಚಿತ 100 ಎಸ್‌ಎಂಎಸ್ ಹಾಗೂ 6 ತಿಂಗಳವರೆಗೆ ಬಿಐಟಿವಿ ಪ್ರೀಮಿಯಂ ರಾಷ್ಟ್ರೀಯ ಪ್ಯಾಕ್, ಉಚಿತ ಸಿಮ್ ದೊರೆಯಲಿದೆ.

**ಇ–ಸಿಮ್ ಸೌಲಭ್ಯ:**

ಬಿಎಸ್‌ಎನ್‌ಎಲ್ ಇ–ಸಿಮ್ ಸೌಲಭ್ಯ ಪರಿಚಯಿಸಿದ್ದು, ಈ ಸೌಲಭ್ಯ ಪಡೆಯಲು ಹೊಂದಾಣಿಕೆಯ ಮೊಬೈಲ್ ಹ್ಯಾಂಡ್ ಸೆಟ್ ಅಗತ್ಯ.

ಎಲ್ಲಾ ಗ್ರಾಹಕರು https://self-care.bsnl.co.in ಆನ್‌ಲೈನ್ ನಲ್ಲಿ ಬಿಲ್ ಪಾವತಿಸುವ ಮೂಲಕ ಸೌಲಭ್ಯ ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ತಿತಿತಿ.ಛಿಟಿಟ.ಛಿಂ.ಎಟಿ ಗೆ ಭೇಟಿ ನೀಡಬಹುದು ಎಂದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅ.24 ರಂದು 'ಹೆಣ್ಣು ಮಕ್ಕಳ ಜನ್ಮೋತ್ಸವ' ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.23–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಬೇಟಿ ಬಚಾವೋ ಬೇಟಿ ಪಡಾವೋ ಅಭಿಯಾನದಡಿ ಅ.24 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಅಂತರಾಷ್ಟ್ರೀಯ ಹೆಣ್ಣುಮಕ್ಕಳ ಜನ್ಮೋತ್ಸವ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ ಶಾಂತಿ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್.ಕೆ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಉಮಾದೇವಿ, ಜಿಲ್ಲಾ ಮಕ್ಕಳ ರಕ್ಷಣ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸುಭದ್ರದೇವಿ ಸೇರಿದಂತೆ ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಇತರರು ಉಪಸ್ಥಿತರಿರುವರು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣನಾಯಕ. ಎಂ ಅವರು ತಿಳಿಸಿದ್ದಾರೆ.

# ದೇಶದ ಸ್ವಾತಂತ್ರ್ಯಕ್ಕಾಗಿ ಚೆನ್ನಮ್ಮ ಜೀ ಕೊಡುಗೆ ಅಪಾರ : ಕರಿಬಸಪ್ಪ ನಿಡಗುಂದಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಯಲಬುರ್ಗಾ ದೇಶದ ಸ್ವಾತಂತ್ರ್ಯಕ್ಕಾಗಿ ಪ್ರಥಮವಾಗಿ ಹೋರಾಟ ನಡೆಸಿದ ರಾಷ್ಟ್ರಮಾತೆ ಕಿತ್ತೂರು ರಾಣಿ ಚೆನ್ನಮ್ಮ ಅವರ ಕೊಡುಗೆ ಅಪಾರವಿದೆ ಎಂದು ಯಲಬುರ್ಗಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕರಿಬಸಪ್ಪ ನಿಡಗುಂದಿ ಹೇಳಿದರು.

ಪಟ್ಟಣದ ಶಾಸಕರ ಗೃಹ ಕಛೇರಿಯಲ್ಲಿ ಗುರುವಾರ ವೀರಮಾತೆ ಕಿತ್ತೂರು ರಾಣಿ ಚೆನ್ನಮ್ಮ ಜೀ ಯವರ ಜಯಂತಿ ನಿಮಿತ್ಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಚೆನ್ನಮ್ಮಯವರ ಧೈರ್ಯ ಸಾಹಸ, ಹೋರಾಟಗುಣಗಳು ಪ್ರತಿಯೊಬ್ಬರಿಗೂ ಸ್ಫೂರ್ತಿದಾಯಕವಾಗಿದೆ. ಬ್ರಿಟಿಷರ ವಿರುದ್ಧ ಭಾರತದ ಸ್ವಾತಂತ್ರ್ಯಕ್ಕಾಗಿ ದಿಟ್ಟ ಹೋರಾಟ ನಡೆಸಿದ ಚೆನ್ನಮ್ಮ ಅವರ ಚರಿತ್ರೆಯ ಅಜರಾಮರ, ಚೆನ್ನಮ್ಮ ಅವರ ತತ್ವ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ತಾಲೂಕು ಬ್ಲಾಕ್ ಕಾಂಗ್ರೆಸ್ ಕಾರ್ಯಾಧ್ಯಕ್ಷ ಡಾ.ಶಿವನಗೌಡ ದಾನರೆಡ್ಡಿ ಮಾತನಾಡಿ, ಕಿತ್ತೂರು ರಾಣಿ ಚೆನ್ನಮ್ಮ ಅವರ ಹೋರಾಟವನ್ನು ನಾವೆಲ್ಲರೂ ಸ್ಮರಿಸಬೇಕು, ನಾಡು–ದೇಶದ ರಕ್ಷಣೆಗಾಗಿ ಚೆನ್ನಮ್ಮನವರ ಹೋರಾಟ ಇಡೀ ಮನುಕುಲಕ್ಕೆ ಪ್ರೇರಣೆಯಾಗಿದೆ ಎಂದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಶರಣಪ್ಪ ಗಾಂಜಿ, ಭೂನ್ಯಾಯ ಮಂಡಳಿಯ ಸದಸ್ಯ ಮಲ್ಲಿಕಾರ್ಜುನ ಜಕ್ಕಲಿ, ಮುಖಂಡರಾದ ಅಂದಪ್ಪ ಅಬ್ಬಿಗೇರಿ, ಶರಣಪ್ಪ ಗೊಲ್ಲರ್, ನಾಗರಾಜ ತಲ್ಲೂರು, ನಿಂಗಪ್ಪ ಕಮತರ, ಶರಣಗೌಡ ಬಸಾಪೂರು, ಪುನೀತ್ ಕೊಪ್ಪಳ, ಚಂದ್ರು ಬನ್ನಪ್ಪಗೌಡ್ರು, ಅಪ್ಪಣ್ಣ ಬನ್ನಿಮರದ, ಕಾರ್ಯಕರ್ತರು ಕಛೇರಿಯ ಸಿಬ್ಬಂದಿಗಳು ಇದ್ದರು.

ಜಾಹೀರಾತಿಗಾಗಿ ಸಂಪರ್ಕಿಸಿರಿ: 9449732000

# ವಿದ್ಯುತ್ ಮಾಪಕವನ್ನು 5 ಅಡಿ ಎತ್ತರದಲ್ಲಿ ಅಳವಡಿಸಿಕೊಳ್ಳಲು ಜೆಸ್ಕಾಂ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.23–ಬಳ್ಳಾರಿ ನಗರ ಉಪವಿಭಾಗ–1 ಜೆಸ್ಕಾಂ ವ್ಯಾಪ್ತಿಯಲ್ಲಿ ಕಂಪನಿಯ ನಿಯಮಾನುಸಾರ ಎಲ್ಲಾ ಸ್ಥಾವರದಲ್ಲಿರುವ ಮೀಟರ್‌ಗಳನ್ನು ಆಪ್ಟಿಕಲ್ ಪ್ರೋಬ್ ಡಿವೈಸ್ ಮೂಲಕವೇ ರೀಡಿಂಗ್ ಮಾಡಬೇಕಾಗಿದ್ದು, ವಿದ್ಯುತ್ ಗ್ರಾಹಕರು ತಮ್ಮ ಸ್ಥಾವರದ ವಿದ್ಯುತ್ ಮಾಪಕವನ್ನು ಕಡ್ಡಾಯವಾಗಿ ನೆಲದಿಂದ 5 ಅಡಿ ಎತ್ತರದಲ್ಲಿ ಅಳವಡಿಸಿಕೊಳ್ಳಬೇಕು.

ವಿದ್ಯುತ್ ಮಾಪಕಗಳು ಗೋಚರಿಸುವ ಹಾಗೂ ಓದಲು ಅನುಕೂಲವಾಗುವ ಸ್ಥಳದಲ್ಲಿ ಇರಬೇಕು. ಮೀಟರ್ ಓದುವವರಿಗೆ ಸ್ಥಳವಿಲ್ಲದಿದ್ದಲ್ಲಿ ಸ್ಥಳವಿರುವ ಜಾಗದಲ್ಲಿ ಇರಿಸಬೇಕು. ಅ.25 ರೊಳಗಾಗಿ ನಿಗದಿತ ಎತ್ತರದ ಜಾಗದಲ್ಲಿ ಅಳವಡಿಸಿಕೊಳ್ಳಬೇಕು. ಈ ನಿಯಮ ಪಾಲನೆ ಮಾಡದಿದ್ದಲ್ಲಿ ಯಾವುದೇ ಮುನ್ಸೂಚನೆ ಇಲ್ಲದೆ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುವುದು ಎಂದು ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇಶಕ್ಕೆ ಪೊಲೀಸ್ ಕೊಡುಗೆ ಅಪಾರ– ಸಿಇಓ ವರ್ಣಿತ್ ನೇಗಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ದೇಶದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವುದು ಮತ್ತು ಜನರಿಗೆ ಅಗತ್ಯ ರಕ್ಷಣೆ ನೀಡುವಲ್ಲಿ ಪೊಲೀಸ್ ಕೊಡುಗೆ ಅಪಾರವಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಹೇಳಿದರು.

ಅವರು ಮಂಗಳವಾರ ಕೊಪ್ಪಳ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳ ಕಚೇರಿ ಆವರಣದಲ್ಲಿ ಜಿಲ್ಲಾ ಪೊಲೀಸ್ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಸೈನಿಕರು ದೇಶದ ಗಡಿಯಲ್ಲಿ ಸೇವೆ ಸಲ್ಲಿಸಿ ದೇಶವನ್ನು ರಕ್ಷಣೆ ಮಾಡಿದರೆ, ಪೊಲೀಸರು ಜನರ ಮಧ್ಯದಲ್ಲಿದ್ದುಕೊಂಡೇ ಎಲ್ಲರಿಗೂ ರಕ್ಷಣೆ ನೀಡುತ್ತಾರೆ. ಪ್ರವಾಹ, ವಿಪತ್ತು ಸೇರಿದಂತೆ ಹಲವಾರು ಆಪತ್ತು ಸಂದರ್ಭಗಳಲ್ಲಿ ಜನರನ್ನು ರಕ್ಷಿಸಲು ತಮ್ಮ ಜೀವನದ ಹಂಗನ್ನು ತೊರೆದು ಕಾರ್ಯನಿರ್ವಹಿಸುವ ಪೊಲೀಸರ ಸೇವೆ ಬಹಳ ಮಹತ್ವದ್ದಾಗಿದೆ. ಪೊಲೀಸ್ ಕರ್ತವ್ಯ ನಿಷ್ಠೆಗೆ ಅವರ ಕುಟುಂಬ ಸದಸ್ಯರ ಸಹಕಾರ ಕೂಡ ಸಾಕಷ್ಟಿದೆ. ಹುತಾತ್ಮ ಪೊಲೀಸರ ಸ್ಮರಣೆಯನ್ನು ಕೇವಲ ಒಂದು ದಿನಕ್ಕೆ ಸೀಮಿತಗೊಳಿಸಬಾರದು. ನಮ್ಮ ದೇಶದಲ್ಲಿ ಇತ್ತೀಚೆಗೆ ಹುತಾತ್ಮರಾದ ಪೊಲೀಸ್‌ರ ಕುಟುಂಬಗಳಿಗೆ ನಾವೆಲ್ಲರೂ ಆತ್ಮಸ್ಥೈರ್ಯ ತುಂಬಬೇಕಾಗಿದೆ ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್. ಅರಸಿದ್ಧಿ ಅವರು ಮಾತನಾಡಿ, ರಾಷ್ಟ್ರದಾದ್ಯಂತ ಇಂದು ಪೊಲೀಸ್ ಹುತಾತ್ಮರ ದಿನ ಆಚರಿಸುತ್ತಿದ್ದು, ಈ ಮೂಲಕ ಹುತಾತ್ಮ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಗೌರವ ಸಲ್ಲಿಸಲಾಗುತ್ತದೆ. 1957ರ ಅಕ್ಟೋಬರ್ 21ರಂದು ಸಿ.ಆರ್.ಪಿ.ಎಫ್.ನ ಒಂದು ಪೋಲಿಸ್ ಪಡೆಯು ಡಿಎಸ್ಪಿ ಕರಣ್‌ಸಿಂಗ್ ಅವರ ನೇತೃತ್ವದಲ್ಲಿ ಭಾರತ–ಚೀನಾ ಗಡಿಭಾಗದಲ್ಲಿ ಗಸ್ತು ಮಾಡುವಾಗ ಚೀನಾ ದೇಶದ ಸೈನಿಕರು ಭಾರತದಲ್ಲಿ ಅತಿಕ್ರಮಣ ಮಾಡಿದ್ದರು. ಆಗ ಭಾರತೀಯ ಪೋಲಿಸರಲ್ಲಿ ಕೇವಲ ಕೆಲವು ರೈಫಲ್‌ಗಳಿದ್ದವು. ಚೀನಾದ ಸೈನಿಕರ ಹತ್ತಿರ ಆಧುನಿಕ ಶಸ್ತ್ರಗಳಿದ್ದವು. ಆದರೂ ಸಹ ಭಾರತದ ಪೋಲಿಸರು ಅತೀ ಧೈರ್ಯ ಮತ್ತು ಸಹಾಸದಿಂದ ತಮ್ಮ ಕೊನೆಯ ಉಸಿರಿನವರೆಗೂ ವೈರಿಗಳ ಜೊತೆ ಯುದ್ಧ ಮಾಡಿದರು. ಆ ಸಮಯದಲ್ಲಿ ಹತ್ತು ಪೊಲೀಸ್ ಅಧಿಕಾರಿಗಳು ಹುತಾತ್ಮರಾದರು. ಉಳಿದವರನ್ನು ಚೀನಾದವರು ಬಂಧಿಸಿದರು. ಈ ಎಲ್ಲಾ ವೀರರು ದೇಶಕ್ಕಾಗಿ ತಮ್ಮ ಪ್ರಾಣವನ್ನೆ ಬಲಿಧಾನಕೊಟ್ಟ ಆ ದಿನದ ಮತ್ತು ಹುತಾತ್ಮರ ನೆನಪಿಗಾಗಿ ಸ್ಮಾರಕವನ್ನು ಕಟ್ಟಿಸಲಾಗಿದೆ. ದೇಶ ರಕ್ಷಣೆಗಾಗಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದ ಪೋಲಿಸರ ಸ್ಮರಣೆಗಾಗಿ ಈ ದಿನವನ್ನು ಪೊಲೀಸ್ ಹುತಾತ್ಮರ ದಿನಾಚರಣೆಯನ್ನು ಆಚರಿಸುತ್ತಾ ಬರಲಾಗುತ್ತಿದೆ ಎಂದರು.

ಕರ್ತವ್ಯಪಾಲನೆಯಲ್ಲಿ ಪೊಲೀಸ್ ಪಡೆಗಳು ತಮ್ಮ ಜೀವನವನ್ನು ಮುಡಿಪಾಗಿಟ್ಟು ಹೋರಾಡಿ ಹುತಾತ್ಮರಾದವರನ್ನು ಇಂದು ನಾವು ಸ್ಮರಿಸಬೇಕಾಗಿದೆ ಎಂದು ಹೇಳಿದ ಅವರು, ಕಳೆದ ಒಂದು ವರ್ಷದಲ್ಲಿ ನಮ್ಮ ದೇಶದಲ್ಲಿ ಹುತಾತ್ಮರಾದ ಎಲ್ಲಾ ಪೊಲೀಸರನ್ನು ಇದೇ ವೇಳೆಯಲ್ಲಿ ಸ್ಮರಿಸಿದರು.

*ಪೊಲೀಸ್ ಹುತಾತ್ಮರಿಗೆ ಗೌರವ ಸಮರ್ಪಣೆ:* ಕಾರ್ಯಕ್ರಮದ ಆರಂಭದಲ್ಲಿ ಪೊಲೀಸ್ ಸ್ಮಾರಕಕ್ಕೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಇತರೆ ಅಧಿಕಾರಿಗಳು ಹಾಗೂ ಹಲವು ಗಣ್ಯರು ಪುಷ್ಪನಮನ ಸಲ್ಲಿಸಿದರು. ಹುತಾತ್ಮರಾದ ಪೋಲಿಸರಿಗೆ ಗೌರವ ಸಮರ್ಪಣೆಗಾಗಿ ಗಾಳಿಯಲ್ಲಿ ಮೂರು ಸುತ್ತುಗುಂಡು ಹಾರಿಸಲಾಯಿತು ಮತ್ತು ಮೌನಾಚಾರಣೆ ಆಚರಿಸಲಾಯಿತು. ಕೊಪ್ಪಳ ಜಿಲ್ಲೆಯಲ್ಲಿ ಕರ್ತವ್ಯದ ವೇಳೆ ಇತ್ತೀಚೆಗೆ ನಿಧನರಾದ ಪೊಲೀಸ್ ಕುಟುಂಬದ ಸದಸ್ಯರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಹೇಮಂತಕುಮಾರ್ ಸೇರಿದಂತೆ ಡಿ.ವೈ.ಎಸ್.ಪಿ.ಗಳು, ಪೊಲೀಸ್ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಸೇರಿದಂತೆ ಹಲವು ಗಣ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಬ್ರಿಟಿಷರ ವಿರುದ್ಧ ಹೋರಾಡಿ ಮಹಿಳೆಯರಿಗೆ ಸ್ಫೂರ್ತಿಯಾಗಿದ್ದ ಕಿತ್ತೂರು ರಾಣಿ ಚೆನ್ನಮ್ಮ: ಅಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.23–ಬ್ರಿಟಿಷರ ವಿರುದ್ಧ ಹೋರಾಡಿದ್ದ ಕೆಚ್ಚೆದೆಯ ಸ್ವಾತಂತ್ರ ಹೋರಾಟಗಾರ್ತಿ ಕಿತ್ತೂರು ರಾಣಿ ಚೆನ್ನಮ್ಮ ಅವರು ಅನೇಕ ವೀರ ಮಹಿಳೆಯರಿಗೆ ಪ್ರೇರಣೆಯಾಗಿದ್ದಾರೆ ಎಂದು ಡಾ.ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣದ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಸ್ವಾತಂತ್ರ್ಯ ಹೋರಾಟಗಾರ್ತಿ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಜೀವನದಲ್ಲಿ ಹೋರಾಟ ಮತ್ತು ಭೌತಿಕವಾದ ಶಕ್ತಿ ಇರಬೇಕು. ಬುದ್ಧ, ಬಸವ, ಅಂಬೇಡ್ಕರ್ ಅವರ ಚಿಂತನೆ ಮತ್ತು ಆದರ್ಶ ವಿಚಾರಗಳನ್ನು ಪಾಲಿಸಿ ಮೌಲ್ಯಯುತ ಬದುಕನ್ನು ರೂಪಿಸಿಕೊಳ್ಳೋಣ ಎಂದು ಕರೆ ನೀಡಿದರು.

ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೊರೇಷನ್ ಲಿಮಿಟೆಡ್ ನ ಉಪಾಧ್ಯಕ್ಷ ಹೆಚ್.ಲಕ್ಷ್ಮಣ ಅವರು ಮಾತನಾಡಿ, ಕಿತ್ತೂರು ರಾಣಿ ಚೆನ್ನಮ್ಮ ಅವರು ಬ್ರಿಟಿಷರ ವಿರುದ್ಧ ಹೋರಾಡಿದ ವೀರ ಮಹಿಳೆ ಎನೆಸಿಕೊಂಡಿದ್ದರು. ಸಮಾಜಕ್ಕೆ ಅವರು ಅಪಾರ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, 12ನೇ ಶತಮಾನದಲ್ಲಿ ಬಸವಣ್ಣನವರು ಸಾರಿದ ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಎಂಬ ನೀತಿಯನ್ನು ನಾವು ಅಳವಡಿಸಿಕೊಂಡಿದ್ದರೆ ಬ್ರಿಟಿಷರು ನಮ್ಮ ದೇಶಕ್ಕೆ ಬಂದು ದಾಳಿ ಮಾಡುತ್ತಿರಲ್ಲಿಲ್ಲ. ನಾವು ನಮ್ಮ ಮನಸಲ್ಲಿ ಮನೋವಾದ ತುಂಬಿಕೊಂಡಿದ್ದೇವೆ. ಜಾತಿ, ಧರ್ಮ, ಭೇದ–ಭಾವವಿಲ್ಲದೆ ನಾವೆಲ್ಲರೂ ಒಗ್ಗಟ್ಟಾಗಿ ಜೀವನ ನಡೆಸಬೇಕು ಎಂದರು.

ಮೋಕಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕರಾದ ಡಾ.ಕಲಾವತಿ ಬಿ.ಜಿ ಮಾತನಾಡಿ, ಶ್ರೇಷ್ಠ ವೀರನಾರಿ ಕಿತ್ತೂರು ರಾಣಿ ಚೆನ್ನಮ್ಮ ಅವರು ಕೇವಲ ತಮ್ಮ ಸಮುದಾಯಕ್ಕೆ ಸೀಮಿತವಾಗಿರದೇ, ಬ್ರಿಟಿಷರ ವಿರುದ್ಧ ಹೋರಾಡಿದ ಸ್ವಾತಂತ್ರ್ಯ ಹೋರಾಟಗಾರ್ತಿಯಾಗಿದ್ದಾರೆ. ನಮ್ಮ ದೇಶದ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಪ್ರಸಿದ್ಧ ಕಪ್ಪ ಕಾಣಿಕೆಯ ಪ್ರಸಂಗ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ಅವರ ವೇಷ ಭೂಷಣ ಧರಿಸುವುದು ವಿಶೇಷವಾಗಿದೆ ಎಂದು ಹೇಳಿದರು.

ಕಿತ್ತೂರು ಚೆನ್ನಮ್ಮ ಅವರು 1778 ರ ಅಕ್ಟೋಬರ್ 23 ರಂದು ಬೆಳಗಾವಿ ಜಿಲ್ಲೆಯ ಕಾಕತಿ ಎಂಬ ಸಣ್ಣ ಹಳ್ಳಿಯಲ್ಲಿ ತಂದೆ ದೂಳಪ್ಪ, ತಾಯಿ ಪದ್ಮಾವತಿ ಮಗಳಾಗಿ ಜನಿಸಿದರು. ಲಿಂಗಾಯತ ಪಂಚಮಸಾಲಿ ಸಮುದಾಯಕ್ಕೆ ಸೇರಿದ ಅವರು ಚಿಕ್ಕಂದಿನಿಂದಲೇ ಕುದುರೆ ಸವಾರಿ, ಕತ್ತಿವರಸೆ ಮತ್ತು ಬಿಲ್ಲುಗಾರಿಕೆಯಲ್ಲಿ ತರಬೇತಿ ಪಡೆದಿದ್ದರು. ಅವರು ದೇಸಾಯಿ ಮನೆತನದ ರಾಜಾ ಮಲ್ಲಸರ್ಜ ಅವರನ್ನು 15 ನೇ ವಯಸ್ಸಿನಲ್ಲಿ ವಿವಾಹವಾದರು ಎಂದು ಅವರ ಜೀವನದ ಬಗ್ಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿಯ ಕು. ಜಯ ಲಕ್ಷ್ಮೀ ಎಂ.ಎಸ್ ಅವರು ವಚನ ಸಂಗೀತ ಪ್ರಸ್ತುತ ಪಡಿಸಿದರು. ಕಾರ್ಯಕ್ರಮಕ್ಕೂ ಮುನ್ನ ಸಂವಿಧಾನದ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಲಾಯಿತು.

ಸ್ವಾತಂತ್ರ್ಯ ಹೋರಾಟಗಾರ್ತಿ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಅಂಗವಾಗಿ ಹಮ್ಮಿಕೊಂಡಿದ್ದ ಮೆರವಣಿಗೆಯು ಕಿತ್ತೂರು ರಾಣಿ ಚೆನ್ನಮ್ಮ ಭಾವಚಿತ್ರದೊಂದಿಗೆ ವಿವಿಧ ಕಲಾ ವಾದ್ಯಗಳ ಮೂಲಕ ನಗರದ ಮುನ್ಸಿಪಾಲ್ ಕಾಲೇಜು ಮೈದಾನದಿಂದ ಆರಂಭಗೊಂಡು ಇಂದಿರಾ ವೃತ್ತ, ಡಾ.ರಾಜ್ ಕುಮಾರ್ ರಸ್ತೆಯ ಮೂಲಕ ಸಾಂಸ್ಕೃತಿಕ ಸಮುಚ್ಚಯ ಸಂಭಾಗಣ ಕಾರ್ಯಕ್ರಮದವರೆಗೆ ತಲುಪಿ ಸಂಪನ್ನಗೊಂಡಿತು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಬಿ.ನಾಗರಾಜ, ಬಳ್ಳಾರಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಗೋನಾಳ್ ಎಂ.ನಾಗಭೂಷಣ, ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಪಂಪನಗೌಡ ಸೇರಿದಂತೆ ಸಮಾಜದ ಮುಖಂಡರು, ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿದ್ದರು.

# ಬಳ್ಳಾರಿ: ಅ.25 ರಂದು 'ಮಾದರಿ ಉದ್ಯಾನವನ' ಉದ್ಘಾಟನಾ ಸಮಾರಂಭ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.23–ಬಳ್ಳಾರಿನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಆದರ್ಶ ಉದ್ಯಾನವನ ಅಭಿವೃದ್ಧಿ ಸಂಘ ಇವರ ಸಹಯೋಗದಲ್ಲಿ ಅ.25 ರಂದು ಸಂಜೆ 05 ಗಂಟೆಗೆ ನಗರದ ಜಿಎಸ್‌ಟಿ ಆಫೀಸ್ ಹತ್ತಿರದ ವಾರ್ಡ್ ನಂ.20 ರ ರಾಘವೇಂದ್ರ ಕಾಲೋನಿಯ 2ನೇ ಹಂತದಲ್ಲಿ 'ಮಾದರಿ ಉದ್ಯಾನವನ' ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ವಸತಿ,ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವರಾದ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಮತ್ತು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಅವರು ಉದ್ಘಾಟಿಸುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್,ಡಾ.ಸೈಯದ್ ನಾಸೀರ್ ಹುಸೇನ್, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರೂ ಆದ ಕಂಪ್ಲಿ ಶಾಸಕ ಜೆ.ಎನ್.ಗಣೇಶ್, ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಶೀಲ್ ನಮೋಶಿ,ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ,ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್,ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್. ಆಂಜನೇಯಲು ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಬೆಂಗಳೂರಿನ ಬಹು ಮಹಡಿಗಳ ಕಟ್ಟಡದ ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಆಯುಕ್ತಾಲಯದ ಆಯುಕ್ತ ವೆಂಕಟಚಲಪತಿ ಆರ್., ಬಳ್ಳಾರಿ ಮಹಾನಗರ ಪಾಲಿಕೆ ಆಯುಕ್ತ ಮಂಜುನಾಥ ಪಿ.ಎಸ್., ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಜಿ.ಖಲೀಲ್ ಸಾಬ್ ಸೇರಿದಂತೆ ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯರು, ಅಧಿಕಾರಿ–ಸಿಬ್ಬಂದಿ ವರ್ಗ ಮತ್ತು ಸಾರ್ವಜನಿಕರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಬೇವೂರ ತಂಡ ವಿಭಾಗ ಮಟ್ಟಕ್ಕೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.23–ಬೇವೂರಿನ ಆದರ್ಶ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದ ಪ್ರೌಢಶಾಲಾ ವಿಭಾಗದ ಬಾಲಕರ ಖೋ ಖೋ ತಂಡ ವಿಭಾಗಮಟ್ಟಕ್ಕೆ ಆಯ್ಕೆಯಾಗಿದೆ.

ಬಾಗಲಕೋಟೆ ಜಿಲ್ಲಾ ಕ್ರೀಡಾಂಗಣದಲ್ಲಿ ಈಚೆಗೆ ಜರುಗಿದ ಪ್ರೌಢಶಾಲಾ ವಿಭಾಗದ ಬಾಲಕರ ಜಿಲ್ಲಾಮಟ್ಟದ ಖೋಖೋ ಪಂದ್ಯಾವಳಿಯಲ್ಲಿ ಬೇವೂರ ತಂಡ ಬೀಳಗಿ ತಾಲ್ಲೂಕಿನ ಕುಂದರಗಿಯ ಎಸ್.ಆರ್.ಹೈಸ್ಕೂಲ ತಂಡವನ್ನು 15–7 ಅಂಕಗಳಿಂದ ಸೋಲಿಸಿ ಪ್ರಥಮ ಸ್ಥಾನ ಪಡೆದು ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದೆ ಎಂದು ಪ್ರಾಚಾರ್ಯ ವಿ.ಬಿ.ಅರಹುಣಸಿ, ಮುಖ್ಯಗುರು ಯೋಗೇಶ ಲಮಾಣಿ ಹಾಗೂ ದೈಹಿಕ ಶಿಕ್ಷಣ ಶಿಕ್ಷಕ ಪ್ರಕಾಶ ತಳವಾರ ತಿಳಿಸಿದ್ದಾರೆ.

# ಬಿಜೆಪಿ ಕಚೇರಿಯಲ್ಲಿ ಕಿತ್ತೂರು ಚನ್ನಮ್ಮ ಜಯಂತಿ

## ಚನ್ನಮ್ಮಳ ಶೌರ್ಯ, ಸಾಹಸ ಸ್ಮರಣೀಯ–ಡಾ.ಚರಂತಿಮಠ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.23– ಬ್ರಿಟಿಷರ ವಿರುದ್ಧ ಕೆಚ್ಚೆದೆಯಿಂದ ಹೋರಾಡಿ ವಿಜಯದ ಕಹಳೆ ಮೊಳಗಿಸಿದ ವೀರರಾಣಿ, ಕಿತ್ತೂರು ಚೆನ್ನಮ್ಮನವರ ಶೌರ್ಯ, ಸಾಹಸ ಎಂದೆಂದಿಗೂ ಸ್ಮರಣೀಯವಾಗಿದೆ ಎಂದು ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಹೇಳಿದರು. ನಗರದ ಶಿವಾನಂದ ಜೀನನಲ್ಲಿರುವ ಬಿಜೆಪಿ ಕಾರ್ಯಾಲಯದಲ್ಲಿ ಗುರುವಾರ ಭಾರತೀಯ ಜನತಾ ಪಾರ್ಟಿ ಹಮ್ಮಿಕೊಂಡ ಕಿತ್ತೂರ ಚೆನ್ನಮ್ಮನ ಜಯಂತಿ ಆಚರಣೆ ನಿಮಿತ್ತ ಚನ್ನಮ್ಮಳ ಭಾವಚಿತ್ರಕ್ಕೆ ಪುಷ್ಪಾಂಜಲಿ ಸಲ್ಲಿಸಿ ಮಾತನಾಡಿದ ಅವರು, ದೇಶದ ಜನರ ಮನಸ್ಸಿನಲ್ಲಿ ಸ್ವಾತಂತ್ರ್ಯದ ಬೀಜಗಳನ್ನು ಬಿತ್ತಿದ ಪ್ರಮುಖ ಮಹಿಳೆಯರಲ್ಲಿ ಕಿತ್ತೂರು ರಾಣಿ ಚನ್ನಮ್ಮ ಕೂಡ ಒಬ್ಬರು. ಚನ್ನಮ್ಮ ಜನರು ಸ್ವತಂತ್ರರಾಗಿರಬೇಕು ಮತ್ತು ಸ್ವಾಭಿಮಾನದ ಜೀವನ ನಡೆಸಬೇಕೆಂದು ಬಯಸಿದ್ದರು. ಅವರ ಹೋರಾಟದ ಜೀವನ ಎಲ್ಲರಿಗೂ ಆದರ್ಶ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಶಿವಾನಂದ ಟವಳಿ ಕಿತ್ತೂರು ಚೆನ್ನಮ್ಮಳ ಜೀವನ ಚರಿತ್ರೆಯನ್ನು ವಿವರಿಸಿದರು.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾರಾವ, ಬಸವರಾಜ ಯಂಕಂಚಿ, ಸತ್ಯನಾರಾಯಣ ಹೇಮಾದ್ರಿ, ನಗರ ಮಂಡಲ ಅಧ್ಯಕ್ಷ ಬಸವರಾಜ ಹುನಗುಂದ, ಶ್ರೀಧರ ನಾಗರಬೆಟ್ಟ, ಗುಂಡುರಾವ ಶಿಂಧೆ, ಪಂಚಮಸಾಲಿ ಸಮಾಜದ ಜಿಲ್ಲಾಧ್ಯಕ್ಷ ರವಿ ಪಟ್ಟಣದ, ಉಪಾಧ್ಯಕ್ಷ ಶಂಕರ ಅರಷಿಣಗೋಡಿ, ಸಂತೋಷ ಜಕಾತಿ, ಪರಶುರಾಮ ಮುಳಗುಂದ, ಸಿದ್ದಣ್ಣ ಹಂಪನಗೌಡರ, ರಾಮಣ್ಣ ಜುಮನಾಳ, ಆನಂದ ಕೊಟಗಿ, ರವಿ ಧಾಮಜಿ, ಸಂಗನಗೌಡ ಗೌಡರ, ಪ್ರಶಾಂತ ಕಗ್ಗೋಡ, ಈರಣ್ಣ ಕಲಬುರಗಿ, ನೀಲಪ್ಪ ಬೇವೂರ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಮಾತಾಜಿ ಕನಸು ನನಸಾಗಿದೆ: ಶಾಸಕ ಸಿದ್ದಲಿಂಗಪ್ಪ ಪಾಟೀಲ



(ಡಿ. ಕೆ. ಪ್ರಹ್ಲಾದ ಜಿ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:ಅ. 23– ಮಾತಾಜಿ ಪೂಜ್ಯ ಶ್ರೀ ಭಾಗ್ಯವಂತಿ ದೇವಿಯವರ ಕನಸು ನನಸಾಗಿದೆ ಎಂದು ಹುಮನಾಬಾದಿನ ಶಾಸಕರಾದ ಸಿದ್ದಲಿಂಗಪ್ಪ ಪಾಟೀಲ್ ತಿಳಿಸಿದರು. ತಾಲೂಕಿನ ಕೌಡಿಯಾಳ (ಎಸ್) ಗ್ರಾಮದಲ್ಲಿ ಭಾಗ್ಯ ವಂತಿದೇವಿಯ 22 ನೇಯ ಜಾತ್ರಾ ಮಹೋತ್ಸವ ಹಾಗೂ ದೇವಸ್ಥಾನದ ಕಳಸಾರೋಹಣ ಸಮಾರೋಪ ಸಮಾರಂಭದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಎಲ್ಲರ ಸಹಾಯ ಸಹಕಾರದಿಂದ ಉತ್ತಮ ಸೇವೆ ಸಾಗಿದೆ ಎಂದರು. ಮಾಜಿ ಜಿಲ್ಲಾ ಪಂಚಾಯಿತ ಸದಸ್ಯರಾದ ಗುಂಡುರಡ್ಡಿ ಆರ್ ಕಮಲಾಪುರೆ ಮಾತನಾಡಿ ಒಳ್ಳೆಯ ಸೇವೆ ಮಾಡಿದ್ದಿರಿ ಎಲ್ಲರಿಗೂ ಒಳ್ಳೆಯದಾಗಲಿ ಎಂದರು. ದಿವ್ಯ ಸಾನಿಧ್ಯವನ್ನು ಹಾವೇರಿ ನರಸೀಪುರದ ಪರಮಪೂಜ್ಯ ಶ್ರೀ ಶಾಂತಭೀಸ್ಮ ಜಗದ್ಗುರುಗಳು ಮಾತನಾಡಿ. ಪೂಜ್ಯ ಮಾತಾಜಿಯವರು ಮಾತೃಹೃದಯಗಳಾಗಿದ್ದಾರೆ. ಭಕ್ತರಿಗೆ ಅಂಧ ಕಾರದಿಂದ ಹೊರಗೆ ತನ್ನಿ ಭಕ್ತರಿಗೆ ಆತ್ಮವಿಶ್ವಾಸ ತುಂಬಿ ಎಂದರು. ಈ ಸಂದರ್ಭದಲ್ಲಿ ರಾಜೇಶ್ವರದ ಪೂಜ್ಯ ಶ್ರೀ ಘನಲಿಂಗ ರುದ್ರಮುನಿ ಶಿವಾಚಾರ್ಯರು. ಸಸ್ತಾಪುರದ ಪೂಜ್ಯ ಶ್ರೀ ಮಹಾದೇವಿ ತಾಯಿ. ಪೂಜ್ಯ ಶ್ರೀ ರತ್ನಕಾಂತ ಶಿವಯೋಗಿಗಳು. ಹಳ್ಳಿಖೇಡದ ಪೂಜ್ಯ ಶ್ರೀ ವಾಲ್ಮೀಕಿ ರಾಮ ಮಹಾರಾಜರು. ತಾಲ್ಲೂಕ ಟೋಕರಿ ಕೋಳಿ ಸಮಾಜದ ಅಧ್ಯಕ್ಷರಾದ ನಾಗನಾಥ ಚಾಮಲ್ಲೆ. ಸಮಾಜದ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಚನ್ನವೀರ ಜಮಾದಾರ. ತುಕಾರಾಮ ರೊಡ್ಡೆ. ಬಿಜೆಪಿ ಮುಖಂಡರಾದ ಜಗನ್ನಾಥ ಪಾಟೀಲ ಸದಲಾಪುರ. ನಾಗಭೂಷಣ ಸಂಗಮನವರ್. ಬಸವರಾಜ ಸಂಪನಗೊಳ. ಹುಮನಾಬಾದ ತಾಲೂಕಿನ ಬ್ರಾಹ್ಮಣ ಸಮಾಜದ ಉಪಾಧ್ಯಕ್ಷರಾದ ಮಿಲಿಂದ್ ಮುರಳಿಧರ್ ರಾವ್ ಕುಲಕರ್ಣಿ. ಮಾರುತಿ ಬಿರಾದಾರ. ಬಂಡೆಪ್ಪ ಕುಂಬಾರ್. ಜಾತ್ರಾ ಸಮಿತಿಯ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸೇರಿದಂತೆ ಅನೇಕರು ಭಾಗವಹಿಸಿದ್ದರು. ಸಂಗೀತ ಸೇವೆಯನ್ನು ಕರಬಸಯ್ಯ ಸ್ವಾಮಿ. ಮಾರುತಿ ಸಲ್ಲಿಸಿದರು. ಸಂಚಾಲನೆ ಹಾಸ್ಯ ಕಲಾವಿದರಾದ ನವಲಿಂಗ ಪಾಟೀಲ ನಿರ್ವಹಿಸಿದರು. ನಿರಗುಡಿಯ ಪೂಜ್ಯ ಶ್ರೀ ಹವಾ ಮಲ್ಲಿನಾಥ ಮಹಾರಾಜರು ಜಾತ್ರೆ ಆಗಮಿಸಿ ಬಂದಂತಹ ಭಕ್ತಾದಿಗಳಿಗೆ

# ಅ.26 'ಸ್ವಾತಂತ್ರ್ಯದ ಕಿಡಿ' ಕೃತಿ ಲೋಕಾರ್ಪಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.23–ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕ ಬಾಗಲಕೋಟೆ ಹಾಗೂ ಬೆಂಗಳೂರಿನ ಆಕೃತಿ ಕನ್ನಡ ಪ್ರಕಾಶನ ಇವರ ಸಹಯೋಗದಲ್ಲಿ ಹೂಲಿ ಶೇಖರ ಅವರ 'ಸ್ವಾತಂತ್ರ್ಯದ ಕಿಡಿಗಳು' ಕೃತಿ ಲೋಕಾರ್ಪಣೆ ಕಾರ್ಯಕ್ರಮ ಅ.26 ರಂದು ಜರುಗಲಿದೆ.

ನವನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ರವಿವಾರ ಮುಂಜಾನೆ 10.30 ಗಂಟೆಗೆ ನಡೆಯುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಸಾಪ ಜಿಲ್ಲಾ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ವಹಿಸುವರು. ಬೆಳಗಾವಿಯ ಹಿರಿಯ ನಾಟಕಕಾರ ಡಾ.ಡಿ.ಎಸ್.ಚೌಗಲೆ ಕೃತಿ ಬಿಡುಗಡೆ ಮಾಡುವರು.

ಧಾರವಾಡ ಆಕಾಶವಾಣಿಯ ನಿರ್ದೇಶಕ ಡಾ.ಬಸು ಬೇವಿನಗಿಡದ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಸಾಹಿತಿಗಳಾದ ಡಾ.ವಾಯ್. ಎಂ.ಯಾಕೊಳ್ಳಿ ಹಾಗೂ ಡಾ.ಚಂದ್ರಶೇಖರ ಹೆಗಡೆ ಕೃತಿ ಪರಿಚಯಿಸಲಿದ್ದು, ಕೃತಿಕಾರ ಹೂಲಿ ಶೇಖರ, ಪ್ರಕಾಶಕಿ ಶಾಲಿನಿ ಪ್ರದೀಪ ಉಪಸ್ಥಿತರಿರುವರು.

# ಅಕ್ಟೋಬರ್ 24, 25 ಕ್ಕೆ ಜೆಸ್ಕಾಂ ಆನ್‌ಲೈನ್ ಸೇವೆ ಅಲಭ್ಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.23,2025: ಜೆಸ್ಕಾಂ ವಿದ್ಯುತ್ ಸರಬರಾಜು ಕಂಪನಿಯ ಮಾಹಿತಿ ತಂತ್ರಜ್ಞಾನ ವ್ಯವಸ್ಥೆಯ ತುರ್ತು ನಿರ್ವಹಣೆ ಕಾರ್ಯ ಹಿನ್ನೆಲೆಯಲ್ಲಿ ಆನ್‌ಲೈನ್ ಸೇವೆಗಳು ಅಕ್ಟೋಬರ್ 24, 25 ರಂದು ಲಭ್ಯ ಇರುವುದಿಲ್ಲ ಎಂದು ಜೆಸ್ಕಾಂ ಪ್ರಕಟಣೆ ತಿಳಿಸಿದೆ. ಸಿಸ್ಟಂ ಡೌನ್‌ಟೈಮ್ ಅಕ್ಟೋಬರ್ 24ರ ರಾತ್ರಿ 8ರಿಂದ ಆರಂಭವಾಗಿ 25ರ ಮಧ್ಯಾಹ್ನ 1ಗಂಟೆಗೆ ಕೊನೆಗೊಳ್ಳುತ್ತದೆ. ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ಗ್ರಾಹಕರಿಗೆ, www. gescomglb.org ಪೋರ್ಟಲ್ ಮೂಲಕ ಮಾಡುವ ಆನ್‌ಲೈನ್ ಸೇವೆಗಳಾದ ಬಿಲ್ ಪಾವತಿ, ಹೊಸ ಸಂಪರ್ಕ ಲಭ್ಯವಿರುವುದಿಲ್ಲ, ಹಾಗೆಯೇ ವಿದ್ಯುತ್ ಬಿಲ್ ಪಾವತಿಗಾಗಿ ಬಳಸುವ ಜೆಸ್ಕಾಂ ಸ್ನೇಹಿ ಆ್ಯಪ್, ಕರ್ನಾಟಕ ಒನ್ ಸೇರಿದಂತೆ ಮೊದಲಾದ ಥರ್ಡ್ ಪಾರ್ಟಿ ಪಾವತಿ ವಿಧಾನಗಳಲ್ಲಿ ಆನ್‌ಲೈನ್ ಸೇವೆ ಅಲಭ್ಯ. ಅಡಚಣೆಗಾಗಿ ಗ್ರಾಹಕರು ಸಹಕಾರ ನೀಡಬೇಕೆಂದು ಜೆಸ್ಕಾಂ ಕೋರಿದೆ. ಜೆಸ್ಕಾಂನ ಆನ್‌ಲೈನ್ ಸೇವೆಗಳು ಲಭ್ಯವಿರದ ನಗರಗಳು ಗುಲ್ಬರ್ಗಾ, ಮಾನವಿ, ಸಿಂಧನೂರು, ಬೀದರ್, ಗಂಗಾವತಿ, ಸೇಡಂ, ಬಸವಕಲ್ಯಾಣ, ವಾಡಿ, ಆಳಂದ, ಭಾಲ್ಕಿ, ಶಹಾಬಾದ್, ಶಹಾಪುರ, ಶೋರಾಪುರ, ಸಿರುಗುಪ್ಪಾ, ಕಂಪ್ಲಿ, ಯಾದಗಿರಿ, ರಾಯಚೂರು, ಬಳ್ಳಾರಿ, ಕೊಪ್ಪಳ, ಹುಮ್ನಾಬಾದ್ ಹಾಗೂ ಹೊಸಪೇಟೆ.

# ಹೊನ್ನರಹಳ್ಳಿಯಲ್ಲಿ ಕಿತ್ತೂರ ಚನ್ನಮ್ಮ ಜಯಂತಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.23–ಜಿಲ್ಲೆಯ ಹುನಗುಂದ ತಾಲೂಕಿನ ಹೊನ್ನರಹಳ್ಳಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವೀರರಾಣಿ ಕಿತ್ತೂರು ಚನ್ನಮ್ಮ ಜಯಂತಿಯನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಿಕ್ಷಕ ಎಸ್.ಎಸ್.ಲಾಯದಗುಂದಿ, ನಮ್ಮೊಳಗಿನ ಒಗ್ಗಟ್ಟಿನ ಕೊರತೆಯಿಂದ ಬ್ರಿಟಿಷರು ಎರಡು ಶತಮಾನಗಳ ಕಾಲ ನಮ್ಮನ್ನಾಳಿದರು. ಆದ್ದರಿಂದ ನಾವೆಲ್ಲರೂ ನಮ್ಮ ನೆಲ, ಜಲ, ಭಾಷೆ, ಸಂಸ್ಕೃತಿಯ ಮೇಲೆ ಅಭಿಮಾನ ತಾಳಬೇಕು. ಭಾಷಾಭಿಮಾನ, ದೇಶಾಭಿಮಾನದಿಂದ ಏಕತೆ ಸಾಧಿಸಲು ಸಾಧ್ಯ. ಏಕತೆ ಹೋರಾಟಕ್ಕೆ ಮುನ್ನುಡಿಯಾಗುತ್ತದೆ ಎಂದರು.

ಮಕ್ಕಳ ಸಾಹಿತಿ ಅಶೋಕ ಬಳ್ಳಾ ಮಾತನಾಡಿ, ಸಾಧಕರು, ಹೋರಾಟಗಾರರ ದಿನಾಚರಣೆಗಳು ಇತಿಹಾಸದ ಅರಿವು ಮೂಡಿಸುವುದರ ಜೊತೆಗೆ ಅವರ ಆದರ್ಶಗಳನ್ನು ಅಳವಡಿಸಿಕೊಂಡು ಸಾಗಲು ಪ್ರೇರಣೆ ನೀಡುತ್ತವೆ. ಕಿತ್ತೂರು ಚೆನ್ನಮ್ಮಳ ಜೀವನಾದರ್ಶಗಳು ಮಕ್ಕಳಲ್ಲಿ ಧೈರ್ಯ, ಸ್ಥೈರ್ಯ, ವೀರಾವೇಶ, ಸ್ವಾಭಿಮಾನ ಪ್ರದರ್ಶನಕ್ಕೆ ಮುನ್ನುಡಿಯಾಗುತ್ತವೆ ಎಂದು ಹೇಳಿದರು.

ಮುಖ್ಯಗುರು ಪ್ರಭು ಮಾಲಗಿತ್ತಿ ಅಧ್ಯಕ್ಷತೆವಹಿಸಿ ಮಾತನಾಡಿ, ಬ್ರಿಟಿಷರ ಕುಟಿಲ ನೀತಿಗಳ ವಿರುದ್ಧ ಸಿಡಿದೆದ್ದ ಕರ್ನಾಟಕದ ಮೊದಲ ಮಹಿಳೆ ಕಿತ್ತೂರು ಚೆನ್ನಮ್ಮಳಾಗಿದ್ದು, ಬಳೆ ಧರಿಸಿದ ಕೈಯಲ್ಲಿ ಖಡ್ಗ ಹಿಡಿದು ಆಂಗ್ಲರ ವಿರುದ್ಧ ವೀರಾವೇಶ ತೋರಿ ದೇಶದಾದ್ಯಂತ ಸ್ವಾತಂತ್ರ್ಯದ ಕಿಚ್ಚು ಹೆಚ್ಚಿಸಿದ ಕೀರ್ತಿ ಚೆನ್ನಮ್ಮಳಿಗೆ ಸಲ್ಲುತ್ತದೆ ಎಂದರು.

ಶಿಕ್ಷಕರಾದ ಎಂ.ಜಿ.ಬಡಿಗೇರ, ಮಹಾಂತೇಶ ವಂದಾಲಿ, ಸುಭಾಸ ಕಣಗಿ ಉಪಸ್ಥಿತರಿದ್ದರು.

# ಇಂದು ಸಾಂಸ್ಕೃತಿಕ ಭವನ ಲೋಕಾರ್ಪಣೆ

ಮಲ್ಲಮ್ಮ ನುಡಿ ವಾರ್ತೆ

ಕಲ್ಬುರ್ಗಿ,23.– ನಗರದ ಗೋಕುಲ್ ನಗರ ಜೆಡಿಎ ಲೇಔಟ್ ಫಿಲ್ಟರ್ ಬೇಡ ರಸ್ತೆಯಲ್ಲಿರುವ ಶ್ರೀ ಶಿವ ಮಂದಿರ ಟ್ರಸ್ಟ್ ಹಾಗೂ ಅಕ್ಕ–ತಂಗಿಯರ ದೇವಾಲಯ ದಲ್ಲಿ ನಿರ್ಮಿಸಿದ ನೂತನ ಶ್ರೀ ಶಿವ ಮಂದಿರ ಧಾರ್ಮಿಕ ಸಾಂಸ್ಕೃತಿಕ ಭವನ ಲೋಕಾರ್ಪಣೆ ಕಾರ್ಯಕ್ರಮವನ್ನು ದಿನಾಂಕ 24–10–2025 ರಂದು ಶುಕ್ರವಾರ ಮಧ್ಯಾಹ್ನ 12–30 ಗಂಟೆಗೆ ಜರುಗುವುದು.

ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶ್ರೀಷ ಬ್ರ ವೀರಭದ್ರಶಿವಾಚಾರ್ಯರು ಕಟ್ಟಿಮಠ ಕಡೆಗಂಚಿ ಕಲಬುರಗಿ ಇವರು ವಹಿಸಿಕೊಳ್ಳುವರು ಉದ್ಘಾಟನೆಯನ್ನು ಶ್ರೀಮ.ನಿ ಪ್ರ.ಸ್ವಗುರುಪಾದಲಿಂಗ ಮಹಾ ಶಿವಯೋಗಿಗಳು ಮುತ್ಯಾನ ಬಬಲಾದ ಅವರಿಂದ. ಸಮ್ಮುಖ ಶ್ರೀ ಷ ಬ್ರ ಡಾ.ರೇವಣಸಿದ್ದ ಶಿವಾಚಾರ್ಯರು ಶ್ರೀನಿವಾಸ ಸರಡಗಿ ಹಾಗೂ ಶ್ರೀ ಷ ಬ್ರಡಾ.ರಾಜಶೇಖರ ಶಿವಾಚಾರ್ಯರು

ಗೌರವ ಉಪಸ್ಥಿತಿ ಉತ್ತರ ಮತಕ್ಷೇತ್ರದ ಶಾಸಕರಾದ ಶ್ರೀಮತಿ ಖನೀಜ್ ಫಾತಿಮಾ,ಗ್ರಾಮೀಣ ಮತಕ್ಷೇತ್ರದ ಶಾಸಕರಾದ ಶ್ರೀ ಬಸವರಾಜ ಮತ್ತಿ ಮೂಡ, ಸನ್ಮಾನ್ಯ ಶ್ರೀ ಬಿ ಜಿ ಪಾಟೀಲ್ ವಿಧಾನಪರಿಷತ್ ಸದಸ್ಯರು ಕಲ್ಬುರ್ಗಿ, ಸನ್ಮಾನ್ಯ ಶ್ರೀ ಶಶಿಲ್ ಜಿ ನಮೋಶಿ ವಿಧಾನ ಪರಿಷತ್ ಸದಸ್ಯರು ಹಾಗೂ ಎಚ್ ಕೆ ಸೊಸೈಟಿ ಅಧ್ಯಕ್ಷರು, ಸನ್ಮಾನ್ಯಶ್ರೀ ಸುನಿಲ್ ವಲ್ಲ್ಯಾಪುರ ವಿಧಾನಪರಿಷತ್ ಸದಸ್ಯರು, ಶ್ರೀ ದತ್ತಾತ್ರೇಯ ಸಿ ಪಾಟೀಲ್ ಮಾಜಿ ಎಂಎಲ್ಎ, ಶ್ರೀ ಚಂದು ಪಾಟೀಲ್ ಬಿಜೆಪಿ ನಗರ ಅಧ್ಯಕ್ಷರು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಶರಣಬಸಪ್ಪ ಪಾಟೀಲ್ ಅಷ್ಟಗಿ ಶ್ರೀ ಶಿವಮಂದಿರ ಟ್ರಸ್ಟ್ ಹಾಗು ಅಕ್ಕತಂಗಿ ದೇವಾಲಯದ ಅಧ್ಯಕ್ಷರು, ಮುಖ್ಯ ಅತಿಥಿಗಳಾಗಿ ಶ್ರೀ ಪ್ರವೀಣ ಪಾಟೀಲ ಹರವಾಳ ಅಧ್ಯಕ್ಷರು ಜೆಸ್ಕಾಂ ಕಲ್ಬುರ್ಗಿ, ಮಹಾನಗರ ಪಾಲಿಕೆ ಸದಸ್ಯರ ಶ್ರೀ ದಿಗಂಬರ ನಾಡಗೌಡ, ಶ್ರೀ ಮಂಜುನಾಥ್ ಹವಾಲ್ದಾರ ಎಇಇ ಲೋಕೋಪಯೋಗಿ ಇಲಾಖೆ ಕಲಬುರ್ಗಿ, ಶ್ರೀರಾಮಚಂದ್ರ ಅವರಳ್ಳಿ ಬಿಜೆಪಿ ಮುಖಂಡರು ಕಲ್ಬುರ್ಗಿ, ಶ್ರೀ ರಾಘವೇಂದ್ರ ಭಜಂತ್ರಿ ಸಿಪಿಐ ಚೌಕ ಪೊಲೀಸ್ ಠಾಣೆ ಕಲ್ಬುರ್ಗಿ, ಶ್ರೀಮತಿ ವಾತ್ಸಲ್ಯ ಸಂಗಣ್ಣ ಊಡಗಿ ಪಿಎಸ್ಐ ರೇವೂರ ಪೊಲೀಸ್ ಠಾಣೆ, ಶ್ರೀಮತಿ ಇಂದಿರಾ ಭದ್ರಪ್ಪ ಪಾಟೀಲ್ ಡಿ ಸಿ ಆರ್ ಇ ಪೊಲೀಸ್ ಠಾಣೆ ಕಲಬುರ್ಗಿ, ವಿಕಾಸ ಅಪ್ಪಣ್ಣನವರ ಕಿರಿಯ ಅಭಿಯಂತರರು ಜೆಸ್ಕಾಂ ಕಲ್ಬುರ್ಗಿ, ವಸಂತ ಜಾಧವ ಮಾಜಿ ಮಹಾನಗರ ಪಾಲಿಕೆ ಸದಸ್ಯರು, ಶಿವಾನಂದ ರಾಠೋಡ ಉಪಾಧ್ಯಕ್ಷರು ಶ್ರೀ ಶಿವ ಮಂದಿರ ಹಾಗೂ ಅಕ್ಕತಂಗಿ ಟ್ರಸ್ಟ್ ಕಲ್ಬುರ್ಗಿ, ಸಹದೇವ ಬಿರಾದಾರ ಕಾರ್ಯದರ್ಶಿಗಳು ಶ್ರೀ ಶಿವ ಮಂದಿರ ಹಾಗೂ ಅಕ್ಕ ತಂಗಿ ಟ್ರಸ್ಟ್ ಕಲ್ಬುರ್ಗಿ, ರೇವಪ್ಪ ಸೊರಡೆ ಗೋಕುಲ ನಗರ ಗೋಪಾಲ ಪಾಲಾದಿ ಉದ್ಯಮಿದಾರರ ಕಲಬುರ್ಗಿ ಶಿವಶಂಕರ ಬಿರಾದಾರ ಹಾಗೂ ಕಲಾತಂಡದವರಿಂದ ಸಂಗೀತ ಕಾರ್ಯಕ್ರಮ ಈ ಕಾರ್ಯಕ್ರಮದ ನಿರೂಪಣೆಯನ್ನು ಶ್ರೀ ಪರಮೇಶ್ವರ ಚೀಲಿ ವರನಾಳ ಅವರಿಂದ .

ಈ ಪವಿತ್ರ ಕಾರ್ಯಕ್ರಮದಲ್ಲಿ ಬಡಾವಣೆಯ ಸದ್ಭಕ್ತರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಶಿವ ಮಂದಿರ್ ಅಕ್ಕತಂಗಿ ದೇವಾಲಯ ಟ್ರಸ್ಟ್ ಅಧ್ಯಕ್ಷರು ಉಪಾಧ್ಯಕ್ಷರು ಸರ್ವ ಸದಸ್ಯರು ಜಂಟಿಯಾಗಿ ಪತ್ರಿಕಾ ಪ್ರಕಟಣೆಗೆ ತಿಳಿಸಿರುತ್ತಾರೆ.

# ಚನ್ನಮ್ಮ ಸ್ವಾಭಿಮಾನ, ದೇಶಾಭಿಮಾನದ ಪ್ರತೀಕ:ಡಾ.ಹುಕ್ಕೇರಿ




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಕಿತ್ತೂರು ಚೆನ್ನಮ್ಮ ಸ್ವಾಭಿಮಾನ, ದೇಶಾಭಿಮಾನದ ಪ್ರತೀಕವಾಗಿದ್ದಾಳೆ. ಕಿತ್ತೂರು ನಾಡನ್ನು ಉಳಿಸಿಕೊಳ್ಳಲು ಬ್ರಿಟಿಷರ ವಿರುದ್ಧ ಹೋರಾಡಿದ ಪ್ರಥಮ ಮಹಿಳೆ, ಚೆನ್ನಮ್ಮಾಜಿಯ ಶೌರ್ಯ ಧೈರ್ಯ ಹಾಗೂ ದಿಟ್ಟತನದ ಗುಣಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಅಗತ್ಯ ಇದೆ ಎಂದು ಸ್ಥಳೀಯ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಶ್ರೀಶೈಲ ಹುಕ್ಕೇರಿ ಹೇಳಿದರು. ಗುರುವಾರ ಪಟ್ಟಣದ ದೇವರ ಹಿಪ್ಪರಗಿ ರಸ್ತೆಯ ವೀರರಾಣಿ ಕಿತ್ತೂರು ಚೆನ್ನಮ್ಮ ವೃತ್ತದಲ್ಲಿ ತಾಲೂಕ ಪಂಚಮಸಾಲಿ ಸಮಾಜದ ವತಿಯಿಂದ ಹಮ್ಮಿಕೊಂಡ ಚೆನ್ನಮ್ಮನವರ ಜಯಂತ್ಯೋತ್ಸವ ಹಾಗೂ ವಿಜಯೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪ್ರಗತಿಪರ ರೈತ ಕುಮಾರಗೌಡ ಪಾಟೀಲ, ನಿವೃತ್ತ ಶಿಕ್ಷಕ ಮಲ್ಲಿಕಾರ್ಜುನ ಹಿಪ್ಪರಗಿ ಹಾಗೂ ಸಹಕಾರಿ ಬ್ಯಾಂಕ ನಿರ್ದೇಶಕ ಡಿ.ಕೆ.ಪಾಟೀಲ ಮಾತನಾಡಿ ಚೆನ್ನಮ್ಮಾಜಿಯ ಆದರ್ಶ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜವನ್ನು ಪ್ರಗತಿಯತ್ತ ತೆಗೆದುಕೊಂಡು ಹೋಗುವ ಹೊಣೆಗಾರಿಕೆ ನಮ್ಮ ಮೇಲಿದೆ ಎಂದರು. ಕಾರ್ಯಕ್ರಮದ ಆರಂಭದಲ್ಲಿ ವೀರರಾಣಿಗೆ ಕಿತ್ತೂರು ಚೆನ್ನಮ್ಮನವರ ಭಾವಚಿತ್ರಕ್ಕೆ ಹೂಮಾಲೆ ಅರ್ಪಿಸಿ ವಿಶೇಷ ಪೂಜೆ ಸಲ್ಲಿಸಲಾಯಿತು.

ಪಂಚಮಸಾಲಿ ಸಮಾಜದ ತಾಲೂಕ ಅಧ್ಯಕ್ಷ ಡಾ.ವಿ.ಎಸ್.ಕಾರ್ಚಿ, ಸಮಾಜದ ಪ್ರಮುಖರಾದ ಕಾಶಿನಾಥ ಮುರಾಳ, ಚನಬಸ್ಸು ದೇಸಾಯಿ, ಪ್ರಭು ಬಿಳೇಭಾವಿ, ರಾಮನಗೌಡ ಬಾಗೇವಾಡಿ, ಡಿ.ವಿ.ಪಾಟೀಲ, ಮಲ್ಲಿಕಾರ್ಜುನ ಪಟ್ಟಣಶೆಟ್ಟಿ, ನಿಂಗಣ್ಣ ಕುಂಟೋಜಿ, ಅಶೋಕ ಚಿನಗುಡಿ, ಈಸು ಬಿದರಕುಂದಿ, ಜಗದೀಶ ಬಿಳೇಭಾವಿ, ನಾಗಪ್ಪ ಚಿನಗುಡಿ, ಅಶೋಕ ಜಾಲವಾದಿ, ಅಪ್ಪು ಆನೇಸೂರ, ಮುತ್ತುಗೌಡ ಪಾಟೀಲ, ಕಾಶಿನಾಥ ಅರಚಂಡಿ, ಪ್ರಕಾಶ ಸಾಸಾಬಾಳ, ಮಂಜು ಮಲೇಶ್ವರ, ಎಸ್.ಬಿ.ಬಿರಾದಾರ, ಅಪ್ಪು ಬಿದರಕುಂದಿ, ಕಾಶಿನಾಥ ಅರಳಿಚಂಡಿ, ಮತ್ತಿತರರು ಇದ್ದರು.

# ರಾಣಿ ಚನ್ನಮ್ಮ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.23– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಕಿತ್ತೂರ ರಾಣಿ ಚನ್ನಮ್ಮಳ ಜಯಂತಿಯನ್ನು ಜಿಲ್ಲಾಡಳಿತ ಭವನದಲ್ಲಿ ಚನ್ನಮ್ಮಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಆಚರಣೆ ಮಾಡಲಾಯಿತು.

ಸಂಸದ ಪಿ.ಸಿ.ಗದ್ದಿಗೌಡರ, ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ತಾಲೂಕಾ ಅಧ್ಯಕ್ಷ ಎಸ್. ಎಂ.ರಾಂಪೂರ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಸೇರಿದಂತೆ ಸಮುದಾಯ ಮುಖಂಡರು ಕಿತ್ತೂರ ರಾಣಿ ಚನ್ನಮ್ಮರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪ ಅರ್ಪಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಮುದಾಯದ ಮುಖಂಡರು ಪಾಲ್ಗೊಂಡಿದ್ದರು.

# 1.46 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.23–ಮನೆ ಬೀಗ ಮುರಿದು 1,46,600 ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಕುಸನೂರ ರಸ್ತೆಯ ಪ್ರಶಾಂತ ನಗರ (ಬಿ) ಜಿಡಿಎ ಕಾಲೋನಿಯಲ್ಲಿ ನಡೆದಿದೆ.

ಮಣಿಸಿಂಗ್ ಚವ್ಹಾಣ್ ಎಂಬುವವರ ಮನೆ ಬೀಗ ಮುರಿದು ಕಳ್ಳರು 40 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ಉಂಗುರ, 8 ಸಾವಿರ ರೂ.ಮೌಲ್ಯದ 2 ಗ್ರಾಂ.ಬಂಗಾರದ ಮೂಗಿನ ನತ್ತು, 20 ಸಾವಿರ ರೂ.ಮೌಲ್ಯದ 5 ಗ್ರಾಂ.ಬಂಗಾರದ ಕಿವಿಯೋಲೆ, 12 ಸಾವಿರ ರೂ.ಮೌಲ್ಯದ 3 ಗ್ರಾಂ.ಬಂಗಾರದ ಮಂಗಳಸೂತ್ರದಲ್ಲಿನ ಸಣ್ಣ ಗುಂಡುಗಳು, 6 ಸಾವಿರ ರೂ. ಮೌಲ್ಯದ 20 ತೊಲೆ ಬೆಳ್ಳಿಯ ಕಾಲು ಚೈನ, 600 ರೂ.ಮೌಲ್ಯದ 20 ಗ್ರಾಂ.ಬೆಳ್ಳಿ ಕಾಲುಂಗರ, 60 ಸಾವಿರ ರೂ.ನಗದು ಸೇರಿ 1.46 ಲಕ್ಷರೂ.ಮೌಲ್ಯದ ನಗನಾಣ್ಯ ಕಳವು ಮಾಡಿದ್ದಾರೆ.

ಇವರು ಮನೆಗೆ ಬೀಗ ಹಾಕಿಕೊಂಡು ಕುಟುಂಬ ಸಮೇತ ಲಕ್ಷ್ಮೀಪೂರವಾಡಿಗೆ ಹೋಗಿದ್ದಾಗ ಮನೆ ಕಳ್ಳತನವಾಗಿದೆ ಎಂದು ತಿಳಿದು ಬಂದಿದೆ. ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ನೀಲಿ ಧ್ವಜದೊಂದಿಗೆ ಪಥಸಂಚಲನ: ಅನುಮತಿ ನೀಡಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.23–ಸಂವಿಧಾನದ ಬಗ್ಗೆ ಜನಸಾಮಾನ್ಯರಿಗೆ ಅರಿವು ಮೂಡಿಸುವ ಉದ್ದೇಶದಿಂದ ಭಾರತೀಯ ದಲಿತ ಪ್ಯಾಂಥರ್ ವತಿಯಿಂದ ನವೆಂಬರ್ 2 ರಂದು ಚಿತ್ತಾಪುರ ಪಟ್ಟಣದಲ್ಲಿ ಸಂವಿಧಾನ ಪೀಠಿಕೆ ಹಾಗೂ ನೀಲಿ ಧ್ವಜದೊಂದಿಗೆ ಪಥ ಸಂಚಲನ ನಡೆಸಲು ನಿರ್ಧರಿಸಿದ್ದು, ಇದಕ್ಕೆ ಅನುಮತಿ ನೀಡಬೇಕು ಎಂದು ಸಂಘಟನೆ ರಾಜ್ಯಾಧ್ಯಕ್ಷ ಮಲ್ಲಪ್ಪ ಎಂ.ಹೊಸ್ಮನಿ, ರಾಜ್ಯ ಸಂಘಟನಾ ಕಾರ್ಯದರ್ಶಿ ಮಿಲಿಂದ ಸನಗುಂದಿ, ಜಿಲ್ಲಾ ಅಧ್ಯಕ್ಷ ರಮೇಶ ಚಿಮ್ಮಾಇದ್ಲಾಯಿ ಮನವಿ ಮಾಡಿದ್ದಾರೆ.

ಈ ಸಂಬಂಧ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿರುವ ಅವರು, ನ.2 ರಂದು ಚಿತ್ತಾಪುರ ಪಟ್ಟಣದಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ವತಿಯಿಂದ ಪಥ ಸಂಚಲನ ನಡೆಸಲು ಉದ್ದೇಶಿಸಿರುವ ಪಥ ಸಂಚಲನಕ್ಕೆ ಅನುಮತಿ ನೀಡಬಾರದು ಎಂದು ಒತ್ತಾಯಿಸಿದ್ದಾರೆ. ಈ ಪಥಸಂಚಲನದಲ್ಲಿ ಗಣವೇಶಧಾರಿಗಳು ದೊಣ್ಣೆ, ಲಾಠಿ ಹಿಡಿದು ಆಕ್ರಮಣಕಾರಿ ಪ್ರದರ್ಶನ ಮಾಡುವುದರಿಂದ ಸಾರ್ವಜನಿಕರ ಮೇಲೆ ದುಷ್ಪರಿಣಾಮ ಬೀರಲಿದೆ. ಈ ಹಿನ್ನೆಲೆಯಲ್ಲಿ ಆರೆಸ್‌ಎಸ್ ಪಥಸಂಚಲನಕ್ಕೆ ಅನುಮತಿ ನೀಡಬಾರದು ಎಂದು ಅವರು ಆಗ್ರಹಿಸಿದ್ದಾರೆ.

